ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 160
8–12–2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 159

## ಮಹಿಳೆ ಕೊಂದಿದ್ದ ರಾಟ್‌ವೀಲರ್ ನಾಯಿಗಳ ಮಾಲೀಕ ಬಂಧನ

**ದಾವಣಗೆರೆ :** ರಾಟ್‌ವೀಲರ್ ನಾಯಿಗಳ ದಾಳಿಗೆ ಮಹಿಳೆ ಸಾವು ಪ್ರಕರಣಕ್ಕೆ ಸಂಬಂಧಿಸಿದಂತೆ ನಾಯಿ ಮಾಲೀಕರ ಪತ್ತೆಗೆ ಒತ್ತಡ ಹೆಚ್ಚಳ ಬೆನ್ನಲ್ಲೇ ಇದೀಗ ಮಾಲೀಕ ಶೈಲೇಂದ್ರ ಕುಮಾರ್‌ರನ್ನು ದಾವಣಗೆರೆ ಗ್ರಾಮಾಂತರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಬಂಧಿತ ವ್ಯಕ್ತಿ ನಗರದ ಶಿವಾಲಿ ಚಿತ್ರಮಂದಿರ ಮಾಲೀಕರ ಅಳಿಯ.



ಇನ್ನು ಮಹಿಳೆ ಬಲಿ ಪಡೆದಿದ್ದ ಎರಡು ನಾಯಿಗಳು ಸಾವನ್ನಪ್ಪಿವೆ.ಶ್ವಾನಗಳ ಮಾಲೀಕರ ವಿರುದ್ಧ ಎಫ್‌ಐಆರ್ ದಾಖಲಿಸಲು ಶಾಸಕ ಕೆಎಸ್ ಬಸವಂತಪ್ಪ ಪೊಲೀಸರಿಗೆ ಸೂಚಿಸಿದ್ದರು. ಆ ಮೂಲಕ ದಾವಣಗೆರೆ ಗ್ರಾಮಾಂತರ ಠಾಣೆ ಪೊಲೀಸರು ಸಿಸಿಟಿವಿ ದೃಶ್ಯಾವಳಿ ಸಂಗ್ರಹಿಸಿ ತನಿಖೆಗೆ ಮುಂದಾಗಿದ್ದರು, ಇದೀಗ ಮಾಲೀಕನ ಬಂಧನವಾಗಿದೆ. ಬಂಧಿತ ಶೈಲೇಂದ್ರ ಕುಮಾರ್ ಹಲವು ವರ್ಷಗಳಿಂದ ರಾಟ್‌ವೀಲರ್‌ಶ್ವಾನಗಳನ್ನ ಸಾಕಿದ್ದರು. ಡಿ.5ರಂದು ಶ್ವಾನಗಳನ್ನು ಆಟೋದಲ್ಲಿ ತಂದು ಜಮೀನಿನಲ್ಲಿ ಬಿಟ್ಟುಹೋಗಿದ್ದರು. ಈ ವೇಳೆ ಮಲ್ಲಶೆಟ್ಟಿಹಳ್ಳಿ ನಿವಾಸಿ ಅನಿತಾ(38) ಎಂಬುವವರ ಮೇಲೆ ದಾಳಿ ಮಾಡಿದ್ದವು. ದಾವಣಗೆರೆ ತಾಲೂಕಿನ ಹೊನ್ನೂರು ಕ್ರಾಸ್ ಬಳಿ ಘಟನೆ ನಡೆದಿತ್ತು.

**ಶ್ವಾನಗಳು ಸಾವು :** ಮಹಿಳೆ ಬಲಿ ಪಡೆದಿದ್ದ ಎರಡು ರಾಟ್‌ವೀಲರ್ ನಾಯಿ ಸಾವನ್ನಪ್ಪಿವೆ. ಘಟನೆ ಬಳಿಕ ಗ್ರಾಮಸ್ಥರು ಹಾಗೂ ಹಂದಿ ಹಿಡಿಯುವವರು ಸೇರಿ ನಾಯಿಗಳನ್ನು ಸೆರೆಹಿಡಿಯಲಾಗಿದೆ. ಈ ವೇಳೆ ತೀವ್ರ ಅಟ್ಟಾಡಿಸಿದ್ದರಿಂದ ಆಘಾತಕ್ಕೊಳಗಾಗಿ ನಾಯಿಗಳು ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ.

# ಇಂದಿನಿಂದ ಚಳಿಗಾಲ ಅಧಿವೇಶನ

## ಆಡಳಿತ ಪಕ್ಷ ಇಕ್ಕಟ್ಟಿಗೆ ಸಿಲುಕಿಸಲು ಪ್ರತಿಪಕ್ಷಗಳು ಸಜ್ಜು

**ಬೆಂಗಳೂರು :** ಬೆಳಗಾವಿಯ ಸುವರ್ಣ ಸೌಧದಲ್ಲಿ ಇಂದಿನಿಂದ ವಿಧಾನ ಮಂಡಲದ ಚಳಿಗಾಲದ ಅಧಿವೇಶನ ಆರಂಭವಾಗಲಿದೆ. 13 ದಿನಗಳ ಕಾಲ ನಡೆಯಲಿರುವ ಕಲಾಪದಲ್ಲಿ ಆಡಳಿತ ಪಕ್ಷವನ್ನು ಇಕ್ಕಟ್ಟಿಗೆ ಸಿಲುಕಿಸಲು ಪ್ರತಿಪಕ್ಷಗಳು ಸಜ್ಜಾಗಿವೆ. ಪ್ರತಿಪಕ್ಷಗಳ ದಾಳಿಯನ್ನು ಎದುರಿಸಲು ಆಡಳಿತ ಪಕ್ಷ ಕೂಡ ಸಿದ್ದವಾಗಿದೆ.



ರಾಜ್ಯ ಸರ್ಕಾರ ಎರಡೂವರೆ ವರ್ಷಗಳ ಅಧಿಕಾರ ಅವಧಿ ಪೂರ್ಣಗೊಳಿಸಿರುವ ಬೆನ್ನಲ್ಲೇ, ನಾಯಕತ್ವ ಬದಲಾವಣೆ ವಿಚಾರ ಕಾಂಗ್ರೆಸ್ಸಿನಲ್ಲಿ ದೊಡ್ಡ ಮಟ್ಟದ ಸಂಚಲನಕ್ಕೆ ಕಾರಣವಾಗಿದೆ ಮತ್ತೊಂದು ಕಡೆ ಪ್ರತಿಪಕ್ಷ ಬಿಜೆಪಿಯಲ್ಲಿ ಕೂಡ ಪಕ್ಷದ ರಾಜ್ಯಾಧ್ಯಕ್ಷರ ಆಯ್ಕೆ ವಿಚಾರ ದೊಡ್ಡದಾಗಿ ಸದ್ದು ಮಾಡಿದೆ ಈ ರಾಜಕೀಯ ಬೆಳವಣಿಗೆಗಳ ನಡುವೆ ಕಬ್ಬು ಬೆಳೆಗಾರರ ಸಮಸ್ಯೆ, ಬೆಲೆ ಕುಸಿತದಿಂದ ಕಂಗೆಟ್ಟಿರುವ ಮುಸುಕಿನ ಜೋಳ ಬೆಳೆದ ರೈತ, ಮುಂಗಾರು ಅವಧಿಯಲ್ಲಿ ಸುರಿದ ಭಾರಿ ಮಳೆಯಿಂದ ಉತ್ತರ ಕರ್ನಾಟಕದ ಹಲವು ಪ್ರದೇಶಗಳಲ್ಲಿ ಉಂಟಾಗಿರುವ ಹಾನಿ, ಕೃಷ್ಣ ಮೇಲ್ದಂಡೆ ನೀರಾವರಿ ಯೋಜನೆ ಮಹದಾಯಿ ಮೊದಲಾದ ವಿಚಾರಗಳು ಈ ಬಾರಿಯ ಅಧಿವೇಶನದಲ್ಲಿ ದೊಡ್ಡ ಮಟ್ಟದ ಚರ್ಚೆಗೆ ಗ್ರಾಸವಾಗಲಿವೆ.

ಇದರ ಜೊತೆಯಲ್ಲಿ ದ್ವೇಷ ಭಾಷಣ ನಿಷೇಧ, ಬಹಿಷ್ಕಾರ ನಿಷೇಧ, ಮುಜರಾಯಿ ಕಾಯಿದೆ ತಿದ್ದುಪಡಿ ಸೇರಿದಂತೆ 20ಕ್ಕೂ ಹೆಚ್ಚು ಪ್ರಮುಖ ಮಸೂದೆಗಳು ಅನುಮೋದನೆಗಾಗಿ ಮಂಡನೆಯಾಗುವ ಸಾಧ್ಯತೆಯಿದೆ.

ಮಾಜಿ ಮಂತ್ರಿ ಹಾಗೂ ಹಾಲಿ ಶಾಸಕರಾಗಿದ್ದ ಎಂವೈ ಮೇಟಿ ಅವರು ಹೊಂದಿರುವ ಹಿನ್ನೆಲೆಯಲ್ಲಿ ಮೊದಲ ದಿನ ವಿಧಾನಸಭೆಯಲ್ಲಿ ಶ್ರದ್ಧಾಂಜಲಿ ಸಮರ್ಪಿಸಿ ಕಲಾಪವನ್ನು ಮರುದಿನಕ್ಕೆ ಮುಂದೂಡುವ ಸಾಧ್ಯತೆ ಇದೆ ಮಂಗಳವಾರದಿಂದ ಕಲಾಪ ಎಂದಿನಂತೆ ನಡೆಯಲಿದ್ದು ಮೊದಲ ದಿನವೇ ರಾಜ್ಯದ ರೈತರ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಬಿಜೆಪಿ ನಿರ್ವಹಿಸೂಚನೆ ಮಂಡಿಸಲು ತೀರ್ಮಾನಿಸಿದೆ.

ಪ್ರತಿ ಬಾರಿ ಅಧಿವೇಶನದಲ್ಲಿ ಮಂತ್ರಿಗಳ ಗೈರು ಹಾಜರಿ, ದೊಡ್ಡ ವಿಷಯವಾಗುತ್ತಿತ್ತು ಇದನ್ನು ತಪ್ಪಿಸುವ ದೃಷ್ಟಿಯಿಂದ ಈ ಬಾರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿವೇಶನಕ್ಕೂ ಮುನ್ನವೇ ಎಲ್ಲ ಮಂತ್ರಿಗಳೊಂದಿಗೆ ಸಭೆ ನಡೆಸಿ ಅಧಿವೇಶನ ಸಮಯದಲ್ಲಿ ತಮಗೆ ಸೂಚಿಸಿದ ಸದನದಲ್ಲಿ ಮಂತ್ರಿಗಳು ಕಡ್ಡಾಯವಾಗಿ ಹಾಜರಿರಬೇಕು ಎಂದು ತಾಕೀತು ಮಾಡಿದ್ದಾರೆ.

ವಿಧಾನ ಮಂಡಲದಲ್ಲಿ ವಿರೋಧ ಪಕ್ಷಗಳ ಟೀಕೆಗಳಿಗೆ ಆಡಳಿತ ಪಕ್ಷದ ಶಾಸಕರು ಸಚಿವರು ಒಗ್ಗಟ್ಟಿನಿಂದ ಪ್ರತಿಕ್ರಿಯಿಸಬೇಕು. ಬಿಜೆಪಿ ಮತ್ತು ಜೆಡಿಎಸ್ ಬಳಿ ಟೀಕೆ ಮಾಡಲು ಯಾವುದೇ ಪ್ರಮುಖ ವಿಚಾರಗಳಿಲ್ಲ. ಹೀಗಾಗಿ ಅಧಿಕಾರ ಹಂಚಿಕೆಯ ಗೊಂದಲಗಳನ್ನೇ ಪ್ರಮುಖ ಅಸ್ತ್ರಗಳನ್ನಾಗಿ ಮಾಡಿಕೊಳ್ಳುವ ಸಾಧ್ಯತೆಯಿದೆ. ಅದಕ್ಕೆ ಆಡಳಿತ ಪಕ್ಷದ ಶಾಸಕರು ವಿವಾದಿತ ಹೇಳಿಕೆಗಳನ್ನು ನೀಡಿ, ಉರಿಯುವ ಬೆಂಕಿಗೆ ತುಪ್ಪ ಸುರಿಯುವಂತೆ ಮಾಡಬಾರದೆಂಬ ಸಂದೇಶವನ್ನು ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ರವಾನಿಸಿದ್ದಾರೆ.

ವಿರೋಧ ಪಕ್ಷಗಳು ಈ ಬಾರಿಯ ಅಧಿವೇಶನದಲ್ಲಿ ಕೋಮುವಾದದ ವಿಚಾರಗಳನ್ನು ಪ್ರಸ್ತಾಪಿಸಿ ಗದ್ದಲ ಉಂಟು ಮಾಡಲು ಯತ್ನಿಸಿದರೆ ಅದ–ಕ್ಕೆ ಚಿಕ್ಕಮಗಳೂರಿನ ಸಖರಾಯಪಟ್ಟಣದಲ್ಲಿ ನಡೆದಿರುವ ಕಾಂಗ್ರೆಸ್ ಕಾರ್ಯಕರ್ತ ಗಣೇಶ ಅವರ ಹತ್ಯೆ ಪ್ರಕರಣವನ್ನು ಮುಂದಿಟ್ಟುಕೊಂಡು ತಿರುಗೇಟು ನೀಡಲು ತಯಾರಿಗಳಾಗಿವೆ. ಗಣೇಶ್ ಹತ್ಯೆ ಪ್ರಕರಣದಲ್ಲಿ ಬಜರಂಗದಳದ ಕಾರ್ಯಕರ್ತ ಭಾಗಿಯಾಗಿರುವ ಆರೋಪವಿದೆ.

### ಸುವರ್ಣಸೌಧ ಸುತ್ತ ಬಿಗಿ ಭದ್ರತೆ

ಇನ್ನು ಅಧಿವೇಶನದ ಸಮಯದಲ್ಲಿ ವಿವಿಧ ಸಂಘಟನೆಗಳು ತಮ್ಮ ಬೇಡಿಕೆಗಳ ಬಗ್ಗೆ ಗಮನ ಸೆಳೆಯಲು ವಿವಿಧ ರೀತಿಯ ಹೋರಾಟಕ್ಕೆ ತೀರ್ಮಾನಿಸಿವೆ ಜೊತೆಗೆ ಮಹಾರಾಷ್ಟ್ರ ಏಕೀಕರಣ ಸಮಿತಿ ಮಹಾಮೇಳಾವ್ ನಡೆಸಲು ತೀರ್ಮಾನಿಸಿದೆ ಆದರೆ ರಾಜ್ಯ ಸರ್ಕಾರ ಈ ಮಹಾಮೇಳಾವ್ ಗೆ ಅನುಮತಿ ನೀಡಿಲ್ಲ ಇದನ್ನು ವಿರೋಧಿಸಿ ಎಂಇಎಸ್ ಕಾರ್ಯಕರ್ತರು ಪ್ರತಿಭಟನೆಗೆ ಮುಂದಾಗಿದ್ದಾರೆ. ಈ ಹಿನ್ನೆಲೆಯಲ್ಲಿ ವಿಧಾನಸೌಧ ಮತ್ತು ಬೆಳಗಾವಿಯಲ್ಲಿ ಭದ್ರತೆಯ ಪ್ರಮಾಣ ಹೆಚ್ಚಿಸಲಾಗಿದೆ

## ಗೋವಾ ನೈಟ್ ಕ್ಲಬ್‌ನಲ್ಲಿ ಭೀಕರ ಅಗ್ನಿ ದುರಂತ

# 25 ಮಂದಿ ಸಜೀವ ದಹನ



**ಪಣಜಿ:** ಉತ್ತರ ಗೋವಾದ ಅರ್ಪೋರಾದಲ್ಲಿರುವ ರೋಮಿಯೋ ಲೇನ್‌ನ ಪ್ರಸಿದ್ಧ ನೈಟ್‌ಕ್ಲಬ್ ಬಿರ್ಚ್‌ನಲ್ಲಿ ಭೀಕರ ಅಗ್ನಿ ದುರಂತ ಸಂಭವಿಸಿದ್ದು, ಘಟನೆಯಲ್ಲಿ ಪ್ರವಾಸಿಗರು ಸೇರಿರಿ 25 ಮಂದಿ ಸಜೀವದಹನಗೊಂಡಿರುವ ಘಟನೆ ಶನಿವಾರ ರಾತ್ರಿ ನಡೆದಿದೆ.

ದುರ್ಘಟನೆಯಲ್ಲಿ 50 ಮಂದಿಕ್ಕೂ ಹೆಚ್ಚು ಗಾಯಗ–ೊಂಡಿದ್ದಾರೆಂದು ತಿಳಿದುಬಂದಿದ್ದು, ಎಲ್ಲರೂ ಗೋವಾದ ವೈದ್ಯಕೀಯ ಕಾಲೇಜಿನಲ್ಲಿ ಚಿಕಿತ್ಸೆ ಪಡೆ–ಯುತ್ತಿದ್ದಾರೆ. ಮೃತರಲ್ಲಿ ಮೂರರಿಂದ ನಾಲ್ಕು ಮಂದಿ ಪ್ರವಾಸಿಗರು ಮತ್ತು ಕ್ಲಬ್‌ನ 19 ಸಿಬ್ಬಂದಿ ಸೇರಿದ್ದಾ–ರೆಂದು ಹೇಳಲಾಗುತ್ತಿದೆ.ಶನಿವಾರ ತಡರಾತ್ರಿ ಘಟನೆ ಸಂಭವಿಸಿದ್ದು, ಅಡುಗೆ ಮನೆಯಲ್ಲಿ ಸಿಲಿಂಡರ್ ಸ್ಫೋಟವಾಗಿರಬಹುದು ಎಂದು ಶಂಕಿಸಲಾಗಿತ್ತು. ಆದರೆ, ಇನ್ನೂ ಯಾವುದೇ ದೃಢೀಕರಣಗಳು ಲಭ್ಯವಾಗಿಲ್ಲ.

ಸ್ಫೋಟದ ತೀವ್ರತೆ ಎಷ್ಟು ಪ್ರಬಲವಾಗಿತ್ತೆಂದರೆ, ಬೆಂಕಿಯ ಜ್ವಾಲೆಗಳು ಕೆಲವೇ ಸೆಕೆಂಡುಗಳಲ್ಲಿ ಇಡೀ ಕಟ್ಟಡವನ್ನು ಆವರಿಸಿಕೊಂಡಿತ್ತು. ತಪ್ಪಿಸಿಕೊಳ್ಳಲು ಒಳಗಿರುವವರಿಗೆ ತುಂಬಾ ಕಡಿಮೆ ಸಮಯ ಇತ್ತು ಎನ್ನಲಾಗಿದೆ. ಈ ನಡುವೆ ಮೃತರ ಶವಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದ್ದು, ಗಾಯಗೊಂಡವರ ಸಂಖ್ಯೆ ಮತ್ತು ಸ್ಥಿತಿಯ ಕುರಿತು ಅಧಿಕೃತ ವಿವರಗಳು ಇನ್ನೂ ಲಭ್ಯವಿಲ್ಲ. ಮೂಲಗಳ ಪ್ರಕಾರ ಸಾವಿನ ಸಂಖ್ಯೆ ಮತ್ತಷ್ಟು ಏರಿಕೆಯಾಗುವ ಸಾಧ್ಯತೆಗಳಿವೆ ಎಂದು ಹೇಳಲಾಗುತ್ತಿದೆ.

ಏತನ್ಮಧ್ಯೆ ನೈಟ್‌ಕ್ಲಬ್ ಅನ್ನು ಸದ್ಯಕ್ಕೆ ಸೀಲ್ ಮಾಡಲಾಗಿದ್ದು, ಮಾಲೀಕರು ಮತ್ತು ಆಡಳಿತ ಮಂಡಳಿಯನ್ನು ಪೊಲೀಸರು ವಿಚಾರಣೆ ಗೊಳಪಡಿಸಿದ್ದಾರೆ. ಮೂಲಗಳ ಪ್ರಕಾರ, ಕ್ಲಬ್ ಮಾಲೀಕರು ಅಗ್ನಿ ಸುರಕ್ಷತಾ ಮಾನದಂಡಗಳನ್ನು ಪಾಲಿಸಿರಲಿಲ್ಲ ಎನ್ನಲಾಗುತ್ತಿದೆ.

## ಬೆಂಗಳೂರು ನಿಮ್ಹಾನ್ಸ್‌ಗೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಭೇಟಿ: ಸಮಗ್ರ ಪರಿಶೀಲನೆ

**ದಾವಣಗೆರೆ :** ಬೆಂಗಳೂರಿನಲ್ಲಿರುವ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ (ನಿಮ್ಹಾನ್ಸ್) ಸದಸ್ಯೆಯಾಗಿರುವ ದಾವಣಗೆರೆ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ಆಸ್ಪತ್ರೆಗೆ ಭೇಟಿ ನೀಡಿ ವೈದ್ಯಕೀಯ ಸೌಕರ್ಯಗಳು, ರೋಗಿ ಸೇವೆಗಳು ಹಾಗೂ ಕಾರ್ಯವೈಖರಿಗಳ ಬಗ್ಗೆ ಸಮಗ್ರ ಪರಿಶೀಲನೆ ನಡೆಸಿದರು.

ಭೇಟಿಯ ಸಂದರ್ಭದಲ್ಲಿ ತುರ್ತುನಿಗಾ ಘಟಕ, ವಾರ್ಡ್‌ಗಳು ಹಾಗೂ ಆಪರೇಷನ್ ಯೂನಿಟ್‌ಗಳನ್ನು ಪರಿಶೀಲಿಸಿ, ಚಿಕಿತ್ಸಾ ಗುಣಮಟ್ಟ ಮತ್ತು ಸಿಬ್ಬಂದಿ ಕಾರ್ಯಪದ್ಧತಿಯನ್ನು ವೀಕ್ಷಿಸಿದರು. ನಂತರ ಟ್ರಾಮಾ ಕೇರ್ ಯೂನಿಟ್, ಡೈಯಾಗ್ನೋಸ್ಟಿಕ್ ಸೆಂಟರ್ ಹಾಗೂ ಆಧುನಿಕ ತಂತ್ರಜ್ಞಾನ ಅಳವಡಿಕೆಯ ಘಟಕಗಳ ಕಾರ್ಯವೈಖರಿಯನ್ನೂ ಅವಲೋಕಿಸಿದರು.

ಆಸ್ಪತ್ರೆಯಲ್ಲಿ ದಾಖಲಾಗಿರುವ ರೋಗಿಗಳೊಂದಿಗೆ ಸಂಸದರು ನೇರವಾಗಿ ಮಾತುಕತೆ ನಡೆಸಿ, ಅವರ ಅನುಭವಗಳು ಮತ್ತು ಅಗತ್ಯಗಳನ್ನು ಆಲಿಸಿದರು. ತಜ್ಞ ವೈದ್ಯರು, ಆಸ್ಪತ್ರೆಯ ನಿರ್ವಾಹಕ ತಂಡ ಹಾಗೂ ಸಿಬ್ಬಂದಿಗಳೊಂದಿಗೆ ಮಾತನಾಡಿ, ಚಿಕಿತ್ಸಾ ಸೇವೆಗಳ ಸುಧಾರಣೆಗಾಗಿ ವಿವರವಾದ ಚರ್ಚೆ ಮಾಡಿದರು.



ರೋಗಿ ಕೇಂದ್ರಿತ ಸೇವೆ, ನಿಖರವಾದ ರೋಗನಿರ್ಣಯ ಸೌಲಭ್ಯಗಳು ಮತ್ತು ಪರಿಣಾಮಕಾರಿಯಾದ ಆರೋಗ್ಯ ಸೇವೆಗಳನ್ನು ಇನ್ನಷ್ಟು ಬಲಪಡಿಸುವ ಅಗತ್ಯತೆಯನ್ನು ತಿಳಿಸಿದರು. ಆಸ್ಪತ್ರೆಯ ವಿವಿಧ ಘಟಕಗಳಲ್ಲಿ ಗುಣಮಟ್ಟದ ಮಾನದಂಡಗಳನ್ನು ವೃದ್ಧಿಸುವ ಬಗ್ಗೆ ಸೂಕ್ತ ಸಲಹೆಗಳು ನೀಡಿದರು

ಸಂಸ್ಥೆಯ 28 ನೇ ಘಟಿಕೋತ್ಸವದಲ್ಲಿ ಭಾಗವಹಿಸಿದ ಸಂದರ್ಭದಲ್ಲಿ ಸಂಸದರು ಆಸ್ಪತ್ರೆಗೆ ಭೇಟಿನೀಡಿದ್ದರು

## ಪತ್ರ ಬರಹಗಾರರ ಸಭೆ; ಡಿ.16ಕ್ಕೆ ಬೆಳಗಾವಿ ಚಲೋ ನಿರ್ಣಯ

**ದಾವಣಗೆರೆ:** ಕರ್ನಾಟಕ ರಾಜ್ಯ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಪರವಾನಿಗೆ ಪಡೆದ ದಸ್ತು ಪತ್ರ ಬರಹಗಾರರ ಒಕ್ಕೂಟದಿಂದ ಭಾನುವಾರ ಇಲ್ಲಿನ ಚೇತನ ಹೋಟೆಲ್ ನಲ್ಲಿ ರಾಜ್ಯ ಪತ್ರ ಬರಹಗಾರರ ವಿವಿಧ ಬೇಡಿಕೆಗಳ ಈಡೇರಿಸುವಂತೆ ಒತ್ತಾಯಿಸಿ ನಡೆದ ಸಭೆಯಲ್ಲಿ ಡಿ. 16ರಂದು ಬೆಳಗಾವಿ ಚಲೋ ಸೇರಿ ವಿವಿಧ ನಿರ್ಣಯಗಳನ್ನು ಕೈಗೊಳ್ಳಲಾಯಿತು.

ರಾಜ್ಯ ಪತ್ರ ಬರಹಗಾರರ ಅಸ್ತಿತ್ವಕ್ಕಾಗಿ ಹಾಗೂ ರಾಜ್ಯದ ಎಲ್ಲಾ ಪತ್ರ ಬರಹಗಾರರಿಗೆ ಡೀಡ್ ರೈಟರ್ ಲಾಗಿನ್ ಹಾಗೂ ಎಲ್ಲಾ ನೋಂದಣಿ ದಾಸ್ತಾವೇಜುಗಳಿಗೆ ಬಿ ಕಾಲಂ ಕಡ್ಡಾಯಗೊಳಿಸುವಂತೆ ಕಳೆದ ವರ್ಷದಿಂದ ಸಂಬಂಧ ಪಟ್ಟ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಅಧಿಕಾರಿಗಳಿಗೆ ಮತ್ತು ಸಚಿವರುಗಳಿಗೆ ಮನವಿ ಸಲ್ಲಿಸಿದ್ದರು ಸಹ ಇದುವರೆಗೂ ಯಾವುದೇ ಬೇಡಿ–ಕೆ ಈಡೇರಿಸದೆ ಇರುವುದನ್ನು ಸಭೆಯಲ್ಲಿ ಖಂಡಿಸಲಾಯಿತು.

ಕಾವೇರಿ 1.0 ಮತ್ತು ಕಾವೇರಿ 2.0 ಇಂದ ಇನ್ನು ಮುಂದುವರೆದು ಕಾವೇರಿ 3.0 ನೋಂದಣಿ ಕಾರ್ಯಕ್ಕೆ ಮುಂದಾಗಿದ್ದು ಇದ–ರಿಂದ ಸಾರ್ವಜನಿಕರ ನೋಂದಣಿ ಆಸ್ತಿಗಳಿಗೆ ಭದ್ರತೆ ಕಡಿಮೆಯಾಗುತ್ತದೆ. ಪತ್ರ ಬರಹಗಾರರಿಗೆ ಇನ್ನಿಲ್ಲದ ಸಮಸ್ಯೆ ಉಂಟಾಗುತ್ತದೆ ಈ ಬಗ್ಗೆ ಸರ್ಕಾರ ಯಾವುದೇ ಕೈಪಿಡಿ ಹೊರಡಿಸದೆ ಏಕ ಪಕ್ಷೀಯ ನಿರ್ಧಾರ ಮತ್ತು ಬದಲಾವಣೆಗಳನ್ನು ತರುತ್ತಿದೆ ಎಂದು ಸಭೆಯಲ್ಲಿ ಆಕ್ಷೇಪಿಸಲಾಯಿತು.

ಸರ್ಕಾರದ ಧೋರಣೆ ಖಂಡಿಸಿ ಮತ್ತು ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಡಿ. 16ರಂದು ಬೆಳಗಾವಿ ಚಲೋ ಕಾರ್ಯಕ್ರಮ ಹಮ್ಮಿಕೊಂಡಿದ್ದು ಬೆಳಗಾವಿಯ ಸುವರ್ಣ ಸೌಧದ ಮುಂದೆ ಧರಣಿ ಕೂರುವುದು ಇದಕ್ಕೂ ಸರ್ಕಾರ ಸ್ಪಂದಿಸದೆ ಇದ್ದಲ್ಲಿ ನ್ಯಾಯಾಲಯದ ಮೊರೆ ಹೋಗುವುದು, ರಾಜ್ಯದ್ಯಂತ ಎಲ್ಲ ಉಪನೋಂದಣಿ ಕಚೇರಿಗಳಲ್ಲಿ ಒಂದು ದಿವಸ ಲೇಖನಿ ಸ್ಥಗಿತ ಧರಣಿ ನಡೆಸುವ ಕುರಿತು ನಿರ್ಣಯಗಳನ್ನು ಕೈಗೊಳ್ಳಲಾಯಿತು.

ಸಭೆಯ ಅಧ್ಯಕ್ಷತೆಯನ್ನು ರಾಜ್ಯ ಒಕ್ಕೂಟದ ಅಧ್ಯಕ್ಷರಾದ ಡಿ.ಕೆ ಸಂಗಮೇಶ್ ಎಲಿಗಾರ್ ವಹಿಸಿದ್ದರು. .ರಾಜ್ಯ ಒಕ್ಕೂಟದ ಉಪಾಧ್ಯಕ್ಷರುಗಳಾದ ಎನ್ ನವೀನ್ ಕುಮಾರ್, ಬಸವರಾಜ್ ಪಿ ಲಕ್ಷ್ಮೇಶ್ವರ, ಶಾಂತರಾಜ್ ಪಿ ಪೋಳ್ ಹಾಗೂ ರಾಜ್ಯ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಧರ್ಮರಾಜ್ ವಿ ಏಕಬೋಟೆ, ಖಜಾಂಚಿ ಡಿ.ಆರ್ ಗಿರಿರಾಜು, ಕೃಷ್ಣಮೂರ್ತಿ, ವಿನೋದ ಗೌಡ ಸಿ ಪಾಟೀಲ್, ರುಕ್ಮಿಣಿ ಛಲವಾದಿ, ಶಶಿಧರ್ ರಂಜಣಗಿ, ರಘುನಾಥ, ನಜೀರ್ ಅಹ್ಮದ್, ಫಕ್ರುದ್ದೀನ್ ಡಾಂಬಳೆ, ಎಂಎಸ್ ನರಸಿಂಹಮೂರ್ತಿ, ಕೇಶವಮೂರ್ತಿ, ವಿಶ್ವಾಸ ಸುಣಧೋಳಿ, ಜಯಕುಮಾರ್, ಗುರುನಾಥ ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು.

## ಮೆಕ್ಕೆ ಜೋಳ ಖರೀದಿ ಹೆಚ್ಚಳಕ್ಕೆ ರಾಜ್ಯ ಸರ್ಕಾರದಿಂದ ಮಹತ್ವದ ನಿರ್ಧಾರ

**ಬೆಂಗಳೂರು :** ರಾಜ್ಯ ಸರ್ಕಾರವೂ ಮೆಕ್ಕೆ ಜೋಳ ಬೆಳೆ ಬೆಳೆಯುವ ರೈತರಿಗೆ ಗುಡ್ ನ್ಯೂಸ್ ನೀಡಿದೆ...ಪ್ರತಿ ರೈತರಿಂದ ಖರೀದಿಸುವ ಮೆಕ್ಕೆಜೋಳದ ಗರಿಷ್ಠ ಮಿತಿಯನ್ನು 20 ಕ್ವಿಂಟಾಲ್‌ನಿಂದ 50 ಕ್ವಿಂಟಾಲ್‌ಗೆ ಹೆಚ್ಚಿಸಿ ದಿನಾಂಕ 02.12.2025 ರಂದು ತಿದ್ದುಪಡಿ ಆದೇಶ ಹೊರಡಿಸಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದಲ್ಲಿ ಹಾಗೂ ಕೃಷಿ ಸಚಿವ ಎನ್ .ಚಲುವರಾಯಸ್ವಾಮಿಯವರ ವಿಶೇಷ ಕಾಳಜಿ ಹಾಗೂ ಪ್ರಯತ್ನದಿಂದ ಸಂಕಷ್ಟದಲ್ಲಿದ್ದ ಮೆಕ್ಕೆ ಜೋಳ ಬೆಳೆಯುವ ರೈತರ ಪರವಾಗಿ ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ..



ಪ್ರತಿ ಎಕರೆಗೆ 12 ಕ್ವಿಂಟಾಲ್ ಲೆಕ್ಕದಲ್ಲಿ ಗರಿಷ್ಠ 20.00 ಕ್ವಿಂಟಾಲ್ ಮೆಕ್ಕೆಜೋಳವನ್ನು ಮಾತ್ರ ಬೆಂಬಲ ಬೆಲೆ ರೂ. 2400.00 ಪ್ರತಿ ಕ್ವಿಂಟಾಲ್ ದರದಲ್ಲಿ ಖರೀದಿಸಲು ಈ ಹಿಂದೆ ಆದೇಶ ಹೊರಡಿಸಲಾಗಿತ್ತು..

ಇದೀಗ ಈ ಮಿತಿಯನ್ನು 50.00 ಕ್ವಿಂಟಾಲ್‌ಗೆ ಏರಿಕೆ ಮಾಡುವ ಮೂಲಕ ಸಣ್ಣ ಮತ್ತು ಮಧ್ಯಮ ರೈತರಿಗೆ ದೊಡ್ಡ ಪ್ರಮಾಣದಲ್ಲಿ ತಮ್ಮ ಉತ್ಪನ್ನವನ್ನು ಬೆಂಬಲ ಬೆಲೆಯಲ್ಲಿ ಮಾರಾಟ ಮಾಡುವ ಅವಕಾಶ ಕಲ್ಪಿಸಲಾಗಿದೆ.

FRUITS ತಂತ್ರಾಂಶದಲ್ಲಿ ನೋಂದಾಯಿತವಾಗಿರುವ ರೈತರ ಜಮೀನು ವಿಸ್ತೀರ್ಣದ ಆಧಾರದ ಮೇಲೆಯೇ ಈ ಗರಿಷ್ಠ ಮಿತಿ ನಿಗದಿಪಡಿಸಲಾಗುತ್ತದೆ. ಜೊತೆಗೆ ಡಿಸ್ಟಿಲರಿಗಳ ಸಮೀಪದಲ್ಲಿರುವ ಕಂಅಖ (ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು) ಮೂಲಕ ಖರೀದಿಗೆ ಆದ್ಯತೆ ನೀಡಲಾಗುವುದು ಎಂದು ತಿದ್ದುಪಡಿ ಆದೇಶದಲ್ಲಿ ಸ್ಪಷ್ಟಪಡಿಸಲಾಗಿದೆ.

ರೈತರು ಹಾಗೂ ರೈತ ಸಂಘಟನೆಗಳ ಮನವಿ ಹಿನ್ನಲೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದ್ದು, ಸಾವಿರಾರು ಮೆಕ್ಕೆಜೋಳ ಬೆಳೆಗಾರ ರೈತರಿಗೆ ನೇರ ಲಾಭವಾಗಲಿದ್ದು, ಮಾರುಕಟ್ಟೆಯಲ್ಲಿ ಕಡಿಮೆ ಬೆಲೆಗೆ ಮಾರಾಟ ಮಾಡುವ ಸ್ಥಿತಿಯಿಂದ ರಕ್ಷಣೆ ದೊರೆಯಲಿದೆ ಎಂದು ರೈತ ಮುಖಂಡರು ಸಂತಸ ವ್ಯಕ್ತಪಡಿಸಿದ್ದಾರೆ. ಈ ತಿದ್ದುಪಡಿ ಆದೇಶವನ್ನು ಎಲ್ಲ ಕಂಅಖ, ತಾಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ತಕ್ಷಣ ಜಾರಿಗೆ ತರಬೇಕೆಂದು ಸರ್ಕಾರ ಸೂಚಿಸಿದೆ.

### ಜಿಲ್ಲಾ ಟಾಸ್ಕ್ ಪೋರ್ಸ್ ಸಭೆಯಲ್ಲಿ

## ಡಿಸ್ಟಿಲರಿಗಳ ಎಥೆನಾಲ್ ಉತ್ಪಾದನೆಗೆ ಮೆಕ್ಕೆಜೋಳ ಖರೀದಿಸಲು ಅಗತ್ಯ ಸಿದ್ಧತೆಗೆ ಕ್ರಮ ವಹಿಸಿ : ಡಿಸಿ

**ದಾವಣಗೆರೆ :** ಕೇಂದ್ರ ಸರ್ಕಾರದ ಬೆಂಬಲ ಬೆಲೆಯಡಿ ಧಾನ್ಯ ಆಧಾರಿತ ಎಥನಾಲ್ ಉತ್ಪಾದಿಸುವ ಡಿಸ್ಟಿಲರಿಗಳ ಮೂಲಕ ಮೆಕ್ಕೆಜೋಳ ಖರೀದಿಗೆ ಅಗತ್ಯ ಸಿದ್ದತೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧಸ್ವಾಮಿ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಆಯೋಜಿಸಲಾಗಿದ್ದ ಟಾಸ್ಕ್‌ಪೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪ್ರಸಕ್ತ ಸಾಲಿಗೆ ಮುಂಗಾರು ಹಂಗಾಮಿನ ಅವಧಿಯಲ್ಲಿ ಜಿಲ್ಲೆಯದ್ಯಂತ ಅತೀ ಹೆಚ್ಚು ಮೆಕ್ಕೆಜೋಳ ಬೆಳೆಯಲಾಗಿದೆ. ಅದರಂತೆ ಕೇಂದ್ರ ಸರ್ಕಾರವು ಪ್ರತಿ ಕ್ವಿಂಟಾಲ್‌ಗೆ ರೂ.2400 ಬೆಂಬಲ ಬೆಲೆ ಘೋಷಿಸಿದ್ದು, ಪ್ರತಿ ರೈತರಿಂದ 20 ಕ್ವಿಂಟಾಲ್ ಜೋಳ ಖರೀದಿಸಲು ಅವಕಾಶ ಕಲ್ಪಿಸಲಾಗಿದೆ. ಆದುದರಿಂದ ಎಪಿಎಂಸಿಗೆ ಪ್ರತಿದಿನ 3 ಸಾವಿರ ಕ್ವಿಂಟಾಲ್ ಆವಕವಾಗುತ್ತಿವೆ. ಬೆಂಬಲ ಬೆಲೆ ಘೋಷಣೆಯಾದ ನಂತರ ಜಿಲ್ಲೆಯ ಕೃಷಿ ಮಾರುಕಟ್ಟೆಗಳಲ್ಲಿ ಪ್ರಸ್ತುತ ಪ್ರತಿ ಕ್ವಿಂಟಾಲ್‌ಗೆ ರೂ.1600 ರಿಂದ 1900ರ ವರೆಗೆ ಮಾರಾಟವಾಗುತ್ತಿದೆ.



ಧಾನ್ಯ ಆಧಾರಿತ ಎಥನಾಲ್ ಉತ್ಪಾದಿಸುವ ಡಿಸ್ಟಲರಿಗಳನ್ನು ಸಂಪರ್ಕಿಸಿ ಹತ್ತಿರದ ಪಿಸಿಎಸ್‌ಗಳ ಮೂಲಕ ಎಥನಾಲ್‌ಗೆ ಅಗತ್ಯಕ್ಕೆ ತಕ್ಕಂತೆ ಖರೀದಿಗೆ ತ್ವರಿತವಾಗಿ ಕ್ರಮವಹಿಸುವುದರ ಜತೆಗೆ ರೈತರಿಂದ ಖರೀದಿಸಿದ ಧಾನ್ಯಗಳ ಗುಣಮಟ್ಟ ಕಾಯ್ದುಕೊಳ್ಳಬೇಕು. ಅಬಕಾರಿ ಇಲಾಖೆ, ಸಹಕಾರ ಮಂಡಳವು ಜಿಲ್ಲೆಯಲ್ಲಿನ ಎಥನಾಲ್ ಉತ್ಪಾದಿಸುವ ಡಿಸ್ಟಿಲರಿಗಳನ್ನು ಸಂಪರ್ಕಿಸಿ ಖರೀದಿಗೆ ಬೇಕಾಗುವ ಅಂಕಿಅಂಶಗಳನ್ನು ಸಂಗ್ರಹಿಸಲು ಸೂಚನೆ ನೀಡಿದರು.

ಸಭೆಯಲ್ಲಿ ಆಹಾರ ಮತು ನಾಗರೀಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಕೆ.ಪಿ.ಮಧುಸೂದನ್, ಅಬಕಾರಿ ಉಪ ಆಯುಕ್ತ ಜುನ್ಯೆದ್, ಸಹಕಾರ ಇಲಾಖೆ ಉಪನಿಬಂಧಕ ಮಧು ಶ್ರೀನಿವಾಸ್, ಸೇರಿದಂತೆ ಮತ್ತಿತರರು ಇದ್ದರು.

### ಕಾಂಗ್ರೆಸ್ ಕಾರ್ಯಕರ್ತ ಗಣೇಶ್ ಮರ್ಡರ್ ಕೇಸ್

## ಬಜರಂಗದಳ ಕಾರ್ಯಕರ್ತ ಬಂಧನ



**ಬೆಂಗಳೂರು:** ಕಾಂಗ್ರೆಸ್ ಕಾರ್ಯಕರ್ತ ಗಣೇಶ್ ಕೊಲೆ ಪ್ರಕರಣದಲ್ಲಿ ಬಜರಂಗ ದಳ ಕಾರ್ಯಕರ್ತನೊಬ್ಬನನ್ನು ಪೊಲೀಸರು ಭಾನುವಾರ ಬಂಧನಕ್ಕೊಳಪಡಿಸಿದ್ದಾರೆ.

ಗಣೇಶ್ ಗೌಡ(38) ಕೊಲೆಯಾದವರು. ಇವರು ಸಖರಾಯಪಟ್ಟಣ ಗ್ರಾಪಂ ಸದಸ್ಯರಾಗಿದ್ದರು. ಪ್ರಕರಣಕ್ಕೆ ಸಂಬಂಧಿಸಿ ಆರೋಪಿಗಳಾದ ಸಂ–ಜಯ್, ಭೂಷಣ್, ಮಿಥುನ್ ಎಂಬವರು ಸೇರಿದಂತೆ ಬಿಜೆಪಿ, ಬಜರಂಗದಳದ ಐವರು ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದಿದ್ದರು.

ಇದೀಗ ಪ್ರಕರಣದಲ್ಲಿ ಮಿಥುನ್ ಪಾತ್ರ ಇರುವುದು ದೃಢಪಟ್ಟ ಹಿನ್ನೆಲೆ ಆತನನ್ನು ಬಂಧಿಸಲಾಗಿದ್ದು, ಚಿಕ್ಕಮಗಳೂರು ನಗರದ ನ್ಯಾಯಾಧೀಶರ ನಿವಾಸದಲ್ಲಿ ಹಾಜರುಪಡಿಸಲಾಗಿದೆ. ಆರೋಪಿಯನ್ನು ನ್ಯಾಯಾಂಗ ವಶಕ್ಕೆ ನೀಡಿ ನ್ಯಾಯಾಧೀಶರು ಆದೇಶಿಸಿದ್ದಾರೆ.

ಗಣೇಶ್ ಹತ್ಯೆಯಲ್ಲಿ ಎ6 ಆಗಿರುವ ಮಿಥುನ್ ಎ1 ಸಂಜಯ್ ಸ್ನೇಹಿತನಾಗಿದ್ದಾನೆ. ಈತ ಆರ್‌ಎಸ್‌ಎಸ್ ಮತ್ತು ಬಜರಂಗದಳದಲ್ಲಿ ಸಕ್ರಿಯ ಕಾರ್ಯಕರ್ತನಾಗಿದ್ದಾನೆಂದು ಹೇಳಲಾಗುತ್ತಿದೆ.

ಪ್ರಕರಣ ಸಂಬಂಧ ಎ1 ಸಂಜಯ್ ಮತ್ತು ಎ3 ನಾಗಭೂಷಣ್‌ನನ್ನು ಪೊಲೀಸರು ಈಗಾಗಲೇ ಬಂಧಿಸಿದ್ದು, ಎ2 ನಿತಿನ್, ಎ4 ದರ್ಶನ್ ಹಾಗೂ ಅಜಯ್‌ಗಾಗಿ ಹುಡುಕಾಟ ಮುಂದುವರಿದಿದೆ. ಗಣೇಶ್ ಹತ್ಯೆ ಬಳಿಕ ಈ ಮೂವರು ಆರೋಪಿಗಳು ತಲೆಮರೆಸಿಕೊಂಡಿದ್ದಾರೆ.

ಸಖರಾಯಪಟ್ಟಣದಲ್ಲಿ ಎರಡು ದಿನಗಳ ಹಿಂದೆ ದತ್ತ ಜಯಂತಿಯ ಬ್ಯಾನರ್ ತೆರವು ವಿಚಾರವಾಗಿ ಎರಡು ತಂಡಗಳ ಮಧ್ಯೆ ಗಲಾಟೆ ನಡೆದಿತ್ತು. ಇದೇ ವಿಚಾರವಾಗಿ ಈ ತಂಡಗಳ ಮಧ್ಯೆ ಶುಕ್ರವಾರ ರಾತ್ರಿಯೂ ಸಖರಾಯಪಟ್ಟಣ ಬಾರ್ ಬಳಿ ಗಲಾಟೆ ನಡೆದಿತ್ತು. ಇದಾಗಿ ಅರ್ಧ ಗಂಟೆಯ ಬಳಿಕ ಸಖರಾಪಟ್ಟಣದ ಸಮೀಪದ ಕಲ್ಮುರುಡೇಶ್ವರ ಮಠದ ಬಳಿ ಗಣೇಶ್ ಗೌಡರನ್ನು ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿದ್ದರು.ಕಲ್ಮರಡಿ ಮಠದ ರಸ್ತೆಯಲ್ಲಿ ಗಣೇಶ್ ಕಾರಿನಲ್ಲಿ ತೆರಳುತ್ತಿದ್ದಾಗ ಬೈಕಿನಲ್ಲಿ ಅಡ್ಡಗಟ್ಟಿದ ಎಂಟು ಮಂದಿಯಿದ್ದ ಹಂತಕರ ತಂಡ ಅವರ ಮೇಲೆ ಮಾರಕಾಸ್ತ್ರಗಳಿಂದ ಮಾರಣಾಂತಿಕ ದಾಳಿ ಮಾಡಿದೆ. ಇದರಿಂದ ಗಂಭೀರವಾಗಿ ಗಾಯಗೊಂಡ ಅವರು ಸ್ಥಳದಲ್ಲೇ ಕೊನೆಯುಸಿರೆಳೆದಿದ್ದರು. ಘಟನೆ ಬಳಿಕ ಆರೋಪಿಗಳ ಪತ್ತೆಗೆ ಚಿಕ್ಕಮಗಳೂರು ಎಸ್‌ಪಿ ವಿಕ್ರಮ್ ನೇತೃತ್ವದಲ್ಲಿ 4 ತಂಡ ರಚಿಸಿ ಶೋಧ ನಡೆಸಲಾಗಿತ್ತು.

## ರಾಶಿ ಭವಿಷ್ಯ

### ಮೇಷ ರಾಶಿ

ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ಸ್ವಲ್ಪ ಹೆಚ್ಚು ಹಣ ಮಾಡಲು ನಿಮ್ಮ ನವೀನ ಕಲ್ಪನೆಯನ್ನು ಬಳಸಿ. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ನಿಮ್ಮ ಸಂಗಾತಿಯ ಚಿತ್ತ ಚೆನ್ನಾಗಿರುವಂತೆ ಕಾಣದಿದ್ದರಿಂದ ವಿಷಯಗಳನ್ನು ಸರಿಯಾಗಿ ನಿರ್ವಹಿಸಿ. ಇಂದು ವಿಶ್ರಾಂತಿ ಪಡೆಯಲು ಸಮಯವಿಲ್ಲ ಬಾಕಿಯಿರುವ ಕೆಲಸಗಳು ನಿಮ್ಮನ್ನು ವ್ಯಸ್ತವಾಗಿಡುತ್ತವೆ

### ವೃಷಭ ರಾಶಿ

ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ನಿಮ್ಮ ಹೆಚ್ಚುವರಿ ಹಣವನ್ನು ಒಂದು ಸುರಕ್ಷಿತ ಸ್ಥಳದಲ್ಲಿರಿಸಿ ಹಾಗೂ ಇದು ಮುಂದಿನ ಕಾಲದಲ್ಲಿ ನಿಮಗೆ ಒಳ್ಳೆಯ ಆದಾಯ ತರುತ್ತದೆ. ನಿಮ್ಮ ಹೆಂಡತಿಯ ಜಜೊತೆ ಪ್ರವಾಸಕ್ಕೆ ಹೋಗಲು ಒಳ್ಳೆಯ ದಿನ. ಇದು ನಿಮ್ಮ ಮನಸ್ಥಿತಿಯನ್ನು ಬದಲಾಯಿಸುವುದಷ್ಟೇ ಅಲ್ಲದೇ ನಿಮ್ಮ ತಪ್ಪು ತಿಳುವಳಿಕೆಗಳನ್ನೂ ಹೋಗಲಾಡಿಸುತ್ತದೆ.

### ಮಿಥುನ ರಾಶಿ

ರಕ್ತದೊತ್ತಡವಿರುವ ರೋಗಿಗಳು ತಮ್ಮ ರಕ್ತದೊತ್ತಡ ಕಡಿಮೆ ಮಾಡಲು ಮತ್ತು ಕೊಲೆಸ್ಟರಾಲ್ ನಿಯಂತ್ರಣದಲ್ಲಿರಿಸಲು ಕೆಂಪು ವೈನ್ ತೆಗೆದುಕೊಳ್ಳಬಹುದು. ಇದು ಅವರಿಗೆ ಮತ್ತಷ್ಟು ವಿಶ್ರಾಂತಿ ತರುತ್ತದೆ. ಇಂದು ನೀವು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು ಆದರೆ ಇದರ ಹೊರತಾಗಿಯೂ ನಿಮ್ಮ ಆರ್ಥಿಕ ಭಾಗವು ಬಲವಾಗಿರುತ್ತದೆ ಸ್ನೇಹಿತರು ಮತ್ತು ಅಪರಿಚಿತರಿಬ್ಬರ ಬಗೆಗೂ ಎಚ್ಚರದಿಂದಿರಿ.

### ಕರ್ಕ ರಾಶಿ

ನೀವು ಸಾಮಾನ್ಯವಾಗಿ ಇರುವುದಕ್ಕಿಂತ ಕಡಿಮೆ ಚೈತನ್ಯವನ್ನು ಇಂದು ಕಾಣುತ್ತೀರಿ ನಿಮ್ಮ ಮೇಲೆ ನೀವೇ ಹೆಚ್ಚುವರಿ ಕೆಲಸಕ್ಕೆ ಒತ್ತಡ ಹೇರಬೇಡಿ – ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ನಿಮ್ಮ ಕೆಲಸಗಳನ್ನು ಇನ್ನೊಂದು ದಿನಕ್ಕೆ ವರ್ಗಾಯಿಸಿ. ಇಂದು ನಿಮ್ಮ ಆಪ್ತರೊಂದಿಗೆ ಜಗಳವಾಗಬಹುದು ಮತ್ತು ವಿಷಯ ನ್ಯಾಯಾಲಯ ಕಚೇರಿಯ ವರೆಗೂ ಹೋಗಬಹುದು.ಇದರ ಕಾರಣದಿಂದ ನಿಮ್ಮ ವಿಶೇಷ ಹಣ ಖರ್ಚಾಗಬಹುದು. ನೆರೆಮನೆಯವರ ಜೊತಗಿನ ಜಗಳ ನಿಮ್ಮ ಮನಸ್ಸು ಕೆಡಿಸುತ್ತದೆ. ಆದರೆ ನಿಮ್ಮ ಸಹನೆ ಕಳೆದುಕೊಳ್ಳಬೇಡಿ, ಏಕೆಂದರೆ ಇದು ಬೆಂಕಿಗೆ ತುಪ್ಪ ಸುರಿಯುತ್ತದೆ.

### ಸಿಂಹ ರಾಶಿ

ನೀವು ಇಂದು ಆರಾಮವಾಗಿ ವಿಶ್ರಾಂತಿ ಪಡೆಯಬೇಕು ನೀವು ಆನಂದಿಸುವ ಮತ್ತು ಆಸಕ್ತಿಗಳು ಮತ್ತು ವಿಷಯಗಳಲ್ಲಿ ತೊಡಗಿಕೊಳ್ಳಿ. ಇಂದು ಯಾವುದೇ ವಿರುದ್ಧ ಲಿಂಗದ ಸಹಾಯದಿಂದ ನೀವು ವ್ಯಾಪರ ಅಥವಾ ಉದ್ಯೋಗದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ. ನಿಮ್ಮ ಅತಿಯಾದ ಜೀವನಶೈಲಿ ಮನೆಯಲ್ಲಿ ಆತಂಕ ಸೃಷ್ಟಿಸಬಹುದು ಆದ್ದರಿಂದ ತಡರಾತ್ರಿಯನ್ನು ಹಾಗೂ ಇತರರ ಮೇಲೆ ಬಹಳ ಖರ್ಚು ಮಾಡುವುದನ್ನು ತಪ್ಪಿಸಿ.

### ಕನ್ಯಾ ರಾಶಿ

ನೀವು ವ್ಯಾಯಾಮದ ಮೂಲಕ ನಿಮ್ಮ ತೂಕವನ್ನು ನಿಯಂತ್ರಿಸಬಹುದು. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ಪ್ರಣಯ ನಿಮ್ಮ ಹೃದಯ ಮತ್ತು ಮನಸ್ಸನ್ನು ಆಳುತ್ತದೆ. ಸ್ಪರ್ಧಾತ್ಮಕ ಪರೀಕ್ಷೆಗೆ ಹೋಗುತ್ತಿರುವವರು ಶಾಂತವಾಗಿರಬೇಕು.

### ತುಲಾ ರಾಶಿ

ಕೆಲವು ಅನಿವಾರ್ಯ ಸಂದರ್ಭಗಳು ನಿಮಗೆ ಅಹಿತಕರವೆನಿಸಬಹುದು. ಆದರೆ ನೀವು ನಿಮ್ಮ ಸಮತೋಲನ ಕಾಯ್ದುಕೊಳ್ಳಬೇಕು ಮತ್ತು ಪರಿಸ್ಥಿತಿಯನ್ನು ನಿಭಾಯಿಸಲು ತಕ್ಷಣವೇ ಪ್ರತಿಕ್ರಿಯಿಸಬಾರದು. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ಪ್ರೇಮಿಗಳು ಕುಟುಂಬದ ಭಾವನೆಗಳ ಬಗ್ಗೆ ತುಂಬ ಕಾಳಜಿ ಹೊಂದಿರುತ್ತಾರೆ.

### ವೃಶ್ಚಿಕ ರಾಶಿ

ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ನಿಮ್ಮ ಕುಟುಂಬದ ಕಲ್ಯಾಣಕ್ಕಾಗಿ ಕೆಲಸ ಮಾಡಿ. ನಿಮ್ಮ ಕಾರ್ಯಗಳು ದುರಾಶೆಯಿಂದಲ್ಲದೇ ಪ್ರೀತಿ ಮತ್ತು ಸಕಾರಾತ್ಮಕ ದೃಷ್ಟಿಯಿಂದ ನಡೆಯಬೇಕು. ನಿಮ್ಮ ಪ್ರೀತಿಯನ್ನು ಅಮೂಲ್ಯ ವಸ್ತುಗಳಂತೆ ಹೊಸತನದಿಂದಿಡಿ.

### ಧನು ರಾಶಿ

ಇಂದು ನೀವು ಆರಾಮವಾಗಿರಬೇಕು ಹಾಗೂ ನಿಕಟ ಸ್ನೇಹಿತರು ಮತ್ತು ಕುಟುಂಬದ ಎಲ್ಲಾ ಸದಸ್ಯರನ್ನು ಸಂತೋಷವಾಗಿರಿಸಲು ಪ್ರಯತ್ನಿಸಬೇಕು. ಬಹಳ ಪ್ರಯೋಜನಕಾರಿ ದಿನವಲ್ಲ– ಆದ್ದರಿಂದ ನಿಮ್ಮ ಹಣದ ಪರಿಸ್ಥಿತಿಯನ್ನು ಪರಿಶೀಲಿಸಿ ಮತ್ತು ನಿಮ್ಮ ವೆಚ್ಚಗಳ ಮೇಲೆ ಮಿತಿ ಹೇರಿ. ಶಿಶುವಿನ ಅನಾರೋಗ್ಯ ನಿಮ್ಮನ್ನು ವ್ಯಸ್ತವಾಗಿಡುತ್ತದೆ. ನೀವು ತಕ್ಷಣ ಗಮನ ನೀಡುವ ಅಗತ್ಯವಿರುತ್ತದೆ. ನಿಮ್ಮಿಂದ ಸ್ವಲ್ಪ ಉದಾಸೀನತೆಯೂ ಸಮಸ್ಯೆಯನ್ನು ಉಲ್ಬಣಗೊಳಿಸುವುದರಿಂದ ಸರಿಯಾದ ಸಲಹೆ ತೆಗೆದುಕೊಳ್ಳಿ.

### ಮಕರ ರಾಶಿ

ವಿಶೇಷವಾಗಿ ಹೊರಗಿಟ್ಟ ಆಹಾರ ತಿನ್ನುವಾಗ ವಿಶೇಷ ಮುನ್ನೆಚ್ಚರಿಕೆ ತೆಗೆದುಕೊಳಬೇಕು. ಆದರೆ ಅನಗತ್ಯ ಒತ್ತಡ ಕೇವಲ ನಿಮಗೆ ಮಾನಸಿಕ ಉದ್ವೇಗ ಉಂಟುಮಾಡುತ್ತದೆ. ಹಣಕಾಸಿನಲ್ಲಿ ಸುಧಾರಣೆ ದೀರ್ಘಕಾಲದಿಂದ ಬಾಕಿಯಿರುವ ನಿಮ್ಮ ಬಾಕಿಗಳು ಮತ್ತು ಬಿಲ್ಲುಗಳನ್ನು ಪಾವತಿಸುವುದನ್ನು ಅನುಕೂಲಕರವಾಗಿಸುತ್ತದೆ. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ನಿಮ್ಮ ಪ್ರೇಮಿಯ ಜೊತೆ ಹೊರಹೋದಾಗ ನಿಮ್ಮ ರೂಪ ಮತ್ತು ವರ್ತನೆಯಲ್ಲಿ ನೈಜತೆಯಿರಲಿ.

### ಕುಂಭ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ಮನೆಯಲ್ಲಿನ ಕೆಲವು ಬದಲಾವಣೆಗಳು ನಿಮ್ಮನ್ನು ಭಾವುಕರನ್ನಾಗಿಸಬಹುದು– ಆದರೆ ನಿಮಗೆ ಮುಖ್ಯವಾದವರಿಗೆ ನೀವು ನಿಮ್ಮ ಭಾವನೆಗಳನ್ನು ಪರಿಣಾಮಕಾರಿಯಾಗಿ ಹೇಳಲು ಸಾಧ್ಯವಾಗುತ್ತದೆ.

### ಮೀನ ರಾಶಿ

ನಿಮಗೇನು ಒಳ್ಳೆಯದೆಂದು ನಿಮಗೆ ಮಾತ್ರ ಗೊತ್ತು – ಆದ್ದರಿಂದ ದೃಢವಾಗಿರಿ ಮತ್ತು ಧೈರ್ಯಶಾಲಿಗಳಾಗಿರಿ ಮತ್ತು ತಕ್ಷಣದ ನಿರ್ಧಾರಗಳನ್ನು ತೆಗೆದುಕೊಳ್ಳಿ ಹಾಗೂ ಫಲಿತಾಂಶಗಳಿಗೆ ಸಿದ್ಧವಾಗಿರಿ. ಆರ್ಥಿಕ ಜೀವನದ ಸ್ಥಿತಿ ಇಂದು ಉತ್ತಮವಾಗಿದೆ ಎಂದು ಹೇಳಲಾಗುವುದಿಲ್ಲ, ಇಂದು ನಿಮ್ಮನ್ನು ಉಳಿಸಲು ನಿಮಗೆ ಕಷ್ಟವಾಗಬಹುದು.

# ಸಿದ್ಧಶ್ರೀ ರಾಷ್ಟ್ರೀಯ ಚಲನಚಿತ್ರೋತ್ಸವ ಪೂರ್ವಭಾವಿ ಸಭೆ

**ಸಿದ್ಧನಕೊಳ್ಳ :** ಬಾಗಲಕೋಟ ಜಿಲ್ಲೆಯ ಇಲಕಲ್ಲ ತಾಲೂಕಿನ ಐತಿಹಾಸಿಕ ಸ್ಥಳ ಐಹೊಳೆ ಹತ್ತಿರದ ಸುಕ್ಷೇತ್ರ ,ಉತ್ತರ ಕರ್ನಾಟಕದ ಕಲಾಪೋಷಕರ ಮಠ ಸಿದ್ಧನಕೊಳ್ಳದ ಸಿದ್ಧಶ್ರೀ ರಾಷ್ಟ್ರೀಯ ಉತ್ಸವ ಹಾಗೂ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ–2026 ಜ.14, 15 ಮತ್ತು 16 ರಂದು ಜರುಗಲಿದ್ದು ಜ.14ರಂದು ರಾಷ್ಟ್ರೀಯ ಪ್ರಶಸ್ತಿ ಪುರಸ್ಕಾರ, ಜ.15ರಂದು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ,ಜ.16ರಂದು ಜಾತ್ರಾಮಹೋತ್ಸವ ಸಮಾರೋಪ ಜರುಗಲಿದೆ ಎಂದು ಧರ್ಮಾಧಿಕಾರಿಗಳಾದ ಡಾ.ಶಿವಕುಮಾರ ಸ್ವಾಮೀಜಿ ತಿಳಿಸಿದ್ದಾರೆ.

ಸಿದ್ಧನಕೊಳ್ಳದ ಶ್ರೀಮಠದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಶ್ರೀಗಳು, ಸಿದ್ಧಶ್ರೀ ಉತ್ಸವದಲ್ಲಿ ಸಹಸ್ರಾರು ಭಕ್ತರು ಸೇರುತ್ತಿದ್ದು ಸಂಗೀತ, ನೃತ್ಯ, ಸಾಂಸ್ಕೃತಿಕ ಮನರಂಜನಾ



ಕಾರ್ಯಕ್ರಮಗಳು ನೆರವೇರುತ್ತವೆ. ರಾಜ್ಯ, ಹೊರರಾಜ್ಯಗಳ ವಿವಿಧ ಸಾಧಕರು, ಪ್ರತಿಭಾನ್ವಿತ ಉದಯೋನ್ಮುಖ ಕಲಾಪ್ರತಿಭೆಗಳಿಗೂ ವೇದಿಕೆ ನೀಡಿ ಪ್ರೋತ್ಸಾಹಿಸಲಾಗುತ್ತದೆ. ಪ್ರತಿವರ್ಷದಂತೆ ಈ ವರ್ಷವೂ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಹಮ್ಮಿಕೊಳ್ಳಲಾಗುತ್ತಿದ್ದು ಈಗಾಗಲೇ ಚಿತ್ರೋತ್ಸವ ಆಯ್ಕೆ ಸಮಿತಿ ರಚಿಸಲಾಗಿದೆ. ಚಲನಚಿತ್ರ ಪತ್ರಕರ್ತರಾದ ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ, ಜ್ಯೂ.ಉಪೇಂದ್ರ ವೀರೇಶ ಪುರವಂತ, ಚಲನಚಿತ್ರ ಕಲಾವಿದರಾದ ಸಂಗನಗೌಡ್ರು ಕುರುಡಗಿ, ಚಲನಚಿತ್ರ ನಿರ್ದೇಶಕ ಅರವಿಂದ ಮುಳಗುಂದ, ಚಲನಚಿತ್ರ ನಿರ್ದೇಶಕ, ನಿರ್ಮಾಪಕ ಲೋಕೇಶ ವಿದ್ಯಾಧರ, ಚಲನಚಿತ್ರ ಕಲಾವಿದೆ ಶ್ರೀಮತಿ ಸುನಂದಾ ಕಲ್ಬುರ್ಗಿ, ಭರತನಾಟ್ಯ ಕಲಾವಿದೆ ಕೃತ್ತಿಕಾ ಕಾರ್ಯ ನಿರ್ವಹಿಸಲಿದ್ದಾರೆ. ನಿರ್ಮಾಪಕರು, ನಿರ್ದೇಶಕರು, ಕಲಾವಿದರು, ಇನ್ನೂ ಬಿಡುಗಡೆಯಾಗದ ತಮ್ಮ 2025ರಲ್ಲಿ ನಿರ್ಮಾಣವಾದ, ಆಗುತ್ತಿರುವ ಹೊಸ ಚಲನಚಿತ್ರಗಳ, ಟೆಲಿಫಿಲ್ಮ್, ಕಿರುಚಿತ್ರಗಳ, ಟ್ರೈಲರ್, ಟೀಸರ್ ಮತ್ತು ಪೋಸ್ಟರ್‌ಗಳನ್ನು ಬಿಡುಗಡೆ ಮಾಡಬಹುದು. ಯಾವುದೇ ಪ್ರವೇಶ ಶುಲ್ಕವಿಲ್ಲದೆ ಉಚಿತ ಅವಕಾಶ ಕಲ್ಪಿಸಲಾಗಿದೆ. ಭಾಗವಹಿಸಿದ ಚಲನಚಿತ್ರ ತಂಡಗಳಿಗೆ ಅಭಿನಂದನಾ ಪತ್ರ, ನೆನಪಿನ ಸ್ಮರಣಿಕೆ, ಕಿರುಚಿತ್ರ ತಂಡಗಳಿಗೆ ಅಭಿನಂದನಾ ಪತ್ರಗಳನ್ನು ನೀಡಲಾಗುತ್ತದೆ. ಆಸಕ್ತಿತರು ಡಿಸೆಂಬರ್ 31 ರೊಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು. ನಂತರ ಬಂದವರಿಗೆ ಅವಕಾಶ ಇರುವುದಿಲ್ಲ. ಶ್ರೀಗಳ ಮತ್ತು ಆಯ್ಕೆ ಸಮಿತಿ ತೀರ್ಮಾನವೇ ಅಂತಿಮ. ಆಯ್ಕೆಯಾದವರಿಗೆ ನಂತರ ತಿಳಿಸಲಾಗುತ್ತದೆ. ತಮ್ಮ ಟೀಸರ್, ಟ್ರೈಲರ್, ಪೋಸ್ಟರ್‌ಗಳನ್ನು ಡಾ.ಪ್ರಭು ಗಂಜಿಹಾಳ. ವಾಟ್ಸಪ್ ನಂ–9448775346 ಇಲ್ಲಿಗೆ ಕಳುಹಿಸಬೇಕು. ಹೆಚ್ಚಿನ ಮಾಹಿತಿಗಾಗಿ ಚಲನಚಿತ್ರೋತ್ಸವ ವಿಭಾಗದ ಡಾ.ಪ್ರಭು ಗಂಜಿಹಾಳ–ಮೊ.9448775346, ಡಾ.ವೀರೇಶ ಹಂಡಿಗಿ–ಮೊ.9060933596, ವೀರೇಶ ಪುರವಂತ–ಮೊ.7026062364, ಸಂಗನಗೌಡ್ರು ಕುರುಡಗಿ–ಮೊ.8861811128 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಶ್ರೀಗಳು ತಿಳಿಸಿದ್ದಾರೆ, ಪತ್ರಿಕಾಗೋಷ್ಠಿಯಲ್ಲಿ ಡಾ.ಪ್ರಭು ಗಂಜಿಹಾಳ, ಸಂಗನಗೌಡ ಕುರುಡಗಿ, ವೀರೇಶ ಪುರವಂತರ, ವೀರಭದ್ರೇಶ್ವರಸ್ವಾಮಿ ಲಿಂಗಸೂರು,ಕರವೇ ಅಧ್ಯಕ್ಷ ಅಶೋಕ ಪೂಜಾರ, ವೀಣಾ ಹಿರೇಮಠ ,ಚಲನಚಿತ್ರ ನಿರ್ದೇಶಕರಾದ ಲೋಕೇಶ ವಿದ್ಯಾಧರ, ಶಿವರಾಜು,ಸ್ಟೈಲ್ ಶಶಿ, ಸಂಗಮೇಶ ಹುದ್ದಾರ, ಮೈಲಾರಗೌಡ ಗೌಡಪ್ಪಗೌಡರ ಮೊದಲಾದವರು ಉಪಸ್ಥಿತರಿದ್ದರು.

# ಕನ್ನಡ ರಾಜ್ಯೋತ್ಸವ ಸಂಭ್ರಮ



**ಹಾವೇರಿ :**ಪ್ರಗತಿ ಪರ ಕೃಷಿಕರು, ಸಮಾಜ ಸೇವಕರು,ಕಲಾ ಪೋಷಕರು ಹಾಗೂ ಬಡವರ ಬಂಧುಗಳಾದ ಪರಶುರಾಮ ಹರ್ಲಾಪುರ ಅವರಿಗೆ ಹಸಿರೇ ಉಸಿರು ಟ್ರಸ್ಟ್(ರಿ)ಬೆಟ್ಟಹಲಸೂರು ಸಂಸ್ಥೆಯ ವತಿಯಿಂದ ಕನ್ನಡ ರಾಜ್ಯೋತ್ಸವ ಸಂಭ್ರಮ–2025ನೇ ರಾಜ್ಯ ಮಟ್ಟದ ಕರುನಾಡು ಕೃಷಿರತ್ನ ರಾಜ್ಯ ಪ್ರಶಸ್ತಿ ನೀಡಿದೆ.

ರಾಜ್ಯದಲ್ಲಿ ಟ್ರಸ್ಟ್ ವತಿಯಿಂದ ಶೈಕ್ಷಣಿಕ,ಧಾರ್ಮಿಕ,ಸಾಮಾಜಿಕ,ವೈದ್ಯಕೀಯ, ಸಂಗೀತ, ಸಾಹಿತ್ಯ,ಚಿತ್ರಕಲೆ,ನೃತ್ಯ,ಹೀಗೆ ವಿವಿಧ ಕ್ಷೇತ್ರದ ಸಾಧಕರನ್ನು ಗುರುತಿಸಿ ಪ್ರಶಸ್ತಿಯನ್ನು ನೀಡಿ ಗೌರಸಲಾಗುತ್ತಿದೆ ಎಂದು ಟ್ರಸ್ಟ್ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಬೆಟ್ಟಹಲಸೂರು ಡಾ.ಶ್ರೀನಿವಾಸಮೂರ್ತಿ ಅವರು ತಿಳಿಸಿದ್ದಾರೆ.ನನ್ನ ಕೃಷಿ ಹಾಗೂ ಸೇವಾ ಕಾರ್ಯಗಳನ್ನು ಗುರುತಿಸಿ ಕರುನಾಡು ಕೃಷಿರತ್ನ ಪ್ರಶಸ್ತಿ ನೀಡಿದ ಹಸಿರೇ ಉಸಿರು ಟ್ರಸ್ಟ್(ರಿ)ರಾಜ್ಯಾಧ್ಯಕ್ಷರಿಗೆ ಹಾಗೂ ಎಲ್ಲಾ ಪದಾಧಿಕಾರಿಗಳಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ ಹಾಗೂ ಈ ಪ್ರಶಸ್ತಿ ಕೃಷಿ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಇನ್ನೂ ಹೆಚ್ಚು ಶ್ರಮಿಸಲು ಸ್ಫೂರ್ತಿಯಾಗಲಿದೆ ಎಂದು ಶ್ರಮಜೀವಿಗಳಾದ ಪರಶುರಾಮ ಹರ್ಲಾಪುರ ಅವರು ಕೃತಜ್ಞೆಯನ್ನು ಸಲ್ಲಿಸಿದರು.

# ಡಾ.ಬಿ.ಆರ್.ಅಂಬೇಡ್ಕರ್‌ರವರ 69 ನೇ ಪರಿನಿರ್ವಾಣ ದಿನಾಚರಣೆ



**ದಾವಣಗೆರೆ:** ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಭಾರತ ರತ್ನ, ಸಂವಿಧಾನ ಶಿಲ್ಪಿ, ಮಹಾಮಾನವತವಾದಿ ಡಾ.ಬಿ.ಆರ್. ಅಂಬೇಡ್ಕರ್ ರವರ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ 69ನೇ ಪರಿನಿರ್ವಾಣ ದಿನಾಚರಣೆ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಜಿ.ಪಂ. ಸಿಇಓ ಗಿತ್ತೆ ಮಾಧವ ವಿಠಲ ರಾವ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಸಿದ್ದಲಿಂಗೇಶ್ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಮುದಾಯದ ಮುಖಂಡರು ಇದ್ದರು.

# ಅತಿಥಿ ಉಪನ್ಯಾಸಕರು ರಾಜ್ಯಾದ್ಯಂತ ಲಕ್ಷಾಂತರ ವಿದ್ಯಾರ್ಥಿಗಳಲ್ಲಿ ಜ್ಞಾನದ ಸುದೆ ಹರಿಸಿದ ಶ್ರೇಯಸ್ಸು

ಗದಗ:ಕಾಲೇಜು ಶಿಕ್ಷಣ ಇಲಾಖೆ ಸೇವೆಯಲ್ಲಿ ಇರುವವರನ್ನು ಮುಂದು ವರೆಸಬೇಕು ಮತ್ತು ವಿವಿಧ ಬೇಡಿಕೆ ಇಡೇರಿಸುವಂತೆ ಆಗ್ರಹಿಸಿ ರಾಜ್ಯ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದಿಂದ ನಗರದಲ್ಲಿ ನಡೆಯುತ್ತಿರುವ ಅತಿಥಿ ಉಪನ್ಯಾಸಕರ ಧರಣಿ ಸತ್ಯಾಗ್ರಹ 13ನೇ ದಿನಕ್ಕೆ ಕಾಲಿಟ್ಟಿದ್ದು.

ನಿವೃತ್ತ ಪ್ರಾಚಾರ್ಯರಾದ ಡಾ.ಡಿ.ಬಿ.ಗವಾನಿ ಅವರು ಬೆಂಬಲ ವ್ಯಕ್ತಪಡಿಸಿ ಮಾತನಾಡಿ ಅತಿಥಿ ಉಪನ್ಯಾಸಕರು 1991ರಿಂದ ಇಲ್ಲಿಯವರೆಗೆ ಶಿಕ್ಷಣ ಕ್ಷೇತ್ರಕ್ಕ ದೊಡ್ಡಕೊಡುಗೆ ನೀಡಿದ ಶ್ರೇಯಸ್ಸು ಇವರದಾಗಿದೆ. ಭೋದನೆ ಮಾಡುವವರ ಸಂಖ್ಯೆ ಬೆರಳೆಣಿಕೆಯಷ್ಟು ಇತ್ತು ಅಂದಿನಿಂದ ಇಲ್ಲಿಯವರೆಗೆ ರಾಜ್ಯಾದ್ಯಂತ ಲಕ್ಷಾಂತರ ವಿದ್ಯಾರ್ಥಿಗಳಲ್ಲಿ ಜ್ಞಾನದ ಸುದೆ ಹರಿಸಿದ ಶ್ರೇಯಸ್ಸು ಇವರದು ಇಂದು ಬೀದಿಯಲ್ಲಿ ನ್ಯಾಯ ನೀಡಿ ಎಂದು




ಹೇಳುತ್ತಿರುವುದು ಬಹಳ ನೂವು ತರುವಂತಹ ವಿಚಾರವಾಗಿದೆ. ಅವರ ಸೇವೆಯನ್ನು ಗೌರವಿಸಿ ನ್ಯಾಯಯುತ ಹಕ್ಕುಗಳನ್ನು ನೀಡುವುದು ಸರ್ಕಾರದ ಕರ್ತವ್ಯ ಎಂದು ಹೇಳಿದರು.

ಶೈಕ್ಷಣಿಕ ಹೋರಾಟಗಾರರಾದ ದಾನು ದಾನಪ್ಪಗೌಡರ ಮತ್ತು ರಮೇಶ ಸಜ್ಜಗಾರ ಕೂಡ ಪ್ರತಿಭಟನಾಕಾರರಿಗೆ ಧೈರ್ಯ ತುಂಬಿ ಮಾತನಾಡಿದ ಅವರು ಅತಿಥಿ ಉಪನ್ಯಾಸಕರ ಹೋರಾಟ ನ್ಯಾಯಸಮ್ಮತವಾಗಿದ್ದು ಸರ್ಕಾರ ತಕ್ಷಣವೇ ಸ್ಪಂದಿಸಬೇಕು ಎಂದು ಆಗ್ರಹಿಸಿದರು.

ಹೋರಾಟದಲ್ಲಿ ರಾಜ್ಯಧ್ಯಕ್ಷ ಹನಮಂತಗೌಡ ಕಲ್ಮನಿ, ಬಾಗಲಕೋಟೆ, ಶಿರಸಿ, ಬದಾಮಿ, ಕುಂದಗೊಳ, ಯಲ್ಲಾಪುರ, ಮುಂಡಗೋಡ, ಗುಳೇದಗುಡ್ಡ, ಇಳಕಲ್ಲ, ಧಾರವಾಡ, ಗದಗ ಸೇರಿ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ ನೂರಾರು ಅತಿಥಿ ಉಪನ್ಯಾಸಕರು ಇದ್ದರು.

# ಗಡ್ಡೇ ರಾಮೇಶ್ವರ ದೇವರ ಕದಳಿ ಕಾರ್ತೀಕ ದೀಪೋತ್ಸವ

**ನ್ಯಾಮತಿ :** ನ್ಯಾಮತಿ ತಾಲೂಕಿನ ಕುರುವ ,ಗೋವಿನಕೋವಿ ಮತ್ತು ರಾಂಪುರ ಗ್ರಾಮಗಳ ಹಾಗೂ ತುಂಗಾ ಭದ್ರಾ ನದಿಯ ಮಧ್ಯೆಯ ನಡುಗಡ್ಡೆ ಪುಣ್ಯಕ್ಷೇತ್ರವಾದ ಗಡ್ಡೇ ರಾಮೇಶ್ವರ ದೇವರ , ಗಡ್ಡೇ ರಾಮೇಶ್ವರ ದೇವರ , ಕದಳಿ ಕಾರ್ತೀಕ ದೀಪೋತ್ಸವ ಶುಕ್ರವಾರ ಸಂಜೆ ಗೋವಿನಕೋವಿ ಶ್ರೀ ಹಾಲಸ್ವಾಮೀಜಿ ಮಠದ ಶ್ರೀ ಸದ್ಗುರು ಶಿವಯೋಗಿ ವಿಶ್ವಾರಾಧ್ಯ ಮಹಾಲಿಂಗ ಹಾಲಸ್ವಾಮೀಜಿಯ ಸಮ್ಮುಖದಲ್ಲಿ ಜರುಗಿತು.

ಗೋಧೋಳಿ ಸಮಯದಿಂದ ಕಾರ್ತೀಕ ದೀಪೋತ್ಸವ ಪ್ರಯುಕ್ತ ಗಡ್ಡೇ ರಾಮೇಶ್ವರ ದೇವರ , ಗವಿ ಶ್ರೀ ಸದ್ಗುರು ಶಿವಯೋಗಿ ಹಾಲಸಿದ್ದೇಶ್ವರ ಹಾಲಸ್ವಾಮೀಜಿಯ , ಶ್ರೀ ಗಣಪತಿ , ಶ್ರೀ ದುರ್ಗಮ್ಮ , ಶ್ರೀ ಕಾಲಭೈರವ , ಶ್ರೀ ಬಸವಣ್ಣ ವಿಗ್ರಹಕ್ಕೆ ಪಂಚಾಮೃತ ಅಭಿಷೇಕ , ರುದ್ರಾಭಿಷೇಕ, ಅರ್ಚನೆ, ಸ್ತೋತ್ರಪಠಣ , ಶಿಲಾಮೂರ್ತಿಗಳಿಗೆ ವಿಶೇಷ ಅಲಂಕಾರ ಮುಂತಾದ ಧಾರ್ಮಿಕ ಕೈಂಕರ್ಯದ ಮಹಾಮಂಗಳಾರತಿಯ ಬಳಿಕ ಕದಳಿ ಕಾರ್ತೀಕ ದೀಪೋತ್ಸವವನ್ನು ಗೋವಿನಕೋವಿ ಶ್ರೀ ಹಾಲಸ್ವಾಮೀಜಿ ಮಠದ ಶ್ರೀ ಸದ್ಗುರು ಶಿವಯೋಗಿ ವಿಶ್ವಾರಾಧ್ಯ ಮಹಾಲಿಂಗ ಹಾಲಸ್ವಾಮೀಜಿ ದೀಪಗಳನ್ನು ಹಚ್ಚುವ ಮೂಲಕ ಚಾಲನೆ ನೀಡಿದರು.




ಕಾಲುವೇಹಳ್ಳಿ , ಅಲದಹಳ್ಳಿ ,ಚಟ್ನಹಳ್ಳಿ , ಕಂಚುಗಾರನಹಳ್ಳಿ , ಲಿಂಗಾಪುರ , ಮಾರಶೆಟ್ಟಿಹಳ್ಳಿ , ಅರೆಹಳ್ಳಿ , ಕುರುವ , ಗೋವಿನಕೋವಿ , ರಾಂಪುರ ಸುತ್ತಮುತ್ತಲಿನ ಹಳ್ಳಿಯ ನೂರಾರು ಭಕ್ತರು ನದಿಯನ್ನು ದಾಟಿ ಬಂದಿದ್ದ ಸಾವಿರಾರು ಭಕ್ತರು ಕದಳಿ ಕಾರ್ತೀಕ ದೀಪೋತ್ಸವದ ದೀಪಕ್ಕೆ ಎಣ್ಣೆ , ಬತ್ತಿ , ಹೂವು , ಹಣ್ಣು , ಕಾಯಿ , ಮಂಡಕ್ಕಿ , ಕಾರ , ಊದುಬತ್ತಿ , ಕರ್ಪೂರ , ಅರ್ಪಿಸಿ ದೀಪಗಳನ್ನು ಬೆಳಗಿದರು.

ದೇಗುಲದ ಆವರಣದಲ್ಲಿ ಪ್ರಾಖಾರೋತ್ಸವ ಭಜನಾ ಕಾರ್ಯಕ್ರಮ, ದೀಪೋತ್ಸವ, ಪ್ರಸಾದ ವಿತರಣೆ ಮತ್ತು ರಾತ್ರಿ ಶ್ರೀ ಗಡ್ಡೆ ರಾಮೇಶ್ವರ ದೇಗುಲದ ಜೀರ್ಣೋದ್ದಾರ ಸಮಿತಿಯ ಪದಾಕಾರಿಗಳು ಸೇವಾರ್ಥದಾರರು ಹಾಗೂ ಗ್ರಾಮಸ್ಥರ ಮತ್ತು ಭಕ್ತಾದಿಗಳ ಸಹಕಾರದೊಂದಿಗೆ ಸಾರ್ವಜನಿಕರಿಗೆ ಅನ್ನ ಸಂತರ್ಪಣೆ ನಡೆಸಲಾಯಿತು. ದೀಪೋತ್ಸವ ಪ್ರಯುಕ್ತ ಶುಕ್ರವಾರ ದೇಗುಲಗಳನ್ನು ತಳಿರು ತೋರಣಗಳಿಂದ ಸಿಂಗರಿಸಲಾಗಿತು.

### ಜಿಲ್ಲಾ ಟಾಸ್ಕ್ ಪೋರ್ಸ್ ಸಭೆಯಲ್ಲಿ ಡಿಸಿ ಗಂಗಾಧರಸ್ವಾಮಿ ಸೂಚನೆ

# ಡಿಸ್ಟಿಲರಿಗಳ ಎಥೆನಾಲ್ ಉತ್ಪಾದನೆಗೆ ಮೆಕ್ಕೆಜೋಳ ಖರೀದಿಸಲು ಅಗತ್ಯ ಸಿದ್ಧತೆಗೆ ಕ್ರಮವಹಿಸಿ

**ದಾವಣಗೆರೆ:** ಕೆಂದ್ರ ಸರ್ಕಾರದ ಬೆಂಬಲ ಬೆಲೆಯಡಿ ಧಾನ್ಯ ಆಧಾರಿತ ಎಥನಾಲ್ ಉತ್ಪಾದಿಸುವ ಡಿಸ್ಟಿಲರಿಗಳ ಮೂಲಕ ಮೆಕ್ಕೆಜೋಳ ಖರೀದಿಗೆ ಅಗತ್ಯ ಸಿದ್ದತೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧಸ್ವಾಮಿ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಆಯೋಜಿಸಲಾಗಿದ್ದ ಟಾಸ್ಕ್ ಪೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಸಕ್ತ ಸಾಲಿಗೆ ಮುಂಗಾರು ಹಂಗಾಮಿನ ಅವಧಿಯಲ್ಲಿ ಜಿಲ್ಲೆಯದ್ಯಂತ ಅತೀ ಹೆಚ್ಚು ಮೆಕ್ಕೆಜೋಳ ಬೆಳೆಯಲಾಗಿದೆ. ಅದರಂತೆ ಕೇಂದ್ರ ಸರ್ಕಾರವು ಪ್ರತಿ ಕ್ವಿಂಟಾಲ್ ಗೆ ರೂ.2400 ಬೆಂಬಲ ಬೆಲೆ ಘೋಷಿಸಿದ್ದು, ಪ್ರತಿ ರೈತರಿಂದ 20 ಕ್ವಿಂಟಾಲ್ ಜೋಳ ಖರೀದಿಸಲು

ಅವಕಾಶ ಕಲ್ಪಿಸಲಾಗಿದೆ. ಆದುದರಿಂದ ಎಪಿಎಂಸಿಗೆ ಪ್ರತಿದಿನ 3 ಸಾವಿರ ಕ್ವಿಂಟಾಲ್ ಆವಕವಾಗುತ್ತಿವೆ.

ಬೆಂಬಲ ಬೆಲೆ ಘೋಷಣೆಯಾದ ನಂತರ ಜಿಲ್ಲೆಯ ಕೃಷಿ ಮಾರುಕಟ್ಟೆಗಳಲ್ಲಿ ಪ್ರಸ್ತುತ ಪ್ರತಿ ಕ್ವಿಂಟಾಲ್ ಗೆ ರೂ.1600 ರಿಂದ 1900ರ ವರೆಗೆ ಮಾರಾಟವಾಗುತ್ತಿದೆ.

ಧಾನ್ಯ ಆಧಾರಿತ ಎಥನಾಲ್ ಉತ್ಪಾದಿಸುವ ಡಿಸ್ಟಲರಿಗಳನ್ನು ಸಂಪರ್ಕಿಸಿ ಹತ್ತಿರದ ಪಿಸಿಎಸ್ ಗಳ ಮೂಲಕ ಎಥನಾರ್‌ಗೆ ಅಗತ್ಯಕ್ಕೆ ತಕ್ಕಂತೆ ಖರೀದಿಗೆ ತ್ವರಿತವಾಗಿ ಕ್ರಮವಹಿಸುವುದರ ಜತೆಗೆ ರೈತರಿಂದ ಖರೀದಿಸಿದ ಧಾನ್ಯಗಳ ಗುಣಮಟ್ಟ ಕಾಯ್ದುಕೊಳ್ಳಬೇಕು. ಅಬಕಾರಿ ಇಲಾಖೆ, ಸಹಕಾರ ಮಂಡಳವು ಜಿಲ್ಲೆಯಲ್ಲಿನ ಎಥನಾಲ್ ಉತ್ಪಾದಿಸುವ ಡಿಸ್ಟಿಲರಿಗಳನ್ನು ಸಂಪರ್ಕಿಸಿ ಖರೀದಿಗೆ ಬೇಕಾಗುವ ಅಂಕಿಅಂಶಗಳನ್ನು ಸಂಗ್ರಹಿಸಲು ಸೂಚನೆ ನೀಡಿದರು.

ಸಭೆಯಲ್ಲಿ ಆಹಾರ ಮತು ನಾಗರೀಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಕೆ.ಪಿ.ಮಧುಸೂದನ್, ಅಬಕಾರಿ ಉಪ ಆಯುಕ್ತ ಜುನೈದ್, ಸಹಕಾರ ಇಲಾಖೆ ಉಪನಿಬಂಧಕ ಮಧು ಶ್ರೀನಿವಾಸ್, ಎಪಿಎಂಸಿ ಇಲಾಖೆ ಗಿರೀಶ್ ನಾಯ್ಕ್ ಸೇರಿದಂತೆ ಮತ್ತಿತರರು ಇದ್ದರು.

# ಕಲಾಕುಂಚದಿಂದ ಕವನ ಸಂಕಲನಕ್ಕೆ ಕವನಕ್ಕೆ ಆಹ್ವಾನ

**ದಾವಣಗೆರೆ:** ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಆಶ್ರಯದಲ್ಲಿ ಈಗಾಗಲೇ "ಕಾವ್ಯ ಕುಂಚ" ಕವನ ಸಂಕಲನ ಭಾಗ 1, 2, 3, 4, 5 ಲೋಕಾರ್ಪಣೆ ಆಗಿದ್ದು ಈ ಕಾವ್ಯ ಕುಂಚದ 6ನೇ ಭಾಗದ ಕವನ ಸಂಕಲನಕ್ಕೆ ಮುದ್ರಣಕ್ಕೆ ಪೂರ್ಣ ಪ್ರಮಾಣದಲ್ಲಿ ಸಿದ್ದವಾಗಿದೆ.

ಕವನ ಬರೆಯುವ ಆಸಕ್ತರು ವಿಷಯ ಆಯ್ಕೆಯೊಂದಿಗೆ 15 ರಿಂದ 20 ಸಾಲುಗಳಲ್ಲಿ ಕವನ ರಚಿಸಿ ಈ ಕೆಳಗಿನ ವ್ಯಾಟ್ಸಪ್ ಸಂಖ್ಯೆಗೆ ತಮ್ಮ ಆಕರ್ಷಕವಾದ ಭಾವಚಿತ್ರ, ಮನೆಯ ಪೂರ್ಣ ಪ್ರಮಾಣದ ವಿಳಾಸ ಪಿನ್‌ಕೋಡ್ ಸಂಖ್ಯೆ, ವ್ಯಾಟ್ಸಪ್ ಸಂಖ್ಯೆ ದಿನಾಂಕ 31-12-2025 ರೊಳಗೆ ಕಳಿಸಬೇಕು ಎಂದು ಕಾವ್ಯಕುಂಚ ಕವನ ಸಂಕಲನದ ಪ್ರಧಾನ ಸಂಪಾದಕರಾದ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

ಕವನ ಕಳಿಸಿದವರಿಗೆ ಕಾವ್ಯ ಕುಂಚದ 5ನೇ ಭಾಗದ ಕವನ ಸಂಕಲನ ಉಚಿತವಾಗಿ ನಿಮ್ಮ ವಿಳಾಸಕ್ಕೆ ಅಂಚೆ ಮೂಲಕ ಕಳಿಸುತ್ತೇವೆ. ಕವನ ರಚಿಸಿ ಕಳಿಸುವ ವ್ಯಾಟ್ಸಪ್ ಸಂಖ್ಯೆ 9538732777 ಹೆಚ್ಚಿನ ಮಾಹಿತಿಗೆ ಈ ಸನೀಹವಾಣಿಗೆ ಸಂಪರ್ಕಿಸಬಹುದು ಎಂದು ಕಲಾಕುಂಚ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ವಿನಂತಿಸಿದ್ದಾರೆ.

# ಲೋಕಾಯುಕ್ತ ಜನ ಸಂಪರ್ಕ ಸಭೆ

**ಗದಗ:** ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೋಲಿಸ್ ಅಧಿಕಾರಿಗಳಿಂದ ದಿನಾಂಕ:10-12-2025 ರಂದು ಬೆಳಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ಜಿಲ್ಲೆಯ ಗಜೇಂದ್ರಗಡದ ಪುರಸಭೆಯಲ್ಲಿ ಲೋಕಾಯುಕ್ತ ಜನಸಂಪರ್ಕ ಸಭೆ ಮತ್ತು ಸಾರ್ವಜನಿಕರ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಲೋಕಾಯುಕ್ತ ಪೋಲಿಸ್ ಉಪಾಧೀಕ್ಷಕ ವಿಜಯ ಬಿರಾದಾರ ಅವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಕರಡು ಮತದಾರರ ಪಟ್ಟಿಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು

**ಗದಗ :** ಕರ್ನಾಟಕ ವಿಧಾನ ಪರಿಷತ್ತಿನ ಪಶ್ಚಿಮ ಪದವೀಧರರ ಕ್ಷೇತ್ರಕ್ಕೆ ಸಂಬಂಧಿಸಿದಂತೆ ದಿನಾಂಕ: 25-11-2025 ರಂದು ಗದಗ–ಬೆಟಗೇರಿ ನಗರ ವ್ಯಾಪ್ತಿಯ ಕರಡು ಮತದಾರರ ಪಟ್ಟಿಯನ್ನು ಪ್ರಕಟನೆ ಮಾಡಲಾಗಿದ್ದು, ಮತದಾರರ ಕರಡು ಪಟ್ಟಿಗೆ ಯಾವುದಾದರೂ ಆಕ್ಷೇಪಣೆ ಅಥವಾ ಹಕ್ಕುಗಳನ್ನು ನಗರ ಸಭೆ ಕಾರ್ಯಲಕ್ಕೆ ಬಂದು ತಮ್ಮ ಆಕ್ಷೇಪಣೆಗಳಿದ್ದಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರ ಸಹಾಯಕ ಮತದಾರ ನೋಂದಣಾಧಿಕಾರಿ ಹಾಗೂ ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಅರ್ಜಿ ಆಹ್ವಾನ

**ರಾಮನಗರ:** ಕೇಂದ್ರ ಪುರಸ್ಕೃತ ಅಮೃತ್–2.0 ಅಭಿಯಾನದ "ಅಮೃತ್ ಮಿತ್ರ" ತಾಂತ್ರಿಕೇತರ ಚಟುವಟಿಕೆಯಡಿ (ನಾನ್ ಟೆಕ್ನಿಕಲ್) ಕಾರ್ಯಕ್ರಮದಡಿ ಬಿಡದಿ ಪುರಸಭೆ ವ್ಯಾಪ್ತಿಯಲ್ಲಿನ ಪಬ್ಲಿಕ್ ಪಾರ್ಕ್ ಮತ್ತು ಗಾರ್ಡನ್ಸ್ ನಿರ್ವಹಣೆ ಮಾಡಲು ಡೇ–ನಲ್ಮ್ ಅಭಿಯಾನದಡಿ ನೋಂದಾಯಿತ ಅರ್ಹ ಮಹಿಳಾ ಸ್ವ ಸಹಾಯ ಸಂಘಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕೇಂದ್ರ ಸರ್ಕಾರವು ಅಮೃತ್ ಯೋಜನೆಯಡಿ "ಅಮೃತ್ ಮಿತ್ರ" ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುತ್ತಿದ್ದು, ಈ ಕಾರ್ಯಕ್ರಮದ ಮುಖ್ಯ ಉದ್ದೇಶ ಅಮೃತ್–2.0 ಅಭಿಯಾನದಡಿ ವಿವಿಧ ತಾಂತ್ರಿಕ ಮತ್ತು ತಾಂತ್ರಿಕೇತರ ಚಟುವಟಿಕೆಗಳನ್ನು ಕೇಂದ್ರ ಪುರಸ್ಕೃತ ಯೋಜನೆಯಾದ ಡೇ–ನಲ್ಮ್ ಅಭಿಯಾನದಡಿ ಬಿಡದಿ ಪುರಸಭಾ ವ್ಯಾಪ್ತಿಯಲ್ಲಿ ರಚಿಸಲಾಗಿರುವ ನೋಂದಾಯಿತ ಅರ್ಹ ಮಹಿಳಾ ಸ್ವ ಚಟುವಟಿಕೆಗಳನ್ನು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅನುಷ್ಠಾನಗೊಳಿಸಲು ಕೆಲವೊಂದು ಷರತ್ತುಗಳನ್ನು ಪೂರೈಸಿರುವ ಆಸಕ್ತ ಮಹಿಳಾ ಸಂಘಗಳು ಸಹಾಯ ಸಂಘಗಳ ಭಾಗವಹಿಸಬಹುದಾಗಿರುತ್ತದೆ.ಆದ್ದರಿಂದ ಆಸಕ್ತ ಮಹಿಳಾ ಸ್ವ–ಸಹಾಯ ಸಂಘಗಳು ಬಿಡದಿ ಪುರಸಭೆ ಡೇ–ನಲ್ಮ್ ಶಾಖೆಯಿಂದ ನಮೂನೆಯನ್ನು ಪಡೆದುಕೊಂಡು ಡಿ. 15ರೊಳಗೆ ತಮ್ಮ ಪ್ರಸ್ತಾವನೆಯನ್ನು ಮುಚ್ಚಿದ ಲಕೋಟೆಯಲ್ಲಿ ಬಿಡದಿ ಪುರಸಭೆ ಮುಖ್ಯಾಧಿಕಾರಿಗಳಿಗೆ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗೆ ಬಿಡದಿ ಪುರಸಭೆಯ ಡೇ–ನಲ್ಮ್ ಶಾಖೆಯನ್ನು ಸಂಪರ್ಕಿಸುವಂತೆ ಬಿಡದಿ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡೆವಿಲ್ ಚಿತ್ರದ ಯಶಸ್ವಿಗಾಗಿ ಇಂದು ನಗರ ದೇವತೆ ಶ್ರೀದುಗ್ಗಮ್ಮ ದೇವಿಗೆ ವಿಶೇಷ ಪೂಜೆ, ಬೈಕ್ ರ್‍ಯಾಲಿ

**ದಾವಣಗೆರೆ:** ನಟ ದರ್ಶನ ಅವರ ಡೆವಿಲ್ ಚಿತ್ರವು ಯಶಸ್ವಿಯಾಗಲೆಂದು ಅಖಿಲ ಕರ್ನಾಟಕ ತೂಗದೀಪ ದರ್ಶನ್ ಅಭಿಮಾನಿಗಳ ಸಂಘದಿಂದ ಡಿ.8 ರಂದು ನಗರ ದೇವತೆ ಶ್ರೀದುಗ್ಗಮ್ಮ ದೇವಿಗೆ ವಿಶೇಷ ಪೂಜೆ ಸಲ್ಲಿಸಿ, ಬೈಕ್ ಹಾಗು ಆಟೋ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಕೆ.ಜಿ.ಚಂದ್ರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದರ್ಶನ್ ಚಿತ್ರ ಡೆವಿಲ್ ಡಿ.12 ರಂದು ರಾಜ್ಯಾದ್ಯಂತ ಬಿಡುಗಡೆಯಾಗಲಿದ್ದು, ಅದರ ಅಂಗವಾಗಿ ಡಿ.8 ರಂದು ಬೆಳಗ್ಗೆ 10 ಗಂಟೆಗೆ ನಗರದ ಶ್ರೀ ದುರ್ಗಾಂಬಿಕ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಗುವುದು ಎಂದು ಹೇಳಿದರು.

ನಂತರ ದುರ್ಗಾಂಬಿಕಾ ದೇವಸ್ಥಾನದಿಂದ ಬೆಳಿಗ್ಗೆ 11 ಗಂಟೆಗೆ ಬೈಕ್ ಹಾಗೂ ಆಟೋರ್‍ಯಾಲಿ ಹಮ್ಮಿಕೊಂಡಿದು, ಹೊಂಡದ ವೃತ್ತ, ಅರುಣ ವೃತ್ತ, ರಾಂ ಅಂಡ್ ಕೋ, ಗುಂಡಿ ವೃತ್ತದ ಮೂಲಕ ವಿದ್ಯಾನಗರ, ನಿಟ್ಟುವಳ್ಳಿ ಮೂಲಕ ಗೀತಾಂಜಲಿ ಟಾಕೀಸ್ಗೆ ಕೊನೆಗೊಳ್ಳಲಿದೆ ಎಂದರು.

ಮಧ್ಯಾಹ್ನ 1 ಗಂಟೆಗೆ ಗೀತಾಂಜಲಿ ಥಿಯೇಟರ್‌ನಲ್ಲಿ ದರ್ಶನ್ ತೂಗುದೀಪ ಅವರ ಕಟ್ ಔಟ್ ಗೆ ಬಾರಿ ಹೂವಿನ ಹಾರ ಹಾಕಿ ಪಟಾಕಿ ಸಿಡಿಸಿ ಸಂಭ್ರಮಿಸಿ ನಂತರ ಎಲ್ಲಾ ಅಭಿಮಾನಿಗಳಿಗೂ ಊಟದ ವ್ಯವಸ್ಥೆ ಮಾಡಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಅಭಿಮಾನಿಗಳ ಸಂಘದ ಮಂಜು, ಅರುಣ್ ಕುಮಾರ್, ಸತೀಶ್, ವಿಜಯ್ ಕುಮಾರ್, ಸುರೇಶ್, ಕಿಟ್ಟಪ್ಪ ಇತರರು ಇದ್ದರು.

## ರಾಜ್ಯ ಕಾನೂನು ವಿಶ್ವವಿದ್ಯಾಲಯಕ್ಕೆ ಅಂಬೇಡ್ಕರ್ ಹೆಸರು ಮರುನಾಮಕರಣ ಮಾಡಿ: ಜಿಲ್ಲಾ ಯುವ ವಕೀಲರ ಸಂಘದ ಮನವಿ

**ದಾವಣಗೆರೆ:** ಕಾನೂನು ಪದವಿ ಪೂರ್ಣಗೊಳಿಸಿ ಹೊಸದಾಗಿ ವಕೀಲ ವೃತ್ತಿ ಆರಂಭಿಸುವ ಯುವ ವಕೀಲರಿಗೆ ಸರ್ಕಾರ ಸೌಲಭ್ಯ ಕಲ್ಪಿಸಬೇಕು ಎಂದು ಯುವ ವಕೀಲರ ಸಂಘ ಆಗ್ರಹಿಸಿದೆ.

ಸುದ್ದಿಗೋಷ್ಠಿಯಲ್ಲಿ ಸಂಘದ ಟಿ.ಕಿರಣ್ ಕುಮಾರ್ ಮಾತನಾಡಿ, ಗ್ರಾಮೀಣ ಭಾಗದ ಎಲ್ಲಾ ವರ್ಗ, ಜಾತಿಯ ನವ ವಕೀಲರಿಗೆ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಕಾನೂನು ಅಭ್ಯಾಸ ಮಾಡಲು ಅನುಕೂಲವಾಗುವಂತೆ ಎರಡು ವರ್ಷಗಳ ಅವಧಿಗೆ ಕೆಎಸ್ಆರ್ಟಿಸಿ ಉಚಿತ ಬಸ್ ಪಾಸ್ ನೀಡಬೇಕು. ಪ್ರೋತ್ಸಾಹಧನ ಪಾವತಿಗೆ ವಿಳಂಬ ಮಾಡದೇ, ಕಾಲಕಾಲಕ್ಕೆ ನೇರವಾಗಿ ಅವರವರ ಖಾತೆಗಳಿಗೆ ಜಮಾಗೊಳಿಸಲು ಕ್ರಮ ಕೈಗೊಳ್ಳಬೇಕು. ರಾಜ್ಯದ ಎಲ್ಲಾ ನ್ಯಾಯಾಲಯಗಳಲ್ಲಿ ಯುವ ವಕೀಲರ ಭವನ ನಿರ್ಮಿಸಬೇಕು. ಸರ್ಕಾರಿ ನೌಕರರಿಗೆ ನೀಡುತ್ತಿರುವ ಕೆಲವು ಸವಲತ್ತುಗಳನ್ನು ಯುವ ವಕೀಲರಿಗೆ ನೀಡಬೇಕು ಎಂದು ಮನವಿ ಮಾಡಿದರು.

ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯಕ್ಕೆ ಮರುನಾಮಕರಣ ಮಾಡುವ ಪ್ರಸ್ತಾವ ಸರ್ಕಾರದ ಮುಂದಿದೆ. ಒಂದು ವೇಳೆ ವಿಶ್ವವಿದ್ಯಾಲಯಕ್ಕೆ ಮರುನಾಮಕರಣ ಮಾಡುವುದಾದರೆ ಡಾ.ಬಿ.ಆರ್.ಅಂಬೇಡ್ಕರ್ ಹೆಸರನ್ನು ಪರಿಗಣಿಸಬೇಕು. ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯಕ್ಕೆ ಡಾ.ಬಿ.ಆರ್.ಅಂಬೇಡ್ಕರ್ ಕಾನೂನು ವಿಶ್ವವಿದ್ಯಾಲಯ ಎಂಬುದಾಗಿ ಮರುನಾಮಕರಣ ಮಾಡಬೇಕು ಎಂದು ಅವರು ವಿನಂತಿಸಿದರು.

ಸಂಘದ ಕೆ.ಎ.ಗುರುರಾಜ್ ಅರಸೀಕೆರೆ, ಅಶೋಕ ಅರಸೀಕೆರೆ, ಬಿ.ಎನ್.ನಾಗಸ್ಮಿತ, ತೋರಣ ಕುಮಾರ, ಬಿ.ಹರೀಶ, ಎಸ್.ಶ್ರೀನಿವಾಸ ಸುದ್ದಿಗೋಷ್ಠಿಯಲ್ಲಿದ್ದರು.

## ಪಶುಪಾಲನೆಯಲ್ಲಿ ಉದ್ಯಮಶೀಲತೆ, ವಿನೂತನ ತಂತ್ರಜ್ಞಾನಗಳ ತರಬೇತಿ

**ಗದಗ:** ಪಶುವೈದ್ಯಕೀಯ ಮಹಾವಿದ್ಯಾಲಯ, ಗದಗನಲ್ಲಿ ಪಶುಪಾಲಕ ರೈತರಿಗೆ ಮತ್ತು ಆಸಕ್ತ ಯುವಕ-ಯುವತಿಯರಿಗೆ ಪಶುಪಾಲನೆಯಲ್ಲಿ ಉದ್ಯಮಶೀಲತೆ ಮತ್ತು ವಿನೂತನ ತಂತ್ರಜ್ಞಾನಗಳು ಎಂಬ ವಿಷಯದ ಕುರಿತು ಡಿ. 22 ರಿಂದ ಡಿ. 23ರ ವರೆಗೆ ಎರಡು ದಿನಗಳ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ. ತರಬೇತಿಯು ಉಚಿತವಾಗಿರುತ್ತದೆ, ತರಬೇತಿಗೆ ಮುಂಚಿತವಾಗಿಯೇ ನೊಂದಾಯಿಸುವುದು ಕಡ್ಡಾಯ,

ಆಸಕ್ತ ರೈತರು ಸದರಿ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಲು, ಮೊಬೈಲ್, ವಾಟ್ಸಪ್ ಅಥವಾ ಈ-ಮೇಲ್ ಮೂಲಕ ತಮ್ಮ ವಿವರಗಳನ್ನು ಕಳುಹಿಸಿ ನೊಂದಣಿ ಮಾಡಿಸಬೇಕು. ತರಬೇತಿಯ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಪಶುವೈದ್ಯಕೀಯ ವಿಸ್ತರಣ ಶಿಕ್ಷಣ ವಿಭಾಗ, ಪಶುವೈದ್ಯಕೀಯ ಮಹಾವಿದ್ಯಾಲಯದ ಮುಖ್ಯಸ್ಥರು ಡಾ.ಶಿವಕುಮಾರ ಕ ರಡ್ಡೇರ, ಸಂಪರ್ಕಿಸಬಹುದಾಗಿದೆ ಮೊಬೈಲ್ ಸಂಖ್ಯೆ 8197983914, 9900115524, ಈ-ಮೇಲ್ hodvahevcg@gmail.com ಕೋರಿದೆ.

## ದರಪಟ್ಟಿ ಸಲ್ಲಿಸಿ

**ಚಿಕ್ಕಬಳ್ಳಾಪುರ:** ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಗೌರಿಬಿದನೂರು ನಗರ ವ್ಯಾಪ್ತಿಯಲ್ಲಿ ಬರುವ ಬೀದಿ ನಾಯಿಗಳ ನಿರ್ವಹಣೆಯನ್ನು ನಗರಸಭೆ ವತಿಯಿಂದ ನಿರ್ವಹಿಸಲು ಉದ್ದೇಶಿಸಿದ್ದು, ನಗರ ವ್ಯಾಪ್ತಿಯ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣ ಆವರಣಗಳಲ್ಲಿ ವಾಸವಿರುವ ಬೀದಿ ನಾಯಿಗಳನ್ನು ಹಿಡಿದು ನಗರಸಭೆ ವತಿಯಿಂದ ನಿರ್ಮಿಸಿರುವ ಶೆಲ್ಟರ್ ಗಳಿಗೆ ಸ್ಥಳಾಂತರಿಸಲು ಇಚ್ಛೆಯುಳ್ಳ ವ್ಯಕ್ತಿ ಅಥವಾ ಸಂಘ-ಸಂಸ್ಥೆಗಳಿಂದ ಡಿಸೆಂಬರ್ 12 ರ ಒಳಗಾಗಿ ಕಚೇರಿ ವೇಳೆಯಲ್ಲಿ ಸಂಪರ್ಕಿಸಿ ನಾಯಿಗಳನ್ನು ಹಿಡಿಯಲು ದರಪಟ್ಟಿಯನ್ನು ಸಲ್ಲಿಸಲು ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಗೌರಿಬಿದನೂರು ನಗರಸಭೆಯನ್ನು ಸಂಪರ್ಕಿಸಬಹುದೆಂದು ಗೌರಿಬಿದನೂರು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೀದಿ ನಾಯಿಗಳ ನಿರ್ವಹಣೆಗೆ ಸಹಾಯವಾಣಿ

**ಚಿಕ್ಕಬಳ್ಳಾಪುರ:** ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಗೌರಿಬಿದನೂರು ನಗರ ವ್ಯಾಪ್ತಿಯಲ್ಲಿ ಬರುವ ಬೀದಿ ನಾಯಿಗಳ ನಿರ್ವಹಣೆ ಹಾಗೂ ಸಂಬಂಧಿಸಿದ ನಾಯಿಗಳನ್ನು ಸಾರ್ವಜನಿಕರು ದೂರುಗಳು, ಸಮಸ್ಯೆಗಳು, ನಿಯಮ ಉಲ್ಲಂಘನೆಗಳನ್ನು ಸ್ವೀಕರಿಸಲು ಒಂದು ವಿಶೇಷ ಸಹಾಯವಾಣಿ (Help line number) 08154252117 ಅನ್ನು ಸ್ಥಾಪಿಸಿದ್ದು, ಸಾರ್ವಜನಿಕರು ಸಹಾಯವಾಣಿಯ ಉಪಯೋಗ ಪಡೆದುಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಗೌರಿಬಿದನೂರು ನಗರಸಭೆಯನ್ನು ಸಂಪರ್ಕಿಸಬಹುದೆಂದು ಗೌರಿಬಿದನೂರು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಷ್ಟ್ರೀಯ ಲೋಕ ಅದಾಲತ್ ಸದುಪಯೋಗ ಪಡೆದುಕೊಳ್ಳಲು ಸಲಹೆ

**ಹಾವೇರಿ:** ಜಿಲ್ಲೆಯ ಜಿಲ್ಲಾ ಹಾಗೂ ತಾಲೂಕು ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಇದೇ ಡಿಸೆಂಬರ್ 13 ರಂದು ಜರುಗಲಿದ್ದು, ಸಾರ್ವಜನಿಕರು ತಮ್ಮ ವ್ಯಾಜ್ಯಪೂರ್ವ ಹಾಗೂ ನ್ಯಾಯಾಲಯದಲ್ಲಿ ಬಾಕಿ ಇರುವ ರಾಜಿ ಆಗಬಹುದಾದ ಪ್ರಕರಣಗಳನ್ನು ಲೋಕ ಅದಾಲತ್‌ನ ಮೂಲಕ ತಕ್ಷಣ ಪರಿಹಾರ ಪಡೆದುಕೊಳ್ಳಲು ಒಂದು ಸುವರ್ಣಾವಕಾಶವಾಗಿರುತ್ತದೆ. ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಿರಾದಾರ ದೇವಿಂದ್ರಪ್ಪಾ ಎನ್. ಅವರು ತಿಳಿಸಿದರು.

ನಗರದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾವೇರಿ ಹಾಗೂ ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣದಲ್ಲಿ ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಅದಾಲತ್‌ನಲ್ಲಿ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ನ್ಯಾಯಾಲಯದ ಪ್ರಕರಣಗಳು, ಮೋಟರ್ ಅಪಘಾತ ನ್ಯಾಯಾಧೀಕರಣದ ಪ್ರಕರಣಗಳು, ಚೆಕ್ ಅಮಾನ್ಯದ ಪ್ರಕರಣಗಳು, ವಾಣಿಜ್ಯ ಪ್ರಕರಣಗಳು, ವ್ಯಾಜ್ಯಪೂರ್ವ ಪ್ರಕರಣಗಳು, ಸೇವಾ ಪ್ರಕರಣಗಳು, ರಾಜಿ ಆಗಬಲ್ಲ ಅಪರಾಧೀಕ ಪ್ರಕರಣಗಳು, ಗ್ರಾಹಕ ವ್ಯಾಜ್ಯ ಪ್ರಕರಣಗಳು, ಪಾಲುದಾರಿಕಾ ಪ್ರಕರಣಗಳು, ಭೂ ಸ್ವಾಧೀನ ಪ್ರಕರಣಗಳು ಹಾಗೂ ಇತರೆ ಸಿವಿಲ್ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಮಾಡಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ರಾಷ್ಟ್ರೀಯ ಲೋಕ ಅದಾಲತ್ ಕುರಿತು ಪೊಲೀಸ್ ಇಲಾಖೆ, ಭೂಸ್ವಾಧಿನಾಧಿಕಾರಿಗಳಿಗೆ, ವಿವಿಧ ಇಲಾಖೆಗಳ



ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ನಡೆಸಿ ಮಾಹಿತಿ ನೀಡಲಾಗಿದೆ ಎಂದರು.

ಶೇ.50 ರಿಯಾಯಿತಿ: ಕರ್ನಾಟಕ ರಾಜ್ಯದ ಸಾರಿಗೆ ಇಲಾಖೆಯಲ್ಲಿ 1991-92 ರಿಂದ 2019 ರ ಅವಧಿಯಲ್ಲಿ ಮೋಟಾರು ವಾಹನ ಕಾಯ್ದೆ/ ನಿಯಮಗಳ ಉಲ್ಲಂಘನೆ ಸಂಬಂಧ ದಾಖಲಾಗಿ ಬಾಕಿ ಇರುವ ಡಿ.ಎಸ್.ಎ ( ಇಲಾಖಾ ಶಾಸನ) ಪ್ರಕರಣದ ದಂಡದ ಮೊತ್ತದಲ್ಲಿ ಶೇ. 50 ರಷ್ಟು ರಿಯಾಯಿತಿ ನೀಡಿ ದಿನಾಂಕ 21-11-2025 ರಿಂದ 12-12-2025 ರವರೆಗೆ ಕಾಲಾವಕಾಶ ನೀಡಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶ ಕಲ್ಪಿಸಿಕೊಡಲಾಗಿರುತ್ತದೆ. ವಾಹನ ಮಾಲೀಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಆದೇಶದನ್ವಯ ದಿನಾಂಕ 21-11-2025 ರಿಂದ 12-12-2025 ರವರೆಗೆ ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ ಚಲನ್‌ನಲ್ಲಿ ದಾಖಲಾದ ಪ್ರಕರಣಗಳಿಗೆ ಶೇ. 50 ರಷ್ಟು ಮಾತ್ರ ದಂಡವನ್ನು ಪಾವತಿಸುವ ಮೂಲಕ ಪ್ರಕರಣವನ್ನು ಇತ್ಯರ್ಥ ಪಡಿಸಿಕೊಳ್ಳಬಹುದಾಗಿದೆ.

ಕಾನೂನು ನೆರವಿಗಾಗಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಹಾವೇರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿ ದೂ.08375-233939 ಹಾಗೂ ರಾಣೇಬೆನ್ನೂರು, ಹಿರೇಕೆರೂರು, ಬ್ಯಾಡಗಿ, ಶಿಗ್ಗಾಂವ, ಸವಣೂರ ಮತ್ತು ಹಾನಗಲ್ ತಾಲೂಕು ಕಾನೂನು ಸೇವೆಗಳ ಪ್ರಾಧಿಕಾರ ಸಮಿತಿಗಳನ್ನು ಅಥವಾ ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರದ ಟೋಲ್ ಫ್ರಿ ಸಂಖ್ಯೆ 151000 ಅಥವಾ ವೆಬ್‌ಸೈಟ್ https://haveri.dcourts.gov.in/dlsa-tlsc ಸಂಪರ್ಕಿಸಬಹುದು ಎಂದು ತಿಳಿಸಿದರು.

ಮಾಧ್ಯಮಗೋಷ್ಠಿಯಲ್ಲಿ ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಸದಸ್ಯ ಕಾರ್ಯದರ್ಶಿಗಳಾದ ಶ್ರೀಮತಿ ಶ್ರೀಶೈಲಜಾ ಉಪಸ್ಥಿತರಿದ್ದರು.

## ವಿಶೇಷ ಪ್ರೋತ್ಸಾಹಧನ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಶಿವಮೊಗ್ಗ** : 2025-26ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಬಿ.ಇಡಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ ಯೋಜನೆಯಡಿ ಸೌಲಭ್ಯ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ನ್ಯಾಷನಲ್ ಕೌನ್ಸಿಲ್ ಫಾರ್ ಟೀಚರ್ ಎಜುಕೇಷನ್ ನಿಂದ ಮಾನ್ಯತೆ ಪಡೆದಿರುವ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ದಾಖಲಾತಿ ಹೊಂದಿ ಬಿ.ಇಡಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ) ವಿದ್ಯಾರ್ಥಿಗಳಿಗೆ ರೂ.25000/-ಗಳ ವಿಶೇಷ ಪ್ರೋತ್ಸಾಹಧನ ಯೋಜನೆಯಡಿ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ವಿಶೇಷ ಪ್ರೋತ್ಸಾಹಧನವನ್ನು ಸಂಬಂಧಪಟ್ಟ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಡಿಬಿಟಿ ಮುಖಾಂತರ ಜಮಾ ಮಾಡಲಾಗುವುದು. ಅರ್ಜಿ ಸಲ್ಲಿಸಲು ದಿ: 31.12.2025 ಕಡೆಯ ದಿನಾಂಕವಾಗಿದ್ದು, ಅರ್ಜಿಯನ್ನು sevasindhu.karnataka.gov.in ಮೂಲಕ ಸಲ್ಲಿಸಿ ನಂತರ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರ ಮೊಹರು ಮತ್ತು ಸಹಿ/ದೃಢೀಕರಣ ಪಡೆದು, ಅರ್ಜಿಯೊಂದಿಗೆ ನಿವಾಸಿ ದೃಢೀಕರಣ ಪತ್ರ. ಜಾತಿ ಮತ್ತು ಆದಾಯ ಪ್ರಮಾಣ ಪತ್ರ. ಹಿಂದಿನ ವರ್ಷದ ಅಂಕಪಟ್ಟಿ, ಪದವಿ ಪ್ರಮಾಣ ಪತ್ರ, ಶುಲ್ಕ ರಸೀದಿ, ಆಧಾರ್ ಕಾರ್ಡ್, ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಪಿ.ಯು.ಸಿ ಅಂಕಪಟ್ಟಿ, ಶಿವಮೊಗ್ಗ ಇಲ್ಲಿಗೆ ಸಲ್ಲಿಸುವುದು.

## ಏಕಮುಖಸಂಚಾರಕ್ಕೆ ಜಿಲ್ಲಾಧಿಕಾರಿಗಳ ಆದೇಶ

**ಶಿವಮೊಗ್ಗ** : ವಿನೋಬನಗರ ಪೊಲೀಸ್ ಚೌಕಿ ಕಡೆಗಳಲ್ಲಿ ದಿನೇ ದಿನೇ ವಾಹನ ಮತ್ತು ಸಂಚಾರ ದಟ್ಟಣೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಶಿವಮೊಗ್ಗ ವಿನೋಬನಗರದ 2 ನೇ ಹಂತದ 2ನೇ ಮುಖ್ಯ ರಸ್ತೆ ಪೊಲೀಸ್‌ಚೌಕಿ ಕೆಳಭಾಗ ನಂದಿನಿ ಪಾರ್ಲರ್ ನಿಂದ ಮಾನಸ ಪೆಟ್ಸ್ ಮಾರ್ಟ್ ಶಾಪ್ ಕಡೆಗೆ ಹೋಗುವ ವಾಹನಗಳಿಗೆ ಮಾತ್ರ ಸಂಚರಿಸಲು ಅವಕಾಶ ನೀಡಿ, ಮಾನಸ ಪೆಟ್ಸ್ ಮಾರ್ಟ್ ಶಾಪ್ ನಿಂದ ನಂದಿನಿ ಪಾರ್ಲರ್ ಪೊಲೀಸ್ ಚೌಕಿ ಕಡೆಗೆ ಬರುವ ಎಲ್ಲಾ ವಾಹನಗಳ ಸಂಚಾರವನ್ನು ನಿಷೇಧಿಸಿ ಏಕಮುಖ ಸಂಚಾರಕ್ಕೆ ಜಿಲ್ಲಾಧಿಕಾರಿಗಳಾದ ಗುರುದತ್ತ ಹೆಗಡೆ ಆದೇಶಿಸಿದ್ದಾರೆ.

# ಬೆಂಗಳೂರಿನಲ್ಲೆನಡೆಯಲಿವೆ ಐಪಿಎಲ್ ಪಂದ್ಯಾವಳಿಗಳು: ಡಿ.ಕೆ.ಶಿವಕುಮಾರ್

**ಬೆಂಗಳೂರು:** ನಗರದ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಆರ್‌ಸಿಬಿ ವಿಜಯೋತ್ಸವದ ವೇಳೆ ಉಂಟಾಗಿದ್ದ ಕಾಲ್ತುಳಿತ ಪ್ರಕರಣದಿಂದಾಗಿ ಹೊರರಾಜ್ಯಗಳಿಗೆ ಎತ್ತಂಗಡಿಯಾಗಿದ್ದ 2026ನೇ ಸಾಲಿನ ಪ್ರೀಮಿಯರ್ ಲೀಗ್ ಐಪಿಎಲ್ ಕ್ರಿಕೆಟ್ ಪಂದ್ಯಾವಳಿ ಬೆಂಗಳೂರಿನಲ್ಲೇ ನಡೆಯುವ ಸಾಧ್ಯತೆ ಇದೆ.

ಈ ಹಿಂದೆ ಕೆಲವು ತಾಂತ್ರಿಕ ಕಾರಣಗಳನ್ನು ಮುಂದಿಟ್ಟುಕೊಂಡು 2026ನೇ ಸಾಲಿನ ಆರ್‌ಸಿಬಿ ಪಂದ್ಯಗಳನ್ನು ಮಹಾರಾಷ್ಟ್ರದ ಪುಣೆನಗರಕ್ಕೆ ವರ್ಗಾಯಿಸಲು ಬಿಸಿಸಿಐ ಮುಂದಾಗಿತ್ತು. ಈ ಬಗ್ಗೆ ಅಭಿಮಾನಿಗಳು ತೀವ್ರ ಬೇಸರ ವ್ಯಕ್ತಪಡಿಸಿ ಆರ್‌ಸಿಬಿಯ ಪ್ರೀಮಿಯರ್‌ಲೀಗ್ ಪಂದ್ಯಗಳನ್ನು ಬೆಂಗಳೂರಿನಲ್ಲೇ ನಡೆಸಬೇಕೆಂದು ಸಾಮಾಜಿಕ ಜಾಲತಾಣಗಳಲ್ಲಿ ಅಭಿಯಾನ ಆರಂಭಿಸಿದ್ದರು.

ಕರ್ನಾಟಕದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಮುಂದಿನ ಮಾರ್ಚ್-ಏಪ್ರಿಲ್ ತಿಂಗಳಿನಲ್ಲಿ ನಡೆಯಲಿರುವ ಆರ್‌ಸಿಬಿಯ ಎಲ್ಲಾ ಪಂದ್ಯಗಳು ಬೆಂಗಳೂರಿನಲ್ಲೇ



ನಡೆಯಲಿವೆ. ಈ ಬಗ್ಗೆ ಸಂಬಂಧಪಟ್ಟವರ ಜೊತೆ ಮಾತುಕತೆ ನಡೆಸುವುದಾಗಿ ಹೇಳಿದ್ದಾರೆ.

ನಗರದಲ್ಲಿ ಕೆಎಸ್ಸಿಎ ಚುನಾವಣೆಯ ಮತದಾನದ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಾನು ಕ್ರಿಕೆಟ್ ಲವರ್, ಆರ್ಸಿಬಿ ನಮ ಹೆಮೆ. ಯಾವುದೇ ಕಾರಣಕ್ಕೂ ನಮಿಂದ ಐಪಿಎಲ್ ಕೈ ತಪ್ಪಿಹೋಗುವುದಿಲ್ಲ. ಬೆಂಗಳೂರಿನಲ್ಲೆನಡೆಯುತ್ತದೆ ಎಂದರು.

ಬೆಂಗಳೂರಿನಲ್ಲಿ ಏನು ಅನಾಹುತ ಆಗಿದೆ, ಅದೆಲ್ಲವನ್ನು ತಪ್ಪಿಸಿ ಬೆಂಗಳೂರು ಗೌರವ ಉಳಿಸುವ ಕೆಲಸ ಮಾಡುತ್ತೇವೆ. ಕಾನೂನು ಚೌಕಟ್ಟಿನಲ್ಲಿ ಜನ ದಟ್ಟಣೆ ಗಮನದಲ್ಲಿಟ್ಟುಕೊಂಡು ಸ್ಟೇಡಿಯಂ ಬಳಸುತ್ತೇವೆ. ಇದಕ್ಕೆ ಪರ್ಯಾಯವಾಗಿ ಬೇರೆ ದೊಡ್ಡ ಸ್ಟೇಡಿಯಂ ಮಾಡುತ್ತೇವೆ ಎಂದು ಹೇಳಿದರು.

ಅಲ್ಲದೇ ಇನುಂದಕ್ಕೆ ಯಾವುದೇ ಐಪಿಎಲ್ ಬೆಂಗಳೂರಿನಿಂದ ಶಿಫ್ ಆಗುವುದಕ್ಕೆ ಬಿಡುವುದಿಲ್ಲ.ಇಲ್ಲೇ ನಡೆಸುತ್ತೇವೆ. ಇದು ಬೆಂಗಳೂರಿನ ಗೌರವ, ಅದನ್ನು ಕಾಪಾಡಿಕೊಳ್ಳುತ್ತೇವೆ. ಮುಂದಕ್ಕೆ ಏನೇನಿದೆ ಎಲ್ಲದಕ್ಕೂ ಅವಕಾಶ ಕೊಡುತ್ತೇವೆ ಎಂದು ಅವರು ಭರವಸೆ ನೀಡಿದರು.

ಪುಣೆಗೆ ಎತ್ತಂಗಡಿ ಆತಂಕ:

ಸಾಮಾನ್ಯವಾಗಿ ಚಾಂಪಿಯನ್ ಆಗಿ ಹೊರಹೊಮಿದ ಫ್ರಾಂಚೈಸಿಗಳ ತವರು ಕ್ರೀಡಾಂಗಣದಲ್ಲಿ ಮರು ವರ್ಷದ ಐಪಿಎಲ್ ಟೂರ್ನಿ ಉದ್ಘಾಟನೆ ನಡೆಯುತ್ತದೆ. ಹಾಗೆಯೇ 19ನೇ ಆವೃತ್ತಿಯ ಐಪಿಎಲ್ ಟೂರ್ನಿ ಬೆಂಗಳೂರಿನಲ್ಲಿ ನಡೆಯಬೇಕಿತ್ತು. ಆದರೆ ಚಿನ್ನಸ್ವಾಮಿ ಕ್ರೀಡಾಂಗಣದಿಂದಲೇ ಟೂರ್ನಿ ಎತ್ತಂಗಡಿ ಮಾಡಲಾಗಿದೆ. ಚಿನ್ನಸ್ವಾಮಿ ಸ್ಟೇಡಿಯಂ ಬಳಿ ನಡೆದ ಕಾಲ್ತುಳಿತ ದುರಂತವೇ ಇದಕ್ಕೆ ಕಾರಣ ಎಂದು ಹೇಳಲಾಗಿತ್ತು.

ಪ್ರಸಕ್ತ ವರ್ಷದ ಜೂನ್ 4ರಂದು ಬೆಂಗಳೂರು ಚಿನ್ನಸ್ವಾಮಿ ಕ್ರೀಡಾಂಗಣದ ಬಳಿಕ ಸಂಭವಿಸಿದ ಕಾಲ್ತುಳಿತ ದುರಂತವೇ ಟೂರ್ನಿ ಸ್ಥಳಾಂತರಕ್ಕೆ ಪ್ರಮುಖ ಕಾರಣ ಎಂದು ಹೇಳಲಾಗುತ್ತಿದೆ. ಜೂನ್ 3ರ ರಾತ್ರಿ ಐಪಿಎಲ್ ಟ್ರೋಫಿ ಗೆದ್ದು 17 ವರ್ಷಗಳ ವನವಾಸಕ್ಕೆ ಅಂತ್ಯ ಹಾಡಿತ್ತು.

ಮರುದಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತದ ದುರಂತ ನಡೆದು 11 ಜನ ಅಭಿಮಾನಿಗಳು ಪ್ರಾಣ ಕಳೆದುಕೊಂಡರು. ಈ ಘಟನೆಯಿಂದ ಸುರಕ್ಷತೆ ಬಗ್ಗೆ ಕಳವಳ ಹೆಚ್ಚಾಗಿತ್ತು.

ಚಿನ್ನಸ್ವಾಮಿ ಕ್ರೀಡಾಂಗಣವನ್ನು ದೊಡ್ಡ ಪ್ರಮಾಣದ ಕಾರ್ಯಕ್ರಮಗಳಿಗೆ ಸೂಕ್ತವಲ್ಲ ಮತ್ತು ಅಸುರಕ್ಷಿತ ಎಂದು ಕರ್ನಾಟಕ ಸರ್ಕಾರ ನೇಮಿಸಿದ ನ್ಯಾಯಮೂರ್ತಿ ಜಾನ್ ಮೈಕೆಲ್ ಕುನ್ಹಾ ಸಮಿತಿ ಹೇಳಿತ್ತು.

ಹೀಗಾಗಿ ಮುಂಬರುವ ಆವೃತ್ತಿಯಲ್ಲಿ ಆರ್‌ಸಿಬಿ ತವರು ಮೈದಾನದ ಎಲ್ಲಾ ಪಂದ್ಯಗಳನ್ನು ಪುಣೆಗೆ ಶಿಫ್ ಮಾಡಲು ಬಿಸಿಸಿಐ ಹಾಗೂ ಐಪಿಎಲ್ ಆಡಳಿತ ಮಂಡಳಿ ಚರ್ಚಿಸುತ್ತಿದೆ ಎಂದು ವರದಿಗಳು ತಿಳಿಸಿವೆ. ಆದರೆ ಈ ಬಗ್ಗೆ ಐಪಿಎಲ್ ಮಂಡಳಿಯಾಗಲಿ, ಬಿಸಿಸಿಐ ಆಗಲಿ ಅಧಿಕೃತ ಹೇಳಿಕೆ ನೀಡಿಲ್ಲ.

# ಉ. ಪ್ರದೇಶದ ರಾಜ್ಯಪಾಲರಿಂದ ಬಾರ್ ಟು ಸಿಲ್ವರ್ ಸ್ಟಾರ್ ರಾಷ್ಟ್ರ ಪ್ರಶಸ್ತಿ ಪ್ರಧಾನ

**ದಾವಣಗೆರೆ** : ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಮುಖ್ಯ ಆಯುಕ್ತರಾದ ಮುರುಘರಾಜೇಂದ್ರ ಜೆ.ಚಿಗಟೇರಿ ಅವರಿಗೆ ಉತ್ತರ ಪ್ರದೇಶದ ರಾಜ್ಯ ಪಾಲರಾದ ಶ್ರೀಮತಿ ಆನಂದಿ ಬೆನ್ ಪಾಟೇಲ್ ಅವರು ರಾಜ ಭವನದಲ್ಲಿ ನಡೆದ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ರಾಷ್ಟ್ರಮಟ್ಟದ ಅತ್ಯುತ್ತಮ ಪ್ರಶಸ್ತಿಯಾದ "ಬಾರ್ ಟು ಸಿಲ್ವರ್ ಸ್ಟಾರ್" ಪ್ರಶಸ್ತಿಯನ್ನು ಪ್ರಧಾನ ಮಾಡಿದರು. ಈ ಸಂದರ್ಭದಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ರಾಷ್ಟ್ರ ಮುಖ್ಯ ಆಯುಕ್ತರಾದ ನಿವೃತ್ತ ಐ ಎ ಎಸ್ ಕೆ. ಕೆ. ಖಂಡೆಲ್ ವಾಲ್ ರಾಜ್ಯಮುಖ್ಯ ಆಯುಕ್ತರಾದ ಪಿ.ಜಿ.ಆರ್.ಸಿಂಧ್ಯ, ಇನ್ನು ಮುಂತಾದವರು ಉಪಸ್ಥಿತರಿದ್ದರು .



# 30 ವರ್ಷ ಮೇಲ್ಪಟ್ಟವರು ಪ್ರತಿ 6 ತಿಂಗಳಿಗೊಮ್ಮೆ ರಕ್ತದೊತ್ತಡ, ಸಕ್ಕರೆ ಕಾಯಿಲೆ ಪರೀಕ್ಷಿಸಿಕೊಳ್ಳಿ

ಬಳ್ಳಾರಿ: 30 ವರ್ಷ ಮೇಲ್ಪಟ್ಟವರು ಪ್ರತಿ 6 ತಿಂಗಳಿಗೊಮ್ಮೆ ರಕ್ತದೊತ್ತಡ, ಸಕ್ಕರೆ ಕಾಯಿಲೆ ಪರೀಕ್ಷೆ ಮಾಡಿಸುವ ಮೂಲಕ ಸದೃಢ ಆರೋಗ್ಯ ಹೊಂದಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಶುಕ್ರವಾರ ಸಂಡೂರು ತಾಲ್ಲೂಕಿನ ವಿಠಲಾಪುರ ಮತ್ತು ಮೆಟ್ರಿಕಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ಸಾರ್ವಜನಿಕರೊಂದಿಗೆ ಸಂವಾದ ನಡೆಸಿ ಅವರು ಮಾತನಾಡಿದರು.

ಯಾರಿಗಾದರೂ ಬಾಯಿ ಒಣಗಿದಂತೆ ಆಗುವುದು ಅಥವಾ ವಿಪರೀತ ಬಾಯಾರಿಕೆ, ಪದೇ ಪದೇ ಮೂತ್ರ ವಿಸರ್ಜನೆ, ಹಸಿವು ಹೆಚ್ಚಾಗುವುದು, ಮಂದದೃಷ್ಟಿ ಕಾರಣವಿಲ್ಲದೇ ಆಯಾಸ ಕಂಡುಬಂದಲ್ಲಿ ತಕ್ಷಣ ವೈದ್ಯರ ಬಳಿ ತೆರಳಿ ಪರಿಕ್ಷೀಸಿಕೊಳ್ಳಬೇಕು. 30 ವರ್ಷ ಮೇಲ್ಪಟ್ಟವರು ಪ್ರತಿ 6 ತಿಂಗಳಿಗೊಮ್ಮೆ



ರಕ್ತದೊತ್ತಡ, ಸಕ್ಕರೆ ಕಾಯಿಲೆ ಪರೀಕ್ಷೆ ಮಾಡಿಸುವ ಮೂಲಕ ಸದೃಢ ಆರೋಗ್ಯ ಹೊಂದಬಹುದಾಗಿದೆ ಎಂದು ತಿಳಿಸಿದರು.

ಪ್ರಸ್ತುತ ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಾಧಿಕಾರಿಗಳಿಂದ ಮತ್ತು ಗ್ರಾಮೀಣ ಭಾಗದಲ್ಲಿ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಸಮುದಾಯ ಆರೋಗ್ಯಾಧಿಕಾರಿಗಳಿಂದ ಸಕ್ಕರೆ ಖಾಯಿಲೆ ಮತ್ತು ರಕ್ತದೊತ್ತಡ ಪರೀಕ್ಷೆಯನ್ನು ಕೈಗೊಂಡು ಸಂಶಯಾತ್ಮಕ ವ್ಯಕ್ತಿಗಳನ್ನು ವೈದ್ಯಾಧಿಕಾರಿಗಳ ಬಳಿ ಕಳುಹಿಸಿದಾಗ ಪುನಃ ದೃಢಪಟ್ಟಲ್ಲಿ ಆಯಾ ಗ್ರಾಮದಲ್ಲಿಯೇ ಉಚಿತವಾಗಿ ಮಾತ್ರೆಗಳನ್ನು ನೀಡುವ ಕಾರ್ಯ ಕೈಗೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದರು.

ಮಧುಮೇಹ ಪರೀಕ್ಷೆಯು ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ಪರೀಕ್ಷೆ ಮಾಡಲಾಗುತ್ತದೆ. ಎಲ್ಲಾ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಲು ವಿನಂತಿಸಿದರು.

ಈ ಸಂದರ್ಭದಲ್ಲಿ ವೈದ್ಯಾಧಿಕಾರಿಗಳಾದ ಡಾ.ಹರೀಶ್, ಡಾ.ಮಹೇಶ್ ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿ ವರ್ಗದವರು, ಸಾರ್ವಜನಿಕರು ಹಾಜರಿದ್ದರು.


## ಮಾನ್ಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ನ್ಯಾಯಾಲಯ ಜಗಳೂರು

**ಸಿ.ಆರ್‌ಮಿಸ್ ನಂ:1080/2025**

**ಅರ್ಜಿದಾರರು:** 1) ನಾಗಪ್ಪ ತಾಯಿ ಲೇಟ್ ದುರುಗಮ್ಮ ವಯಸ್ಸು 58 ವರ್ಷ, ಕೆಲಸ ವ್ಯವಸಾಯ2) ಡಿ.ಮಾರುತಿ ತಾಯಿ ಲೇಟ್ ದುರುಗಮ್ಮ ವಯಸ್ಸು 48 ವರ್ಷ, ಕೆಲಸ ವ್ಯವಸಾಯ3) ಡಿ.ಸಮಾದಪ್ಪ ತಾಯಿ ಲೇಟ್ ದುರುಗಮ್ಮ ವಯಸ್ಸು 45 ವರ್ಷ, ಕೆಲಸ ವ್ಯವಸಾಯ ವಾಸ ಪಲ್ಲಾಗಟ್ಟೆ ಗ್ರಾಮ, ಬಿಳಿಚೋಡು ಹೋಬಳಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.

**ವಿರುದ್ಧ**

**ಎದುರುದಾರರು :** - ತಹಶೀಲ್ದಾರರು, ಜನನ ಮತ್ತು ಮರಣ ನೊಂದಣಾಧಿಕಾರಿಗಳು ತಾಲ್ಲೂಕು ಕಛೇರಿ, ಜಗಳೂರು, ದಾವಣಗೆರೆ ಜಿಲ್ಲೆ

## ಸಾರ್ವಜನಿಕ ನೋಟೀಸ್

ಮೇಲ್ಕಂಡ ಪ್ರಕರಣವನ್ನು ಅರ್ಜಿದಾರರ ತಾಯಿಯಾದ ದುರುಗಮ್ಮ ದೇವದಾಸಿ [DURUGAMMA DEVADASI] ಇವರು ದಿನಾಂಕ:19.08.2024ರಂದು ದಾವಣಗೆರೆ ಜಿಲ್ಲೆ, ಜಗಳೂರು ತಾಲ್ಲೂಕು, ಬಿಳಿಚೋಡು ಹೋಬಳಿ, ಪಲ್ಲಾಗಟ್ಟೆ ಗ್ರಾಮದ ಅರ್ಜಿದಾರರ ಮನೆಯಲ್ಲಿ ಮರಣ ಹೊಂದಿದ್ದರಿಂದ ಸದರಿ ಅಂಶವನ್ನು ಎದುರುದಾರರು ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ, ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿ ಕೊಂಡು ಪ್ರಕರಣವನ್ನು ದಿನಾಂಕ:-20- 01 -2025ರ ಬೆಳಿಗ್ಗೆ 11.00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ, ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ. ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:-6.12.2025ರಂದು ನೀಡಲಾಗಿದೆ.

ನ್ಯಾಯಾಲಯದ ಅಪ್ಪಣೆ ಮೇರೆಗೆ

ಅರ್ಜಿದಾರರ ಪರ ವಕೀಲರು
ಸಿ.ಬಸವರಾಜ, ವಕೀಲರು

ಶಿರಸ್ತೆದಾರರು
ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ
ಜಗಳೂರು.

# ರೈತಪರ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಬಿಜೆಪಿಯಿಂದ ಹೋರಾಟ: ಎಂಪಿಆರ್

**ದಾವಣಗೆರೆ:** ಭತ್ತ ಮತ್ತು ಮೆಕ್ಕೆಜೋಳ ಖರೀದಿ ಕೇಂದ್ರ, ಹಾಲಿನ ಬಾಕಿ ಪ್ರೋತ್ಸಾಹಧನ, ತುಂಗಭದ್ರಾ ಜಲಾಶಯದ ದುರಸ್ತಿ ಸೇರಿದಂತೆ ರೈತಪರ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಭಾರತೀಯ ಜನತಾ ಪಾರ್ಟಿಯಿಂದ ಹೋರಾಟ ನಡೆಸಲಾಗುವುದು ಎಂದು ಬಿಜೆಪಿ ಮುಖಂಡ, ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಬೆಂಬಲ ಬೆಲೆ ಘೋಷಿಸಿದ್ದರೂ, ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಖರೀದಿ ಕೇಂದ್ರ ತೆರೆಯಲು ಮೀನಮೇಷ ನೋಡುತ್ತಿದೆ. ರೈತರು ತಮ್ಮ ಉತ್ಪನ್ನವನ್ನೆಲ್ಲಾ ಮಾರಿದ ನಂತರ ಕಾಂಗ್ರೆಸ್ ಏಜೆಂಟರಿಗೆ ಅನುಕೂಲವಾಗುವಂತೆ ಖರೀದಿ ಕೇಂದ್ರಗಳನ್ನು ತಡವಾಗಿ ತೆರೆಯಲು ಯೋಜಿಸಿದೆ. ಸರ್ಕಾರ ತಕ್ಷಣ ಖರೀದಿ ಕೇಂದ್ರ ತೆರೆಯಬೇಕು. ಕೇಂದ್ರದ ಬೆಂಬಲ ಬೆಲೆಗೆ ಪ್ರತಿ ಕ್ವಿಂಟಾಲ್ ಗೆ 600 ರೂ. ಪ್ರೋತ್ಸಾಹಧನ ಸೇರಿಸಿ ಖರೀದಿಸಬೇಕು ಎಂದು ಒತ್ತಾಯಿಸಿದರು.

ಹೊನ್ನಾಳಿ–ನ್ಯಾಮತಿ ತಾಲೂಕು ಬಂದ್‌ನಿಂದ ಆರಂಭವಾದ ಹೋರಾಟದ ಕಿಡಿ ಈಗ ರಾಜ್ಯವ್ಯಾಪಿ ಆವರಿಸಿದೆ. ರೈತರ ಬೇಡಿಕೆಗಳು ಈಡೇರುವವರೆಗೂ ನಮ್ಮ ಹೋರಾಟ ನಿಲ್ಲುವುದಿಲ್ಲ. ಡಿ.9ರಂದು ಬೆಳಗಾವಿ ಸುವರ್ಣಸೌಧಕ್ಕೆ ಮುತ್ತಿಗೆ ಹಾಕಿ ಪ್ರತಿಭಟಿಸಲಾಗುವುದು. ಹೋರಾಟದಲ್ಲಿ ಸುಮಾರು 50 ಸಾವಿರ ಜನ ಪಾಲ್ಗೊಳ್ಳುವ ನಿರೀಕ್ಷೆ ಇದೆ. ಕುರ್ಚಿ ಕದನದಲ್ಲಿ ಮುಳುಗಿರುವ ರಾಜ್ಯ ಸರ್ಕಾರವನ್ನು ಬಡಿದೆಬ್ಬಿಸಲು ಈ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ಅವರು ನುಡಿದರು.

ದಿನ ಬೆಳಗಾದರೆ ಕಾಂಗ್ರೆಸ್ಸಿಗರ ಕುರ್ಚಿ ಕಿತ್ತಾಟ, ಡಿನ್ನರ್ ಪಾರ್ಟಿಗಳದ್ದೇ ಸುದ್ದಿ ಮಾಧ್ಯಮಗಳಲ್ಲಿ ಹರಿದಾಡುತ್ತಿದೆ. ವಿಧಾನಸೌಧದಲ್ಲಿ ಸಚಿವರು ಕಾಣೆಯಾಗಿದ್ದು, ಅಧಿಕಾರಿಗಳು ಕೂಡ ಗೊಂದಲದಲ್ಲಿದ್ದಾರೆ. ರಾಜ್ಯದಲ್ಲಿ ಆಡಳಿತ ಯಂತ್ರ ಸಂಪೂರ್ಣ ಕುಸಿದಿದೆ. ಕಾಂಗ್ರೆಸ್ಸಿಗರಿಗೆ ರೈತರ ನೆರವಿಗೆ ಧಾವಿಸುವ ಪುರುಸೊತ್ತು ಇಲ್ಲವಾಗಿದೆ. ಮುಂದೆ ಕಾಂಗ್ರೆಸ್ ಅಧಿಕಾರಕ್ಕೆ ಬರುವುದಿಲ್ಲವೆಂಬ ಕಾರಣಕ್ಕೆ ಒಬ್ಬರು ಮುಖ್ಯಮಂತ್ರಿ ಕುರ್ಚಿ ಉಳಿಸಿಕೊಳ್ಳಲು, ಇನ್ನೊಬ್ಬರು ಮುಖ್ಯಮಂತ್ರಿಯಾಗಲು ಪೈಪೋಟಿಗೆ ಬಿದ್ದಿದ್ದಾರೆ. ಈ ಆಂತರಿಕ ಕಚ್ಚಾಟದಿಂದಲೇ ಕಾಂಗ್ರೆಸ್ ಸರ್ಕಾರ ಪತನವಾಗಲಿದೆ ಎಂದು ಅವರು ಭವಿಷ್ಯ ನುಡಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಎನ್.ರಾಜಶೇಖರ ಮಾತನಾಡಿ, ಭತ್ತ, ಮೆಕ್ಕೆಜೋಳ ಖರೀದಿ ಕೇಂದ್ರ ಸ್ಥಾಪಿಸುವುದೂ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಸುವಂತೆ ಒತ್ತಾಯಿಸಿ ಡಿ.9ರಂದು ಬೆಳಗಾವಿ ಸುವರ್ಣಸೌಧಕ್ಕೆ ಮುತ್ತಿಗೆ ಹಾಕಲಾಗುವುದು. ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ರೈತರ ಸಮಸ್ಯೆ ಪರಿಹರಿಸುವಂತೆ ರಾಜ್ಯ ಸರ್ಕಾರಕ್ಕೆ ಚುರುಕು ಮುಟ್ಟಿಸುವ ಹೋರಾಟ ನಡೆಸಲಿದ್ದೇವೆ. ದಾವಣಗೆರೆ ಜಿಲ್ಲೆಯಿಂದ 1 ಸಾವಿರಕ್ಕೂ ಅಧಿಕ ಜನರು ಹೋರಾಟದಲ್ಲಿ ಭಾಗಿಯಾಗುತ್ತಿದ್ದೇವೆ ಎಂದರು.

ರಾಜ್ಯದಲ್ಲಿ ಸುಮಾರು 70 ಲಕ್ಷ ಮೆಟ್ರಿಕ್ ಟನ್ ಗೂ ಅಧಿಕ ಮೆಕ್ಕೆಜೋಳವನ್ನು ರೈತರು ಬೆಳೆದಿದ್ದು, ಸರ್ಕಾರ ಖರೀದಿ ಕೇಂದ್ರ ಸ್ಥಾಪಿಸುವ ಮೂಲಕ ರೈತರು ಬೆಳೆದ ಸಂಪೂರ್ಣ ಮೆಕ್ಕೆಜೋಳ ಖರೀದಿಸಲು ಮುಂದಾಗಬೇಕು ಎಂದು ಆಗ್ರಹಿಸಿದರು.

ಮಾಜಿ ಶಾಸಕ ಎಂ.ಬಸವರಾಜ ನಾಯ್ಕ, ಪಕ್ಷದ ಮುಖಂಡರಾದ ಚಂದ್ರಶೇಖರ ಪೂಜಾರ, ಬಿ.ಎಂ.ಸತೀಶ ಕೊಳೇನಹಳ್ಳಿ, ಧನಂಜಯ ಕಡ್ಲೇಬಾಳು, ಕೊಟ್ರೇಶ ಗೌಡ, ರಾಜು ವೀರಣ್ಣ, ಪ್ರವೀಣ ಜಾಧವ್, ಪಂಜು ಪೈಲ್ವಾನ್, ಮಂಜುನಾಥ, ರವಿಗೌಡ, ವೆಂಕಟೇಶ, ಚೇತನ್, ಅಜಯ್, ತಿಪ್ಪೇಸ್ವಾಮಿ ಇತರರು ಸುದ್ದಿಗೋಷ್ಠಿಯಲ್ಲಿದ್ದರು.

# ವಿದ್ಯೆಗೆ ಜೊತೆಗೆ ಕ್ರೀಡೆಯು ಅಷ್ಟೆ ಮುಖ್ಯ




**ನ್ಯಾಮತಿ :** ವಿದ್ಯೆಗೆ ಜೊತೆಗೆ ಕ್ರೀಡೆಯು ಅಷ್ಟೆ ಮುಖ್ಯ, ಊಟ ಆಟ ಪಾಠ ಇವುಗಳನ್ನು ದಿನಿ ನಿತ್ಯವೂ ಅಳವಡಿಸಿಕೊಂಡರೆ ನಿಮ್ಮ ಭವಿಷ್ಯ ಉತ್ತಮ ವಾಗುತ್ತದೆ ಎಂದು ಶಾಸಕ ಡಿ.ಜಿ.ಶಾಂತನಗೌಡರು ತಿಳಿಸಿದರು.

ಅವರು ನ್ಯಾಮತಿ ತಾಲೂಕಿನ ದಾನಿಹಳ್ಳಿ ಗ್ರಾಮದ ಹೊರವಲಯದಲ್ಲಿರುವ ತರಳಬಾಳು ಜಗದ್ಗುರು ವಿದ್ಯಾಸಂಸ್ಥೆಯ ಶ್ರೀ ತರಳಬಾಳು ಜಗದ್ಗುರು ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಮೈದಾನದಲ್ಲಿ ಶನಿವಾರ ಆಯೋಜಿಸಲಾಗಿದ್ದ 2025–26ನೇ ಸಾಲಿನ ಶಿವಮೊಗ್ಗ ವಲಯ ಮಟ್ಟದ ಪ್ರಾಥಮಿಕ ಶಾಲಾವಿಭಾಗದ ತರಳಬಾಳು ಕ್ರೀಡಾ ಕೂಟ ಸಮಾರಂಭದ ಉದ್ಘಾಟನೆಯನ್ನು ನೆರವೇರಿಸಿ ಮಾತನಾಡಿದರು.

ಕೇವಲ ಪಾಠ ಕಲಿತರೆ ಸಾಮಾಜಿಕವಾಗಿ ಬೆಳೆಯಲು ಸಾಧ್ಯವಿಲ್ಲ, ಕಲಿತ ವಿದ್ಯೆ ಹಾಳಾಗದಂತೆ ಇತರರಿಗೂ ಹೇಳುವ ಮೂಲಕ ಹಂಚಿ ಜ್ಞಾನವಂತ ಕಾರ್ಖಾನೆ ನಿರ್ಮಾಣವಾಗಬೇಕು ಹಾಗೆ ವಿದ್ಯೆಯೊಂದಿಗೆ ಕ್ರೀಡೆಯಲ್ಲಿ ಭಾಗವಹಿಸಿ ಗೆಲವು ಸಾಧಿಸಿ ರಾಜ್ಯ, ಅಂತರಾಜ್ಯ ಮಟ್ಟದಲ್ಲಿ ಸಾಧನೆ ಮಾಡಬೇಕೆಂದು ಹೇಳಿದರು

ಶಿವಮೊಗ್ಗ ಪ್ರಾದೇಶಿಕ ಅಧಿಕಾರಿ ಪಿ.ಬಿ.ತಿಪ್ಪೇಸ್ವಾಮಿ ಮಾತನಾಡಿ ಇಲ್ಲಿ ಬಾವೈಕ್ಯತೆಯಿಂದ ಕೂಡಿದ ಕ್ರೀಡಾ ಕೂಟವಾಗಿದೆ. ನೀವೆಲ್ಲ ಅತ್ಯುತ್ತಮವಾಗಿ ಆಟವಾಡಿ ತರಳಬಾಳು ಸಿರಿಗೆರೆ ಸಂಸ್ಥೆಗೆ ಹೆಸರು ತನ್ನಿರಿ ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಆಡಳಿತ ಮಂಡಳಿಯ ಅಧ್ಯಕ್ಷ ಡಿ.ತೀರ್ಥಲಿಂಗಪ್ಪ ವಹಿಸಿ ಮಾತನಾಡಿದರು. ನ್ಯಾಮತಿ ತಾಲೂಕು ಸಾಧು ವೀರಶೈವ ಸಮಾಜದ ಅಧ್ಯಕ್ಷ ಜಿ.ಶಿವಪ್ಪ ಕ್ರೀಡೆಯ ಧ್ವಜಾರೋಹಣ ನೆರವೇರಿಸಿದರು. ಆಡಳಿತ ಮಂಡಳಿಯ ಉಪಾಧ್ಯಕ್ಷ ಪಿ.ಜಿ.ಈಶ್ವರಪ್ಪಗೌಡ್ರು ವಿದ್ಯಾರ್ಥಿಗಳಿಂದ ಕ್ರೀಡಾ ಜ್ಯೋತಿ ಸ್ವೀಕರಿಸಿದರು.ದೈಹಿಕ ಶಿಕ್ಷಣಾಧಿಕಾರಿ ಜಗದೀಶ್ ಗುಂಡು ಎಸೆತದ ಮೂಲಕ ಕ್ರೀಡಾ ಕೂಟಕ್ಕೆ ಚಾಲನೆ ನೀಡಿದರು. ಕ್ರೀಡಾ ಕೂಟಕ್ಕೆ ಬಸವಪಟ್ಟಣ, ಬೆನಕನಹಳ್ಳಿ, ಚನ್ನಗಿರಿ, ಹರಮಗಟ್ಟ, ನಲ್ಲೂರು, ಸೂಗೂರು, ತವರಚಟ್ನಹಳ್ಳಿ, ದಾನಿಹಳ್ಳಿ, ತರಳವಾಳು ಶಾಲೆಯ ಮಕ್ಕಳಿಗೆ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಚಂದ್ರಪ್ಪ, ಜಿ.ಮಲ್ಲೇಶಪ್ಪ, ಎಸ್.ಆರ್.ಬಸವರಾಜಪ್ಪ, ದಾನಿಹಳ್ಳಿ ಹಾಲೇಶಪ್ಪ, ಡಿ.ಪಂಚಪ್ಪ , ಸಹ ಶಿಕ್ಷಕಿ ವಿದ್ಯಾ ಬಿ , ಮುಖ್ಯ ಉಪಾಧ್ಯಾಯ ಟಿ .ಜಿ.ಎಸ್.ಹಾಲೇಶ್ ಮತ್ತಿತರರಿದ್ದರು.

# ಸಾಮಾಜಿಕ ನಿರ್ವಹಣೆ ಕುರಿತು ಕಾರ್ಯಗಾರ

**ರಾಮನಗರ:** ಬೆಂಗಳೂರಿನ ಕೆಸಿಟಿಯು, ಟಿಇಸಿಎಚ್‌ಎಸ್‌ಒಕೆ ಹಾಗೂ ಬೆಂಗಳೂರು ದಕ್ಷಿಣ ಜಿಲ್ಲಾ ಕೈಗಾರಿಕಾ ಕೇಂದ್ರದ ವತಿಯಿಂದ ಕೇಂದ್ರ ಸರ್ಕಾರದ ಆರ್‌ಎಎಂಪಿ ಯೋಜನೆಯಡಿ ಟಿಆರ್‌ಇಡಿಎಸ್ ಮತ್ತು ಇಎಸ್‌ಎಂ ಕುರಿತು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ (ಎಂಎಸ್‌ಎಂಇ) ಕೈಗಾರಿಕೆಗಳಿಗೆ ರಾಜ್ಯ ಸರ್ಕಾರದಿಂದ 2025–30ನೇ ಕೈಗಾರಿಕಾ ನೀತಿಯಡಿ ದೊರೆಯುವ ಬಂಡವಾಳ ಹೂಡಿಕೆ ಸಹಾಯಧನ, ಸ್ಟಾಂಪ್ ಡ್ಯೂಟಿ ವಿನಾಯಿತಿ, ವಿದ್ಯುತ್ ತೆರಿಗೆ ವಿನಾಯಿತಿ ಮುಂತಾದ ಉತ್ತೇಜನ ಮತ್ತು ರಿಯಾಯಿತಿಗಳು ಹಾಗೂ ತಮ್ಮ ಸರಕು/ಸೇವೆಗಳ

ಬಿಲ್ ಡಿಸ್ಕೌಂಟ್ ಪ್ರಕ್ರಿಯೆಯನ್ನು ಪಾರದರ್ಶಕ ಮತ್ತು ವೇಗವಾಗಿಸಲು ಸರ್ಕಾರ ಪ್ರಾರಂಭಿಸಿರುವ ಡಿಜಿಟಲ್ ವೇದಿಕೆ ಹಾಗೂ ಎಂಎಸ್‌ಎಂಇ ಘಟಕಗಳಲ್ಲಿ ಪರಿಸರ ಹಾಗೂ ಸಾಮಾಜಿಕ ನಿರ್ವಹಣೆ ಕುರಿತು ಭಾರತ ಸರ್ಕಾರದಿಂದ ಪ್ರಾರಂಭಿಸಲಾದ ಮಹತ್ವ ಯೋಜನೆಗಳ ಬಗ್ಗೆ ಡಿ.9ರಂದು ಬೆಳಿಗ್ಗೆ 10:30ಕ್ಕೆ ಬಿಡದಿ ಕೈಗಾರಿಕೆ ಸಂಘ, ಬಿಡದಿ ಕೈಗಾರಿಕಾ ಪ್ರದೇಶ ಸಭಾಂಗಣದಲ್ಲಿ ಒಂದು ದಿನದ ಕಾರ್ಯಗಾರವನ್ನು ಆಯೋಜಿಸಲಾಗಿದೆ.

ಜಿಲ್ಲೆಯ ಎಲ್ಲಾ ಉದ್ದಿಮೆದಾರರು ಕಾರ್ಯಗಾರದಲ್ಲಿ ಭಾಗವಹಿಸಿ ಸದುಪಯೋಗ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗೆ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಕಂದಾಯ ಭವನ, ಕೊಠಡಿ ಸಂಖ್ಯೆ:

302, 303 ಮತ್ತು 304, 2ನೇ ಮಹಡಿ, ಬಿ.ಎಂ ರಸ್ತೆ, ಬೆಂಗಳೂರು ದಕ್ಷಿಣ ಜಿಲ್ಲೆ (ರಾಮನಗರ) 562159. ಮೊ.ನಂ: 080–22220122/0212/8884569687 ಅನ್ನು ಸಂಪರ್ಕಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಲೂಕ ಆರೋಗ್ಯ ಕಾರ್ಯಾಲಯದಲ್ಲಿ ಮಹಾಪರಿ ನಿರ್ವಾಣ ದಿನಾಚರಣೆ



**ಗದಗ :** ತಾಲೂಕ ಆರೋಗ್ಯ ಅಧಿಕಾರಿಗಳ ಕಾರ್ಯಾಲಯದಲ್ಲಿ ಸಂವಿಧಾನ ಶಿಲ್ಪಿ ಭಾರತ ರತ್ನ ಡಾ.ಬಿ.ಆರ್ ಅಂಬೇಡ್ಕರ್ ಅವರ 69ನೇ ಮಹಾಪರಿನಿರ್ವಾಣ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ತಾಲೂಕ ಆರೋಗ್ಯ ಅಧಿಕಾರಿಗಳಾದ ಡಾ.ಪ್ರೀತ್ ಖೋನಾ ಅವರು ಅಂಬೇಡ್ಕರ್ ಅವರ ಫೋಟೋಗೆ ಪುಷ್ಪ ನಮನವನ್ನು ಸಲ್ಲಿಸಿ ಮಾತನಾಡಿ ನಮ್ಮ ಭಾರತ ದೇಶಕ್ಕೆ ಅತ್ಯುತ್ತಮವಾದ ಸಂವಿಧಾನವನ್ನು ರಚಿಸಿಕೊಟ್ಟ ಕೀರ್ತಿ ಡಾ.ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ, ಅವರು ಮಹಾ ಮಾನವತಾವಾದಿ ಯಾದಂತೆ ಬಹುದೊಡ್ಡ ಕಾನೂನು ತಜ್ಞರು ಕೂಡ ಆಗಿದ್ದರು ಅವರು ಸದಾ ಅವರು ಅವಿಸ್ಮರಣೀಯರು ಎಂದರು.

ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಡಾ.ರಾಜೇಂದ್ರ ಎಸ್ ಗಡಾದ ಅವರು ಮಾತನಾಡಿ ಸಂವಿಧಾನ ಶಿಲ್ಪಿ ಶೋಷಿತರ ಏಳಿಗೆಗೆ ಜೀವನವನ್ನೇ ಮುಡುಪಾಗಿಟ್ಟ ಮಹಾನ್ ಹೋರಾಟಗಾರ ಮಾನವತವಾದಿ ಡಾ. ಅಂಬೇಡ್ಕರ್ ಎಂದರು, ಅವರ ಪುಣ್ಯತಿಥಿಯನ್ನು ಮಹಾಪರಿನಿರ್ವಾಣ ದಿನ ಎಂದು ರಾಷ್ಟ್ರದಾದ್ಯಂತ

ಆಚರಿಸಲಾಗುತ್ತಿದ್ದು ಅವರು ಹಾಕಿಕೊಟ್ಟ ದಾರಿಯಲ್ಲಿ ಪ್ರತಿಯೊಬ್ಬ ಪ್ರಜೆಗಳು ನಡೆಯುವ ಮೂಲಕ ಹಾಗೂ ಸಂವಿಧಾನವನ್ನು ಎಲ್ಲರೂ ಗೌರವಿಸುವ ಮೂಲಕ ಅವರಿಗೆ ನಮನಗಳನ್ನು ಸಲ್ಲಿಸೋಣ ಎಂದು ತಿಳಿಸಿದರು.

ಸಮಾರಂಭದಲ್ಲಿ ಡಾ.ಅಸ್ಮಾ ಹೆಸರೂರು ,ಡಾ. ಎಚ್ ಅಶ್ವಿನಿ, ಡಾ.ಬಿ ಕೆ ಪ್ರಿಯಾಂಕ, ಸುಜಾತ ಪಾಟೀಲ, ಎಸ್ ಎಸ್ ಬದ್ದಿ, ಸುಧಾ ಬೆಂತೂರು, ಕೆ ಎಮ್ ರಾಮಕೃಷ್ಣ , ವಿನಾಯಕ್ ಬಡಿಗೇರ, ಸಲೀಂ ನದಾಫ್, ಸರೋಜಾ ಕಟ್ಟಿಮನಿ, ಮೌಲಾಸಾಬ್ ಸಿದ್ದಿ, ಸಿಬ್ಬಂದಿವರ್ಗದವರು ಪಾಲ್ಗೊಂಡಿದ್ದರು.

# ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಗೌರಿಬಿದನೂರು ನಗರ ವ್ಯಾಪ್ತಿಯಲ್ಲಿ ಬರುವ ಬೀದಿ ನಾಯಿಗಳ ನಿರ್ವಹಣೆಯನ್ನು ನಗರಸಭೆ ವತಿಯಿಂದ ನಿರ್ವಹಿಸಲು ಉದ್ದೇಶಿಸಿದ್ದು, ನಗರ ವ್ಯಾಪ್ತಿಯ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣ ಆವರಣಗಳಲ್ಲಿ ವಾಸವಿರುವ ಬೀದಿ ನಾಯಿಗಳನ್ನು ಹಿಡಿದು ನಗರಸಭೆ ವತಿಯಿಂದ ನಿರ್ಮಿಸಿರುವ ಶೆಲ್ಟರ್ ಗಳಿಗೆ ಸ್ಥಳಾಂತರಿಸಿ ನಿರ್ವಹಣೆ ಮಾಡಲು ಉದ್ದೇಶಿಸಲಾಗಿದೆ, ಸದರಿ ಬೀದಿ ನಾಯಿಗಳ ನಿರ್ವಹಣೆಯನ್ನು ಮಾಡಲು ಎನ್.ಜಿ.ಓ ಸಂಸ್ಥೆಗಳಿಗೆ ವಹಿಸಲು ಉದ್ದೇಶಿಸಿದ್ದು ಇಚ್ಛೆಯುಳ್ಳ ಸಂಸ್ಥೆಗಳವರು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಗೌರಿಬಿದನೂರು ನಗರಸಭೆಯನ್ನು ಸಂಪರ್ಕಿಸಬಹುದೆಂದು ಗೌರಿಬಿದನೂರು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೀದಿ ನಾಯಿಗಳನ್ನು ದತ್ತು ಪಡೆಯಲು ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಗೌರಿಬಿದನೂರು ನಗರ ವ್ಯಾಪ್ತಿಯಲ್ಲಿ ಬರುವ ಬೀದಿ ನಾಯಿಗಳ ನಿರ್ವಹಣೆ ಹಾಗೂ ಸಂಬಂಧಿಸಿದ ನಾಯಿಗಳನ್ನು ಸಾಕಲು ಸಾರ್ವಜನಿಕರು ಅಥವಾ ಸಂಘ ಸಂಸ್ಥೆಗಳವರು ಬೀದಿ ನಾಯಿಗಳನ್ನು ದತ್ತು ನೀಡಲು/ಪಡೆಯಲು ನಿಯಮಾನುಸಾರ ಕ್ರಮ ವಹಿಸಲಾಗುವುದು. ದತ್ತು ಪಡೆಯಲು ಇಚ್ಛೆಯುಳ್ಳ ವ್ಯಕ್ತಿ ಅಥವಾ ಸಂಸ್ಥೆಗಳವರು, ಆಸಕ್ತಿಯುಳ್ಳವರು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

# ಕರ್ನಾಟಕ ರಾಜ್ಯ ಆಹಾರ ಆಯೋಗದ ಜಿಲ್ಲಾ ಪ್ರವಾಸ

**ಶಿವಮೊಗ್ಗ:** ಕರ್ನಾಟಕ ರಾಜ್ಯ ಆಹಾರ ಆಯೋಗವು ಡಿ. 8 ರಿಂದ 11 ರವರೆಗೆ ಶಿವಮೊಗ್ಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ಜಿಲ್ಲೆಯ ವಿವಿಧ ತಾಲೂಕುಗಳಿಗೆ ಭೇಟಿ ನೀಡಿ ನ್ಯಾಯಬೆಲೆ ಅಂಗಡಿ, ಆಹಾರ ಧ್ಯಾನ್ಯ ಸಗಟು ಮಳಿಗೆ, ಅಂಗನವಾಡಿ ಕೇಂದ್ರ, ಎಂ.ಎಸ್.ಪಿ.ಟಿ.ಸಿ., ಮಧ್ಯಾಹ್ನ ಉಪಹಾರ ಯೋಜನೆ, ಜಿಲ್ಲಾ ಆಸ್ಪತ್ರೆಯಲ್ಲಿರುವ ಎನ್.ಆರ್.ಸಿ. ಘಟಕ, ಹಾಗೂ ವಿವಿಧ ಇಲಾಖೆಗಳ ಪರೀಶೀಲನೆ, ಜಿಲ್ಲಾಧಿಕಾರಿ ಹಾಗೂ ವಿವಿಧ ಇಲಾಖೆಯೊಂದಿಗೆ ಸಭೆಯನ್ನು ನಡೆಸಿ ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಮಾಡಲಿದ್ದಾರೆ.

ಆಯೋಗದ ಪ್ರವಾಸದಲ್ಲಿ ಅಧ್ಯಕ್ಷರಾದ ಡಾ. ಹೆಚ್. ಕೃಷ್ಣ, ಸದಸ್ಯರಾದ ಲಿಂಗರಾಜ ಕೋಟೆ, ಸುಮಂತ್ ರಾವ್, ಮಾರುತಿ ಎಂ ದೊಡ್ಡಲಿಂಗಣ್ಣವರ, ಶ್ರೀಮತಿ ಎ. ರೋಹಿಣಿ ಪ್ರಿಯ ಮತ್ತು ಶ್ರೀಮತಿ ಕೆ.ಎಸ್.ವಿಜಯಲಕ್ಷ್ಮೀ ಪಾಲ್ಗೊಳ್ಳಲಿದ್ದಾರೆ ಎಂದು ಆಯೋಗದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಇಂದು ಅಪ್ರೆಂಟಿಸ್ಷಿಪ್ ಮೇಳ

**ಶಿವಮೊಗ್ಗ:** ಸರ್ಕಾರಿ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ ಬೆಂಗಳೂರು ಇವರ ಸೂಚನೆಯಂತೆ ಡಿ.08 ರಂದು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ(ಮಹಿಳಾ)ಶಿವಮೊಗ್ಗ, ಗಾಜನೂರು ಇಲ್ಲಿ ಪ್ರಧಾನ ಮಂತ್ರಿ ನ್ಯಾಷನಲ್ ಅಪ್ರೆಂಟಿಸ್ಷಿಪ್ ಮೇಳ(ಪಿಎಂಎನ್ ಎಎಂ) ವನ್ನು ಆಯೋಜಿಸಲಾಗಿದ್ದು, ಈ ಶಿಶಿಕ್ಷು ಮೇಳದಲ್ಲಿ ಜಿಲ್ಲೆಯ ಎಲ್ಲಾ ಸರ್ಕಾರಿ, ಅನುದಾನಿತ, ಖಾಸಗಿ ಸಂಸ್ಥೆಯ ಐ.ಟಿ.ಐ ಉತ್ತೀರ್ಣರಾದ ಎಲ್ಲಾ ವೃತ್ತಿಯ ತರಬೇತುದಾರರು ಭಾಗವಹಿಸಬಹುದಾಗಿದೆ ಎಂದು ಗಾಜನೂರು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

# ಚಾಣಕ್ಯ ಆಡಳಿತ ತರಬೇತಿಗೆ ಅರ್ಜಿ ಆಹ್ವಾನ

**ಹಾವೇರಿ:** ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯು ರಾಜ್ಯ ಬ್ರಾಹ್ಮಣ ಸಮುದಾಯದ ಪ್ರತಿಭಾವಂತ ಪದವೀಧರರು ನಾಗರೀಕ ಸೇವೆಗಳಾದ ಐ.ಎ.ಎಸ್ ಅಥವಾ ಕೆ.ಎ.ಎಸ್. ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆದು ಭಾರತದ ಮತ್ತು ಕರ್ನಾಟಕದ ಆಡಳಿತಾತ್ಮಕ ಸೇವೆಗಳಲ್ಲಿ ತೊಡಗಿಸಿಕೊಳ್ಳಲು ಉತ್ತೇಜನ ನೀಡುವ ಸಲುವಾಗಿ "ಚಾಣಕ್ಯ ಆಡಳಿತ ತರಬೇತಿ"ಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಲ್ಲಿ ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಗಳು ಐ.ಎ.ಎಸ್. ಅಥವಾ ಕೆ.ಎ.ಎಸ್ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ತರಬೇತಿ ಪಡೆಯುವ ಸಂಬಂಧ 2025–26 ನೇ ಸಾಲಿನಲ್ಲಿ ಪ್ರವೇಶಾತಿ ಪಡೆದು ಪಾವತಿಸಲಾದ ತರಬೇತಿ ಶುಲ್ಕದ ಮೊತ್ತದಲ್ಲಿ ಗರಿಷ್ಠ ರೂ. 1.00 ಲಕ್ಷ ( ಒಂದು ಲಕ್ಷ ರೂಪಾಯಿ) ಗಳಿಗೆ ಮಿತಿಗೊಳಿಸಿ ಆಃಖಿ ಮೂಲಕ ನೇರವಾಗಿ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಮಾಡಲಾಗುವುದು.

ಆಸಕ್ತ ಅಭ್ಯರ್ಥಿಗಳು ದಿನಾಂಕ 15–12–2025ರ ಸಾಯಂಕಾಲ 5 ಗಂಟೆಯೊಳಗೆ https://ksbdb.karnataka.gov.in ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08375–249191 ಗೆ ಅಥವಾ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ, ಜಿಲ್ಲಾ ಆಡಳಿತ ಭವನ, ಎ ಬ್ಲಾಕ್, 2 ನೇ ಮಹಡಿ, ದೇವಗಿರಿ–ಹಾವೇರಿ ಈ ವಿಳಾಸ ಹಾಗೂ ಸಹಾಯವಾಣಿ 08029605888 /+918762249230 ಸಂಪರ್ಕಿಸಬಹುದಾಗಿದೆ.

ಜಿಲ್ಲೆಯ ಎಲ್ಲ ಆಸಕ್ತ ಹಿಂದುಳಿದ ಬ್ರಾಹ್ಮಣ ಸಮುದಾಯದ ಅಭ್ಯರ್ಥಿಗಳು ಈ ಯೋಜನೆಯ ಸದುಪಯೋಗ ಪಡೆಯಬೇಕೆಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಾ.ಬಿ.ಆರ್.ಅಂಬೇಡ್ಕರ್ ಅವರು ಸಮಾಜದಲ್ಲಿ ಮರೆಯಲಾದ ಶಕ್ತಿ




**ಹಾವೇರಿ:** ಭಾರತ ದೇಶವು ಇಂದು ಎಲ್ಲ ಕ್ಷೇತ್ರಗಳಲ್ಲಿ ಸದೃಢವಾಗಿ ಬೆಳೆದಿದೆ ಇದಕ್ಕೆ ಡಾ ಬಿ ಆರ್ ಅಂಬೇಡ್ಕರ್ ರವರು ಕೊಟ್ಟ ಸಂವಿಧಾನವು ಮಹತ್ವದ ಕಾಣಿಕೆಯಾಗಿದೆ ಎಂದು ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ ದಾನಮ್ಮನವರ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ನಗರ ಸಭೆ ಹಾಗೂ ಪರಿಶೀಷ್ಟ ಜಾತಿ ಒಕ್ಕೂಟಗಳು ಹಾವೇರಿ ಇವರ ಸಂಯುಕ್ತ ಆಶ್ರಯದಲ್ಲಿ ಶನಿವಾರ ಹಮ್ಮಿಕೊಳ್ಳಲಾಗಿದ್ದ ಡಾ ಬಿ ಆರ್ ಅಂಬೇಡ್ಕರ್ ರವರ 69 ನೇ ಮಹಾಪರಿನಿರ್ವಾಣ (ಪುಣ್ಯ ಸ್ಮರಣೆ) ಕಾರ್ಯಕ್ರಮದಲ್ಲಿ ಡಾ. ಬಿ ಆರ್ ಅಂಬೇಡ್ಕರ್ ರವರ ಭಾವ ಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, ಡಾ ಬಿ ಆರ್ ಅಂಬೇಡ್ಕರ್ ರವರ ಜೀವನ ಚರಿತ್ರೆ ಅವರ ಆದರ್ಶದ ಬದುಕು ಇವತ್ತಿಗೂ ಸಹ ನಮ್ಮೆಲ್ಲರಿಗೂ ಸ್ಪೂರ್ತಿದಾಯಕವಾಗಿದೆ. ಇಡೀ ಜಗತ್ತಿನಲ್ಲಿಯೇ ಅತಿ ಹೆಚ್ಚು ಪ್ರತಿಭೆ ಯಾರಿಗಾದರೂ ಇದ್ದರೆ ಅದು ಡಾ. ಬಿ ಆರ್ ಅಂಬೇಡ್ಕರ್ ಅವರಿಗೆ ಮಾತ್ರ, ದಲಿತ ಸಮುದಾಯದಿಂದ ಬಂದಂತಹ ಇವರು ಸಮಾಜದಲ್ಲಿ ಸಾಕಷ್ಟು ನೋವುಗಳನ್ನು ಮತ್ತು ಅವಮಾನಗಳನ್ನು ಅನುಭವಿಸಿದರು ಇದು ಅವರ ಮೇಲೆ ತುಂಬಾನೇ ಪ್ರಭಾವ ಬೀರಿತು ಅದನ್ನೆಲ್ಲ ಮೆಟ್ಟಿನಿಂತು ಸಮಾಜದಲ್ಲಿನ ಅಸಮಾನತೆಯನ್ನು ಹೋಗಲಾಡಿಸಲು ಹೋರಾಟ ಮಾಡಿದರು.

ಭಾರತದ ಸಂವಿಧಾನ ರಚಿಸುವ ಸಂದರ್ಭದಲ್ಲಿ ಜಗತ್ತಿನ 60 ದೇಶಗಳ ಸಂವಿಧಾನಗಳನ್ನು ಅಭ್ಯಸಿಸಿ ಭಾರತಕ್ಕೆ ಶ್ರೇಷ್ಠ ಸಂವಿಧಾನ ನೀಡಿದ ಶ್ರೇಯಸ್ಸು ಇವರಿಗೆ ಸಲ್ಲುತ್ತದೆ ಎಂದರು.

ಡಾ ಬಿ ಆರ್ ಅಂಬೇಡ್ಕರ್ ರವರು ಎಂದು ಮರೆಯಲಾಗದ ಚೈತನ್ಯ ಶಕ್ತಿ, ಕೇವಲ ಅವರ ಹೆಸರನ್ನು ಬಳಸಿಕೊಂಡು ನಾವುಗಳು ಓಡಾಡುವುದಾಗಬಾರದು ಸಂವಿಧಾನದಲ್ಲಿ ಅವರು ಕೊಟ್ಟಂತಹ ಆಶಯಗಳನ್ನು ಮತ್ತು ಆಚಾರ ವಿಚಾರಗಳನ್ನು ಎತ್ತು ಹಿಡಿದಾಗ ಮಾತ್ರ ಅವರಿಗೆ ಗೌರವ ಕೊಟ್ಟಂತಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ನಗರಾಭಿವೃದ್ಧಿ ಪ್ರಧಿಕಾರದ ಅಧ್ಯಕ್ಷರಾದ ಎಸ್ ಎಫ್ ಎನ್ ಗಾಜಿಗೌಡ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರುಚಿ ಬಿಂದಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯಶೋಧ ವಂಟಗೋಡಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಶಾಂತ್ ವರಗಪ್ಪನವರ, ಜಿಲ್ಲಾಮಟ್ಟದ ಅಧಿಕಾರಿಗಳು ಹಾಗೂ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

**ಪುತ್ಥಳಿಗೆ ಮಾಲಾರ್ಪಣೆ:** ಇದಕ್ಕೂ ಮೊದಲು ನಗರದ ಅಂಬೇಡ್ಕರ್ ವೃತ್ತದಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್‌ವರ ಪುತ್ಥಳಿಗೆ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ, ಜಿ.ಪಂ.ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ರುಚಿ ಬಿಂದಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಮತಿ ಯಶೋಧಾ ವಂಟಗೋಡಿ ಅವರು ಮಾಲಾರ್ಪಣೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಿದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಸ್.ಎಫ್.ಎನ್.ಗಾಜಿಗೌಡ್ರ, ನಗರಸಭೆ ಉಪಾಧ್ಯಕ್ಷ ಮಲ್ಲಿಕಾರ್ಜುನ ಸಾತೇನಹಳ್ಳಿ, ಮಾಜಿ ಶಾಸಕ ನೆಹರು ಓಲೇಕಾರ, ವಿವಿಧ ಇಲಾಖೆ ಅಧಿಕಾರಿಗಳು ಸಮಾಜ ಮುಖಂಡರು ಉಪಸ್ಥಿತರಿದ್ದರು.

### ಡಾ.ಬಿ.ಆರ್.ಅಂಬೇಡ್ಕರ್ ಮಹಾಪರಿನಿರ್ವಾಣ ದಿನಾಚರಣೆ

# ಸ್ವಾಭಿಮಾನದ ಬದುಕಿಗೆ ಅಡಿಪಾಯ ಹಾಕಿದ ಧೀಮಂತ ನಾಯಕ



**ಚಿತ್ರದುರ್ಗ :** ಸಂವಿಧಾನದ ಮೂಲಕ ಸಮಾಜದಲ್ಲಿ ಶೋಷಿತರು ಸ್ವಾಭಿಮಾನದಿಂದ ಬದುಕಲು ಅವಕಾಶ ಕಲ್ಪಿಸಿದ ಧೀಮಂತ ನಾಯಕ ಡಾ.ಬಿ.ಆರ್.ಅಂಬೇಡ್ಕರ್ ಎಂದು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ಎಸ್.ವಿನಾಯಕ ತೊಡರನಾಳ್ ಹೇಳಿದರು.

ನಗರದ ಜಿಲ್ಲಾ ಪತ್ರಕರ್ತರ ಭವನದ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ಶನಿವಾರ ಡಾ.ಬಿ.ಆರ್.ಅಂಬೇಡ್ಕರ್ ಅವರ 69ನೇ ಮಹಾಪರಿನಿರ್ವಾಣ ದಿನಾಚರಣೆಯಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ದಲಿತರು, ಶೋಷಿತರು ಹಾಗೂ ದೇಶದ ಸಮಸ್ತ ಸ್ತ್ರೀ ಕುಲದ ವಿಮೋಚಕರಾಗಿ ಡಾ.ಬಿ.ಆರ್.ಅಂಬೇಡ್ಕರ್ ಆತ್ಮಸ್ಥೈರ್ಯ ತುಂಬಿದರು. ಸಮಾಜದಲ್ಲಿ ಶೋಷಣೆ ಹಾಗೂ ದಬ್ಬಾಳಿಕೆ ಹೋಗಲಾಡಿಸಲು ಪ್ರಯತ್ನಿಸಿದರು. ಸಂವಿಧಾನದಲ್ಲಿ ಸಮಾನತೆ ತತ್ವ ಸಾಕಾರಗೊಳಿಸಿ ಶಿಕ್ಷಣ, ಸಂಘಟನೆ ಹಾಗೂ ಹೋರಾಟಕ್ಕೆ ಕರೆ ನೀಡಿದರು. ಮುಂದುವರಿದ ಸಮುದಾಯಗಳ ನಡುವೆ ದಮನಿತರಿಗೆ ಡಾ.ಬಿ.ಆರ್.ಅಂಬೇಡ್ಕರ್ ಧ್ವನಿಯಾಗಿದ್ದಾರೆ. ದೇಶದ ಪ್ರತಿಯೊಬ್ಬ ಪ್ರಜೆಗೂ ಸಮಾನ ಬದುಕು ಹಾಗೂ ಹಕ್ಕು ಕೊಟ್ಟ ಮಹಾನ್ ಚೇತನಕ್ಕೆ ನಾವೆಲ್ಲರೂ ಋಣಿಯಾಗಿರಬೇಕು ಎಂದು ಹೇಳಿದರು.

ಅಂಬೇಡ್ಕರ್ ಹೋರಾಟ ಮಾಡುವುದರ ಜೊತೆಗೆ ತಮ್ಮ ವಿಚಾರಗಳಿಗೆ ಬರಹದ ರೂಪ ನೀಡಿದ್ದಾರೆ. ತಮ್ಮ ಜೀವಿತ ಕೊನೆಗಾಲದಲ್ಲಿ ಸಮಾನತೆಯನ್ನು ಎತ್ತಿ ಹಿಡಿದ ಬೌದ್ಧಧರ್ಮ ಸ್ವೀಕರಿಸಿ, ಬುದ್ಧ ವಿಚಾರಗಳನ್ನು ತಮ್ಮ ಬೌದ್ಧ ಹಾಗೂ ದಮ್ಮ ಗ್ರಂಥ ಕೃತಿಯಲ್ಲಿ ಸಂಗ್ರಹಿಸಿದರು. 1956 ಡಿ.06 ರಂದು ಅಂಬೇಡ್ಕರ್ ಮರಣ ಹೊಂದಿದ ನಂತರ ಮಹಾಪರಿನಿರ್ವಾಣ ದಿನ ಎಂದು ಗೌರವದಿಂದ ಆಚರಿಸಲಾಗುತ್ತಿದೆ ಎಂದರು.

ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಬರೆದ ಸಂವಿಧಾನ ದೇಶದ ಧರ್ಮಗ್ರಂಥವಾಗಿದೆ. ಈ ಸಂವಿಧಾನದ ಆಶಯದಲ್ಲಿ ದೇಶದ ಶಾಸಕಾಂಗ, ಕಾಯಾರ್ಂಗ, ನ್ಯಾಯಾಂಗಗಳು ಕಾರ್ಯನಿರ್ವಹಿಸುತ್ತಿವೆ. ಸಂವಿಧಾನ ನೀಡಿರುವ ಅಭಿವ್ಯಕ್ತಿ ಸ್ವಾತಂತ್ರ್ಯದ ನಡುವೆಯೇ ಎಲ್ಲಾ ಪತ್ರಿಕೆ ಹಾಗೂ ಮಾಧ್ಯಮಗಳು ಕಾರ್ಯನಿರ್ವಹಿಸುತ್ತಿವೆ. ಅಂಬೇಡ್ಕರ್ ಅವರ ಆಶಯ ಈಡೇರಿಸುವಲ್ಲಿ ಪ್ರತಿಯೊಬ್ಬರು ಶ್ರಮಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ವೀರೇಶ ವಿ.ಅಪ್ಪು, ಖಜಾಂಚಿ ಡಿ.ಕುಮಾರಸ್ವಾಮಿ, ಉಪಾಧ್ಯಕ್ಷ ಸಿ.ಪಿ.ಮಾರುತಿ, ಕಾರ್ಯದರ್ಶಿ ವಿ.ಚಂದ್ರಪ್ಪ, ಹೆಚ್.ತಿಪ್ಪೇಸ್ವಾಮಿ, ತಿಪ್ಪೇಸ್ವಾಮಿ ನಾಕಿಕೆರೆ, ನಿರ್ದೇಶಕರಾದ ಜಿ.ಓ.ಎನ್. ಮೂರ್ತಿ, ಜಡೇಕುಂಟೆ ಮಂಜುನಾಥ, ಟಿ.ದರ್ಶನ್, ಎಸ್.ಬಿ.ರವಿಕುಮಾರ್ ಉಗ್ರಾಣ, ಪತ್ರಕರ್ತರಾದ ಗೊಂಡಬಾಳ ಬಸವರಾಜ್, ಸುರೇಶ್ ಪಟ್ಟಣ್, ಹನುಮಂತರಾಜ, ಆರ್.ಶಿವರಾಜ್ ಸೇರಿದಂತೆ ಮತ್ತಿತರು ಇದ್ದರು.

# ಜಿಲ್ಲಾ ಮಟ್ಟದ ಕ್ರೀಡಾಕೂಟ

**ಹಾವೇರಿ:** ಭಾರತ ಸರ್ಕಾರದ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದ ಮೇರಾ ಯುವ ಭಾರತ ಹಾವೇರಿ ಕಚೇರಿ ವತಿಯಿಂದ ಜಿಲ್ಲಾ ಮಟ್ಟದ ಕ್ರೀಡಾಕೂಟವನ್ನು ಡಿಸೆಂಬರ್ 15 ರಂದು ಬೆಳಿಗ್ಗೆ 9 ಗಂಟೆಗೆ ಹಾವೇರಿ ನಗರದ ಹೊಸಮನಿ ಸಿದ್ದಪ್ಪ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ.

ಯುವಕರಿಗೆ ವಾಲಿಬಾಲ್, 100 ಮೀಟರ್ ಓಟ ಹಾಗೂ ಚಕ್ರ ಎಸೆತ, ಯುವತಿಯರಿಗೆ ಖೋ–ಖೋ, 100 ಮೀ.ಓಟ ಹಾಗೂ ಗುಂಡು ಎಸೆತ ಕ್ರೀಡೆಗಳು ಜರುಗಲಿದ್ದು, 15 ರಿಂದ 29 ವರ್ಷದೊಳಗಿನವರು ಈ ಕ್ರೀಡಾಕೂಟದಲ್ಲಿ ಭಾಗವಹಿಸಬಹುದು ಎಂದು ಜಿಲ್ಲಾ ಯುವ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.09 ರಂದು ಸಮಗ್ರ ಮಕ್ಕಳ ರಕ್ಷಣಾ ಯೋಜನೆ ಕುರಿತು ಪ್ರಗತಿ ಪರಿಶೀಲನಾ ಸಭೆ

**ಬಳ್ಳಾರಿ:** ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯನ್ನು ಡಿ.09 ರಂದು ಬೆಳಗ್ಗೆ 11 ಗಂಟೆಗೆ ನಗರದ ಅನಂತಪುರ ರಸ್ತೆಯಲ್ಲಿರುವ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ತಿಳಿಸಿದ್ದಾರೆ.

# ಸಹಾಯ ಧನಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿನ ಪ್ರಧಾನ ಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ಧರ್ತಿ ಅಭಾ ಜನ ಜಾತಿಯ ಗ್ರಾಮ ಉತ್ಕರ್ಷ ಅಭಿಯಾನದಡಿ ಮೀನುಮಾರಾಟಗಾರರಿಂದ ಸಹಾಯಧನ ಯೋಜನೆಗೆ ಅರ್ಜಿ ಆಹ್ವಾನಿಸಲಾಗಿದೆ.

ಹೊನ್ನಾಳಿ ತಾಲ್ಲೂಕಿನ ಕೋಣನತಲೆ ಗ್ರಾಮ ಮತ್ತು ನ್ಯಾಮತಿ ತಾಲ್ಲೂಕಿನ ಕುದುರೆಕೊಂಡ ಈ ಗ್ರಾಮಗಳಲ್ಲಿನ ಪರಿಶಿಷ್ಟ ಪಂಗಡದ ಮೀನುಗಾರರು ಅರ್ಜಿಯನ್ನು ಡಿಸೆಂಬರ್ 20 ರೊಳಗಾಗಿ ಕಚೇರಿಗೆ ಸಲ್ಲಿಸಬೇಕೆಂದು ಎಂದು ಹೊನ್ನಾಳಿ ತಾಲ್ಲೂಕಿನ ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಅಂಚೆ ಇಲಾಖೆಯಿಂದ ಸೆಲ್ಸ್ ಬುಕ್ಕಿಂಗ್ ಸೌಲಭ್ಯ

**ದಾವಣಗೆರೆ :** ಭಾರತೀಯ ಅಂಚೆ ಇಲಾಖೆಯಿಂದ ಸೆಲ್ಸ್ ಬುಕ್ಕಿಂಗ್ ಹೊಸ ಸೌಲಭ್ಯವನ್ನು ಆಯೋಜಿಸಲಾಗಿದೆ.

ಈ ಸೌಲಭ್ಯದಿಂದ ನಾಗರಿಕರು ತಮ್ಮ ಮೊಬೈಲ್ ಅಥವಾ ಕಂಪ್ಯೂಟರ್ ಬಳಸಿ ಸ್ಪೀಡ್ ಪೋಸ್ಟ್ , ಪಾರ್ಸಲ್ ಸೇರಿದಂತೆ ವಿವಿಧ ಅಂಚೆ ಸೇವೆಗಳನ್ನು ಮನೆಯಿಂದಲೇ ಬುಕ್ ಮಾಡುವ ಅವಕಾಶವನ್ನು ಪಡೆಯಬಹುದು. ಇದರ ಮೂಲಕ ಅಂಚೆ ಕಚೇರಿಯಲ್ಲಿ ಸಾಲಿನಲ್ಲಿ ನಿಲುವ ಅನಿವಾರ್ಯತೆ ಕಡಿಮೆಯಾಗುತ್ತದೆ ಹಾಗೂ ಸಮಯದ ಉಳಿತಾಯವಾಗುತ್ತದೆ.

ಸೇವೆಯನ್ನು ಬಳಸಲು ದಯವಿಟ್ಟು https://app.indiapost.gov.in/customer.selfservice/home ಬುಕಿಂಗ್ ಪೂರ್ಣಗೊಳಿಸಿದ ನಂತರ ಸೃಷ್ಟಿಯಾಗುವ ಲೇಬಲ್, ಕ್ಯೂಆರ್ ಅನ್ನು ಮುದ್ರಿಸಿ ಹತ್ತಿರದ ಯಾವುದೇ ಅಂಚೆ ಕಚೇರಿಯಲ್ಲಿ ಸ್ಪೀಡ್ ಪೋಸ್ಟ್, ಪಾರ್ಸೆಲ್ ಅನ್ನು ಬುಕ್ಕಿಂಗ್ ಸಂಖ್ಯೆಯ ಮೂಲಕ ಹಸ್ತಾಂತರಿಸಬಹುದು. ಸಾರ್ವಜನಿಕರು ಈ ನವೀನ ಡಿಜಿಟಲ್ ಸೌಲಭ್ಯವನ್ನು ಹೆಚ್ಚಿನ ಸಂಖ್ಯೆಯಲ್ಲಿ ಬಳಸಿಕೊಳ್ಳಬೇಕೆಂದು ಅಂಚೆ ಅಧೀಕ್ಷಕರಾದ ಚಂದ್ರಶೇಖರ ತಿಳಿಸಿದ್ದಾರೆ.

## ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿನ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಉದ್ಯೋಗಿನಿ, ಚೇತನಾ, ಧನಶ್ರೀ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ ಹಾಗೂ ಮಾಜಿ ದೇವದಾಸಿ ಪುನರ್ವಸತಿ ಯೋಜನೆಗಳಡಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಮಹಿಳಾ ಫಲಾನುಭವಿಗಳು ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಪೋರ್ಟಲ್ http://sevasindhu.karnataka.gov.in ಮೂಲಕ ಡಿಸೆಂಬರ್ 15 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಹಾಗೂ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಎಂ.ಸಿ.ಸಿ ಬಿ ಬ್ಲಾಕ್ ಕುವೆಂಪು ನಗರ, 14ನೇ ಮುಖ್ಯರಸ್ತೆ ಸಂಪರ್ಕಿಸಬಹುದೆಂದು ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

## ಪಶು ಸಂಗೋಪನಾ ಇಲಾಖೆಯಿಂದ ಸಿಗುವ ಸೌಲಭ್ಯ, ಲಸಿಕೆ ನೀಡಲು ಸೂಚನೆ

**ದಾವಣಗೆರೆ :** ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ದಾವಣಗೆರೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ ಮತ್ತು ಅರೆ ತಾಂತ್ರಿಕ ಸಿಬ್ಬಂದಿ ವರ್ಗದವರಿಗೆ ಜಿಲ್ಲಾಧಿಕಾರಿಗಳ ಕಚೇರಿಯ ತುಂಗಭದ್ರ ಸಭಾಂಗಣ ಡಿಸೆಂಬರ್ 5 ರಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ್ ವಿಠ್ಠಲ್ ರಾವ್ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಲಾಯಿತು.

ಸಭೆಯಲ್ಲಿ ಇಲಾಖಾ ಕಾರ್ಯಚಟುವಟಿಕೆಗಳ ಬಗ್ಗೆ ಕೂಲಂಕುಷವಾಗಿ ಮಾಹಿತಿ ಪಡೆದು ಜಿಲ್ಲೆಯ ಎಲ್ಲಾ ಪಶುವೈದ್ಯ ಸಂಸ್ಥೆಗಳಲ್ಲಿ ಅಧಿಕಾರಿ ಮತ್ತು ತಾಂತ್ರಿಕ ಸಿಬ್ಬಂದಿವರ್ಗದವರು ಕಚೇರಿ ಕರ್ತವ್ಯದ ಸಮಯದಲ್ಲಿ ಸಮಯ ಪಾಲನೆ ಮಾಡುವ ಜೊತೆಗೆ ಇಲಾಖೆಯಿಂದ ಸಿಗುವ ಚಿಕಿತ್ಸೆ ಮತ್ತು ಇತರೆ ಸವಲತ್ತು ಒದಗಿಸುವಂತೆ ಸೂಚನೆ ನೀಡಿದರು.

ತುರ್ತು ಸಂದರ್ಭಗಳಲ್ಲಿ ಪಶು ಪಾಲಕರ ಜಾನುವಾರುಗಳಿಗೆ ಗುಣಮಟ್ಟದ ಸೇವೆ ಒದಗಿಸುವಂತೆ ಹಾಗೂ ಜಾನುವಾರುಗಳಿಗೆ ಚಿಕಿತ್ಸೆಗೆ ಅವಶ್ಯಕತೆಯಿರುವ ಔಷಧಿಗಳ ಕೊರತೆಯಾಗದಂತೆ ನೋಡಿಕೊಳ್ಳಲು ಹಾಗೂ ಕಾಲಕಾಲಕ್ಕೆ ಅನ್ವಯವಾಗುವ ಲಸಿಕೆಗಳನ್ನು ಜಾನುವಾರುಗಳಿಗೆ ಹಾಕಲು ಇಲಾಖಾ ಅಧಿಕಾರಿಗಳಿಗೆ ನಿರ್ದೇಶನ ನೀಡಿ ಪಶುಸಂಸ್ಥೆಗಳ ಕಚೇರಿ ಮತ್ತು ಆವರಣದಲ್ಲಿ ಸ್ವಚ್ಛತೆ ಕಾಪಾಡಿಕೊಂಡು ಕಚೇರಿಯ ಎಲ್ಲಾ ಸಮಯದಲ್ಲಿ ಅಧಿಕಾರಿ ಮತ್ತು ಸಿಬ್ಬಂದಿಗಳು ರೈತರ ದೂರವಾಣಿ ಕರೆಗಳನ್ನು ಸ್ವೀಕರಿಸಿ ರೈತರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವಂತೆ ಸೂಚನೆ ನೀಡಿದರು.

ಸಭೆಯಲ್ಲಿ ಪಶುಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ; ಹೆಚ್.ಎಂ ಮಹೇಶ್, ಹಿರಿಯ ಪಶು ವೈದ್ಯಾಧಿಕಾರಿಗಳು, ಅರೆತಾಂತ್ರಿಕ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

## ಇಪಿಎಫ್‌ಓ: ಡಿ.15 ರಂದು ಪಿಂಚಣಿ ಅದಾಲತ್

**ಬಳ್ಳಾರಿ:** ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ಡಿಸೆಂಬರ್ 15 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಾದೇಶಿಕ ಕಚೇರಿಯ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಕೆ.ವಿ ಪ್ರವೀಣ್ ಅವರು ತಿಳಿಸಿದ್ದಾರೆ.

ಬಳ್ಳಾರಿ, ವಿಜಯನಗರ, ಕೊಪ್ಪಳ, ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ-ಮೇಲ್ ಮೂಲಕ ಪಿ.ಪಿ.ಓ ಸಂಖ್ಯೆ, ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪ ಹಾಗೂ ಇತ್ಯಾದಿಗಳನ್ನು ಅಂಚೆ ಪತ್ರದ ಮೂಲಕ ಡಿಸೆಂಬರ್ 10 ರೊಳಗಾಗಿ ತಿಳಿಸಬಹುದು. ಪತ್ರ ಲಕೋಟೆ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08392-268943 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿ.ಎಡ್ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ:** ಪ್ರಸಕ್ತ ಸಾಲಿನಲ್ಲಿ ನ್ಯಾಷನಲ್ ಕೌನ್ಸಿಲ್ ಫಾರ್ ಟೀಚರ್ ಎಜುಕೇಶನಿಂದ ಮಾನ್ಯತೆ ಪಡೆದಿರುವ ದಾವಣಗೆರೆ ಜಿಲ್ಲೆಯ ಸರ್ಕಾರಿ, ಅರೆ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ದಾಖಲಾತಿ ಹೊಂದಿ ಬಿ.ಎಡ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ(ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ, ಮತ್ತು ಪಾರ್ಸಿ) ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳಿಗೆ ರೂ. 25000/-ಗಳ ವಿಶೇಷ ಪ್ರೋತ್ಸಾಹಧನವನ್ನು ಸಂಬಂಧಪಟ್ಟ ವಿದ್ಯಾರ್ಥಿಗಳ ಖಾತೆಗೆ ಡಿಬಿಟಿ ಮುಖಾಂತರ ಜಮಾ ಮಾಡಲಾಗುವುದು. ಆಸಕ್ತರು ಅಲ್ಪಸಂಖ್ಯಾತರ ಸಮುದಾಯದ ಬಿ.ಎಡ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಎಲ್ಲಾ ದಾಖಲಾತಿಗಳ ಸಹಿತ ಸೇವಾಸಿಂಧು ಪೋರ್ಟಲ್ (https://sevasindhu.karnataka.gov.in) ಮುಖಾಂತರ ಆನ್ ಲೈನ್ ನಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಡಿಸೆಂಬರ್ 31 ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ದಾವಣಗೆರೆ. ದೂ.ಸಂ: 08192-250022 ಹಾಗೂ ವಿಸ್ತರಣಾಧಿಕಾರಿಗಳು ಅಲ್ಪಸಂಖ್ಯಾತರಕಲ್ಯಾಣ ಇಲಾಖೆ ದಾವಣಗೆರೆ ಉಪ ವಿಭಾಗ, ದೂ.ಸಂ: 08192-250066 ಸಂಪರ್ಕಿಸಬೇಕೆಂದು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

# ಮೌಲ್ಯಗಳ ಕೊಡುಗೆಯೇ ಮಹಾ ಪರಿನಿಬ್ಬಾಣ: ಪ್ರೊ.ಚಲುವರಾಜು

**ಬಳ್ಳಾರಿ:** ಶಿಕ್ಷಣ, ಸಂಘಟನೆ ಮತ್ತು ಹೋರಾಟ ಎಂಬ ಅಸ್ತಗಳ ಮೂಲಕ ಮಹಾಪರಿನಿಬ್ಬಾಣದ ತರುವಾಯ ತಮ್ಮ ಮೌಲ್ಯಗಳನ್ನು ಸಮಾಜಕ್ಕೆ ಕೊಡುಗೆ ನೀಡಿ ಬಾಬಾ ಸಾಹೇಬರು ತಮ್ಮ ಸಾರ್ಥಕ ಬದುಕನ್ನು ಜಗತ್ತಿಗೆ ತೋರಿಸಿಕೊಟ್ಟಿದ್ದಾರೆ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯ ಬುಡಕಟ್ಟು ಅಧ್ಯಯನ ವಿಭಾಗದ ನಿವೃತ್ತ ಪ್ರಾಧ್ಯಾಪಕರಾದ ಪ್ರೊ.ಚಲುವರಾಜು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಪ್ರೊ ಸಿದ್ದು ಪಿ ಆಲಗೂರ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ 'ಡಾ.ಬಿ.ಆರ್ ಅಂಬೇಡ್ಕರ್ ಅವರ 69ನೇ ಮಹಾಪರಿನಿಬ್ಬಾಣ ದಿನಾಚರಣೆ'ಯ ಭಾಷಣಕಾರರಾಗಿ ಮಾತನಾಡಿದರು.

ಬಾಬಾ ಸಾಹೇಬರ ಜ್ಞಾನ ಮತ್ತು ಸಾಮಾಜಿಕ ಸೇವೆಯ ತುಡಿತಗಳನ್ನು ಪಾರಂಪರಿಕ ಶಿಕ್ಷಣ ವ್ಯವಸ್ಥೆಯ ಹೊರತಾಗಿ ಸಮಾಜಮುಖಿ ನೆಲೆಗಟ್ಟಿನಲ್ಲಿ ಅಧ್ಯಯನ ನಡೆಸಲು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿನ ಅಧ್ಯಯನ ಪೀಠಗಳು ಮುಂದಾಗಬೇಕಿದೆ ಎಂದರು.



ಶೋಷಿತ ಸಮುದಾಯಕ್ಕೆ ಶಿಕ್ಷಣ ಒದಗಿಸುವ ಅವರ ಕನಸು ಇನ್ನೂ ಪೂರ್ಣಗೊಂಡಿಲ್ಲ ಎಂಬ ಕೊರಗಿನಿಂದಲೇ ಬಾಬಾ ಸಾಹೇಬರು ತಮ್ಮ ಕೊನೆಯುಸಿರೆಳೆದರು. ಜ್ಯೋತಿಬಾ ಫುಲೆ, ಸಾವಿತ್ರಿಬಾಯಿ ಫುಲೆಯಂತಹ ಶಿಕ್ಷಣದ ಹರಿಕಾರರನ್ನು ಅಂಬೇಡ್ಕರ್ ಅವರು ಆದರ್ಶವನ್ನಾಗಿಸಿಕೊಂಡು ಅನೇಕ ಕಷ್ಟಗಳನ್ನು ಎದುರಿಸಿ ತಮ್ಮ ಶಿಕ್ಷಣವನ್ನು ಪೂರೈಸಿದರು ಎಂದು ತಿಳಿಸಿದರು.

ಹಕ್ಕುಗಳ ವಂಚಿತ ತಳಸಮುದಾಯಗಳು ಉನ್ನತ ಶಿಕ್ಷಣವನ್ನು ಪಡೆಯುವ ಮೂಲಕ ತಮ್ಮ ಸಮುದಾಯವನ್ನು ಬಲಪಡಿಸಬೇಕು ಎಂಬುದು ಇವರ ಉದ್ದೇಶವಾಗಿತ್ತು. ಅಂಬೇಡ್ಕರ್ ಅವರ ಸಮಗ್ರ ಬರಹ ಮತ್ತು ಭಾಷಣಗಳನ್ನು ವೈಚಾರಿಕತೆಗೆ ಒಳಪಡಿಸಿ ಆಳವಾದ ಸಂಶೋಧನೆಯ ಮೂಲಕ ಪ್ರಸ್ತುತ ಸಮಾಜಕ್ಕೆ ಮಾದರಿಯಾಗುವ ಅಂಶಗಳನ್ನು ಕಂಡುಕೊಳ್ಳುವ ಕೆಲಸ ಅಧ್ಯಯನ ಪೀಠಗಳ ಮೂಲಕ ನಡೆಯಬೇಕು ಎಂದು ಅಭಿಪ್ರಾಯಪಟ್ಟರು.

ವಿವಿಯ ಕುಲಪತಿಗಳಾದ ಪ್ರೊ ಎಂ ಮುನಿರಾಜು ಅಧ್ಯಕ್ಷತೆಯಲ್ಲಿ ಮಾತನಾಡಿ, ಸಂವಿಧಾನವನ್ನು ರಚಿಸಿ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ದೇಶಕ್ಕೆ ಕೊಡುಗೆ ನೀಡಲು ತಮ್ಮ ಜೀವನವನ್ನೆ ಮುಡಿಪಾಗಿಟ್ಟ ಮಹಾನ್ ಚೇತನವೆ ಬಾಬಾ ಸಾಹೇಬರು. ಗರ್ಭಗುಡಿಯಲ್ಲಿ ಪ್ರತಿಷ್ಠಾಪಿಸುವ ದೇವರ ವಿಗ್ರಹಕ್ಕೆ ಬೀಳುವ ಉಳಿಪೆಟ್ಟುಗಳಂತೆ ಅಂಬೇಡ್ಕರ್ ಅವರು ಹೆಜ್ಜೆ-ಹೆಜ್ಜೆಗೂ ಸಂಕಷ್ಟಗಳನ್ನು ಎದುರಿಸಿದರು. ಕೊನೆಗೆ ಎಲ್ಲರಿಗೂ ದಾರಿದೀಪವಾಗುವ ದೇವರಂತೆ ಅಜರಾಮರವಾದರು ಎಂದು ಹೇಳಿದರು.

ಅಂಬೇಡ್ಕರ್ ಅವರು ಸ್ವೀಕರಿಸಿದ್ದ ಬೌದ್ಧ ಧರ್ಮದ ಬುದ್ಧಗೀತೆಯೊಂದಿಗೆ ಕಾರ್ಯಕ್ರಮವು ಆರಂಭವಾಯಿತು. ಇದಕ್ಕೂ ಮೊದಲು ವಿವಿ ಆವರಣದಲ್ಲಿರುವ ಬಾಬಾಸಾಹೇಬರ ಕಂಚಿನ ಪ್ರತಿಮೆಗೆ ಗಣ್ಯರಿಂದ ಮಾಲಾರ್ಪಣೆ ನೆರವೇರಿಸಲಾಯಿತು.

ವಿಶ್ವವಿದ್ಯಾಲಯದ ಪ್ರಭಾರ ಕುಲಸಚಿವರಾದ ಪ್ರೊ ಎನ್ ಎಂ ಸಾಲಿ, ಡಾ ಬಿ ಆರ್ ಅಂಬೇಡ್ಕರ್ ತರಬೇತಿ ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರದ ನಿರ್ದೇಶಕರಾದ ಡಾ. ಗೌರಿ ಮಾಣಿಕ ಮಾನಸ ವೇದಿಕೆಯಲ್ಲಿದ್ದರು.

ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನದ ಸಹಾಯಕ ಪ್ರಾಧ್ಯಾಪಕರಾದ ಡಾ ಶಶಿಧರ ಕೆಲ್ಲೂರ್ ನಿರೂಪಿಸಿ, ವಂದಿಸಿದರು.

ವಿವಿಧ ನಿಕಾಯಗಳ ಡೀನರು, ವಿಭಾಗಗಳ ಮುಖ್ಯಸ್ಥರುಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ಸಂಶೋಧನಾ ವಿದ್ಯಾರ್ಥಿಗಳು, ವಿದ್ಯಾರ್ಥಿಗಳು ಇದ್ದರು.

# ಸಾಮಾಜಿಕ ನ್ಯಾಯ ಕೊಡಿಸುವಲ್ಲಿ ಅಂಬೇಡ್ಕರ್ ಪ್ರಮುಖ ಪಾತ್ರ

**ಚಿಕ್ಕಮಗಳೂರು:** ಡಾ. ಬಿ,ಆರ್ ಅಂಬೇಡ್ಕರ್ ರವರು ದೇಶ ಕಂಡ ಒಬ್ಬ ಅಪರೂಪದ ಮಹಾನ್ ನಾಯಕ ಅವರು ದಲಿತ ಸಮುದಾಯಕ್ಕೆ ಸೀಮಿತರಾಗದೆ ಎಲ್ಲಾ ವರ್ಗದ ಶೋಷಿತರಿಗೆ ಸಾಮಾಜಿಕ ನ್ಯಾಯ ಕೊಡಿಸುವಲ್ಲಿ ಹೋರಾಟ ಮಾಡಿದ ಮಹಾನ್ ವ್ಯಕ್ತಿ ಎಂದು ಸಿವಿಲ್ ನ್ಯಾಯಾಧೀಶರು ಹಾಗೂ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ವಿ. ಹನುಮಂತಪ್ಪ ತಿಳಿಸಿದರು.

ಅವರು ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರ್

ಅವರ 69ನೇ ಪರಿನಿರ್ವಾಣ ದಿನದ ಅಂಗವಾಗಿ ಜಿಲ್ಲಾ ಪಂಚಾಯಿತಿ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮತ್ತು ಪುಷ್ಪಾರ್ಚನೆಯನ್ನು ಅರ್ಪಿಸಿ ಮಾತನಾಡಿದರು.

ಬಾಬಾ ಸಾಹೇಬ್ ಡಾ. ಬಿ.ಆರ್ ಅಂಬೇಡ್ಕರ್ ರವರು ತಮ್ಮ ಕುಟುಂಬದ ಪತ್ನಿ ಸೇರಿದಂತೆ ಮಕ್ಕಳು ಮೃತಪಟ್ಟಿದ್ದನ್ನು ಲೆಕ್ಕಿಸದೆ, ಇಡಿ ದೇಶದ ಜನತೆ ನನ್ನ ಕುಟುಂಬ ಎಂದು ಬಾವಿಸಿ ಇತರೆ ದೇಶಗಳ ಸಂವಿದಾನವನ್ನು ಅಭ್ಯಾಸ ಮಾಡಿ ಭಾರತಕ್ಕೆ ಅಗತ್ಯ ಇರುವ ಸಂವಿಧಾನವನ್ನು ಜಾರಿ ಮಾಡಿ ಸಾಮಾಜಿಕ ವ್ಯವಸ್ಥೆಯಲ್ಲಿ ಬದಲಾವಣೆ ಆಗಬೇಕು, ಎಲ್ಲಾ ವರ್ಗದ ಜನರಿಗೆ ಸಮಾನ ಅವಕಾಶಗಳು ದೊರೆಯಬೇಕು ಎಂಬ ಸಾಮಾಜಿಕ ನ್ಯಾಯ ಪರಿಕಲ್ಪನೆಯನ್ನು ಹೊಂದಿದ್ದರು ಎಂದು ಬಣ್ಣಿಸಿದರು.




ಬಿಎಸ್‌ಪಿ ರಾಜ್ಯ ಸಹ ಸಂಯೋಜಕ ಕೆ.ಟಿ ರಾಧಾಕೃಷ್ಣ ಮಾತನಾಡಿ ನಮ್ಮ ದೇಶದಲ್ಲಿ ಪ್ರಜಾಪ್ರಭುತ್ವ ಜೀವಂತವಾಗಿ ಉಳಿಯಲು ಮೂಲ ಕಾರಣ ನ್ಯಾಯಾಧೀಶರು, ನಿಷ್ಠಾವಂತ, ಗೌರವಾನ್ವಿತ ನ್ಯಾಯಾಧೀಶರು ಸಾಮಾನ್ಯ ಜನರಂತೆ ಜನರೊಂದಿಗೆ ಬೆರೆಯುತ್ತಿರುವ ಅವರ ಗುಣಗಳನ್ನು ನಾವೆಲ್ಲರು ಅಳವಡಿಸಿಕೊಳ್ಳಬೇಕೆಂಬ ಅಗತ್ಯ ಇದೆ ಎಂದರು.

ಡಾ. ಬಿ,ಆರ್ ಅಂಬೇಡ್ಕರ್ ರವರ ಕಾಲಘಟ್ಟದಲ್ಲಿ ನಡೆದ ನೋವಿನ ಘಟನೆ ಬಗ್ಗೆ ಅವರ ಪತ್ನಿ ರಮಾಬಾಯಿ ಅವರಿಗೆ ಬರೆದ ಪತ್ರದಲ್ಲಿ ಈಗೆ ತಿಳಿಸಲಾಗಿತ್ತು, ನಾನು ಏಕಾಂಗಿ ಹೋರಾಟ ಮಾಡಿ ಎಲ್ಲವನ್ನು ಕೊಡಿಸಿದೆ ಆದರೆ ಇದನ್ನು ಪಡೆದ ವಿದ್ಯಾವಂತರು, ಅಧಿಕಾರ ಶಾಹಿಗಳು ಕೂಡ ನಾನು ಎಳೆದ ರಥಕ್ಕೆ ಕೈಜೊಡಿಸಲಿಲ್ಲ ಬದಲಾಗಿ ಹಿಂದಕ್ಕೆ ಎಳೆಯಲು ಪ್ರಯತ್ನಿಸಿದರು ಎಂದು ಸಮಾಜದಲ್ಲಿ ಅವರಿಗೆ ಆದ ನಿಂದನೆಗಳ ಬಗ್ಗೆ ವಿವರಿಸಿದ್ದಾರೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಶಾಸಕ ಹೆಚ್.ಡಿ ತಮ್ಮಯ್ಯ, ಜಿಲ್ಲಾಧಿಕಾರಿ ಮೀನಾ ನಾಗರಾಜ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ವಿಕ್ರಮ್ ಅಮಟೆ, ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಕೀರ್ತನ,

ಮುಖಂಡರುಗಳಾದ ವಕೀಲ ಅನಿಲ್ ಕುಮಾರ್, ಮರ್ಲೆ ಅಣ್ಣಯ್ಯ, ಹಿರೇಮಗಳೂರು ರಾಮಚಂದ್ರ, ಸಮಾಜ ಕಲ್ಯಾಣ ಇಲಾಖೆಯ ರಮೇಶ್, ಹೆಚ್.ಡಿ ರೇವಣ್ಣ, ನಗರದ ಹಿರಿಯ ನಾಗರೀಕರು ಹಾಗೂ ಅಂಬೇಡ್ಕರ್ ಅನುಯಾಯಿಗಳು ಉಪಸ್ಥಿತರಿದ್ದರು.

## ಉದ್ದಿಮೆದಾರರು ವ್ಯಾಪಾರ ಅವಕಾಶಗಳ ಕುರಿತು ಅರಿವು ಹೊಂದಿ: ನರೇಂದ್ರ ಬಾಬು.ಟಿ

**ಬಳ್ಳಾರಿ:** ಉದ್ದಿಮೆದಾರರು ವ್ಯಾಪಾರ ಅವಕಾಶಗಳ ಕುರಿತು ಅರಿವು ಹೊಂದಬೇಕು ಎಂದು ಅಲ್ಲಂ ಕರಿಬಸಪ್ಪ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಕಾಲೇಜಿನ ಅಧ್ಯಕ್ಷ ನರೇಂದ್ರ ಬಾಬು.ಟಿ ಅವರು ಹೇಳಿದರು.

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ವತಿಯಿಂದ ಆರ್‌ಎಎಂಪಿ ಯೋಜನೆಯಡಿ ವ್ಯಾಪಾರ ಅಭಿವೃದ್ಧಿ ಸೇವಾ ಪೂರೈಕೆದಾರರು ಯೋಜನೆ ಕುರಿತು ನಗರದ ಕಂಟೋನ್‌ಮೆಂಟ್‌ನ ವೀರಶೈವ ವಿದ್ಯಾವರ್ಧಕ ಸಂಘದ ಅಲಂ ಕರಿಬಸಪ್ಪ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಕಾಲೇಜು ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಒಂದು ದಿನದ ಜಾಗೃತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ವ್ಯವಹಾರ ಯೋಜನೆ ಸಿದ್ದತೆಗೆ ಸಹಕಾರ, ತಂತ್ರಜ್ಞಾನದ ಉನ್ನತೀಕರಣ ಮತ್ತು ಗುಣಮಟ್ಟದ ಪ್ರಮಾಣೀಕರಣಕ್ಕೆ ಬೆಂಬಲ, ವಿಳಂಬಿತ ಪಾವತಿಗಳ ಸಮಸ್ಯೆಗಳ ಬಗ್ಗೆ ಹಾಗೂ ಬ್ರಾಂಡಿಂಗ್ ಮತ್ತು ರಫ್ತು ಪ್ರಚಾರದ ಕುರಿತು ಮಾತನಾಡಿದರು.

ಕಾರ್ಯಾಗಾರದಲ್ಲಿ ವ್ಯಾಪಾರ ಅಭಿವೃದ್ಧಿ ಸೇವಾ ಪೂರೈಕೆದಾರರು (ಬಿ.ಡಿ.ಎಸ್.ಪಿ) ಸೌಲಭ್ಯಗಳು, ಯಶಸ್ಸಿನ ಕಥೆಗಳ ಬಗ್ಗೆ ಅರಿವು ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್.ಬಿ., ಅಲ್ಲಂ ಕರಿಬಸಪ್ಪ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನ ನಿರ್ದೇಶಕ ಡಾ.ಗೋಪಿ ಕೆ.ಟಿ., ಕಾಲೇಜಿನ ಸಹ ಪ್ರಾಧ್ಯಾಪಕರಾದ ಡಾ.ಶೈಲಜಾ ಬಿ., ಎಂಸಿಎ ವಿಭಾಗದ ಎಚ್‌ಒಡಿ ಸತ್ಯನಾರಾಯಣ, ನಿರ್ವಹಣ ಅಧ್ಯಯನ ವಿಭಾಗದ ಎಚ್‌ಒಡಿ ಡಾ.ಎ ತಿಮ್ಮಣ್ಣಗೌಡ, ಪ್ರಮಾಣೀಕೃತ ರಾಷ್ಟ್ರೀಯ ತರಬೇತುದಾರರ ಮತ್ತು ಮಕ್ಕಳ ಸಲಹೆಗಾರರಾದ ಜೆಎಫ್‌ಎಂ ಮಂಜುನಾಥ್ ಬಳ್ಳುಳ್ಳಿ, ಎಂಸಿಎ ಶಿವಾನಂದ, ಸಿಡಾಕ್‌ನ ತರಬೇತಿ ಅಧಿಕಾರಿ ವಿನೋದ್ ಕುಮಾರ್ ಸೇರಿದಂತೆ ಉದ್ದಿಮೆದಾರರು ಭಾಗವಹಿಸಿದ್ದರು.

## ತಾಲ್ಲೂಕು ರೈತ ಸಂಘದ ಅಧ್ಯಕ್ಷರ ಉಚ್ಚಾಟನೆ ಸತ್ಯಕ್ಕೆ ದೂರವಾದದ್ದು : ಕೃಷ್ಣೇಗೌಡ



**ಚಿಕ್ಕಮಗಳೂರು:** ರೈತ ಸಂಘದ ಜಿಲ್ಲಾಧ್ಯಕ್ಷ ಡಿ. ಮಹೇಶ್ ರವರು ತಾಲ್ಲೂಕು ಅಧ್ಯಕ್ಷ ವೈ.ಸಿ ಸುನೀಲ್ ಕುಮಾರ್ ರವರ ಮೇಲೆ ಮಾಡಿರುವ ಆರೋಪಗಳು ನಿರಾಧಾರವಾಗಿದ್ದು. ಕೇವಲ ಅವರನ್ನು ತೇಜೋವದೆ ಮಾಡಬೇಕೆಂಬ ದುರುದ್ದೇಶದಿಂದ ನೀಡಿರುವ ಹೇಳಿಕೆಗಳು ಸತ್ಯಕ್ಕೆ ದೂರವಾದವು ಎಂದು ರೈತ ಸಂಘದ ಗೌರವಾಧ್ಯಕ್ಷ ಕೆ.ಕೆ ಕೃಷ್ಣೇಗೌಡ ಸ್ಪಷ್ಟಪಡಿಸಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ರೈತ ಸಂಘವನ್ನು ರೈತರಿಗೆ ವಿಸ್ತರಿಸುವುದನ್ನು ನಿಯಂತ್ರಿಸಿ ಜಿಲ್ಲಾಧ್ಯಕ್ಷರು ಮತ್ತು ಕೆಲವರ ಗುಂಪು ಈ ಹಿಂದಿನಂತೆ ಅವರ ಹತೋಟಿಯಲ್ಲಿ ಇಟ್ಟುಕೊಳ್ಳಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದರು.

ತಾಲ್ಲೂಕು ರೈತ ಸಂಘದಲ್ಲಿ ಪ್ರಾಮಾಣಿಕರಾಗಿ ರೈತಪರ ಹೋರಾಟಗಳಲ್ಲಿ ಮುಂಚೂಣಿಯಲ್ಲಿರುವ ಸುನೀಲ್ ಕುಮಾರ್ ಹಾಗೂ ಮುಳ್ಳುಂಡಪ್ಪ ರವರನ್ನು ಸಂಘದ ಪ್ರಾಥಮಿಕ ಸದಸ್ಯತ್ವದಿಂದ ಉಚ್ಚಾಟನೆಗೊಳಿಸಲು ಸಾಧ್ಯವಿಲ್ಲ ಈ ಇಬ್ಬರನ್ನು ಅಧಿಕಾರದಲ್ಲಿ ಮುಂದುವರೆಯಲು ತಾಲ್ಲೂಕು ಸಮಿತಿ ಬೆಂಬಲಿಸುತ್ತದೆ ಎಂದು ಹೇಳಿದರು.

ಜಿಲ್ಲಾಧ್ಯಕ್ಷ ಮಹೇಶ್ ರವರು ತಾಲ್ಲೂಕಿನ ಪ್ರಾಥಮಿಕ ಸದಸ್ಯರ ಸಭೆ ಕರೆದು ಈ ಬಗ್ಗೆ ಚರ್ಚಿಸಿ ಅಂತಿಮ ನಿರ್ಧಾರ ಕೈಗೊಳ್ಳಬೇಕಿತ್ತು. ಏಕ ಪಕ್ಷೀಯ ನಿರ್ಧಾರ ಕೈಗೊಂಡಿರುವ ಬಗ್ಗೆ ರಾಜ್ಯಾಧ್ಯಕ್ಷರು ಮತ್ತು ಪದಾಧಿಕಾರಿಗಳು ನಿರ್ಧಾರ ಕೈಗೊಳ್ಳಲಿದ್ದಾರೆ ಎಂದು ತಿಳಿಸಿದರು.

ತಾಲ್ಲೂಕು ಸಂಘಟನೆಯೊಂದಿಗೆ ಮನಸ್ತಾಪ ಹೊಂದಿರುವ ಮಹೇಶ್ ರವರು ದಕ್ಷತೆಯಿಂದ ಕಾರ್ಯ ನಿರ್ವಹಿಸುತ್ತಿರುವ ವೈ.ಸಿ ಸುನೀಲ್ ಕುಮಾರ್, ಮುಳ್ಳುಂಡಪ್ಪ ಇವರನ್ನು ಪ್ರಾಥಮಿಕ ಸದಸ್ಯತ್ವದಿಂದ ಉಚ್ಚಾಟನೆ ಮಾಡಿರುವುದಾಗಿ ಹೇಳಿಕೆ ನೀಡಿರುವುದು ಸಂಘದ ಮೂಲ ಸಿದ್ಧಾಂತಕ್ಕೆ ಅಗೌರವ ತಂದಿದ್ದಾರೆ ಎಂದು ದೂರಿದರು.

ಪತ್ರಿಕಾಗೋಷ್ಠಿಯಲ್ಲಿ ತಾಲ್ಲೂಕು ಉಪಾಧ್ಯಕ್ಷರಾದ ಬಿ.ಯು ಪರ್ವತೆಗೌಡ, ಎಂ. ಚಂದ್ರಶೇಖರ್, ಖಜಾಂಚಿ ರಾಮೇಗೌಡ, ಮಹಿಳಾ ವಿಭಾಗದ ಅರುಣಾಕ್ಷಿ, ಪದಾಧಿಕಾರಿಗಳಾದ ಕಾಂತರಾಜ್, ಟಿ.ಆರ್ ಲಕ್ಷ್ಮಣ್ ರಾಜ್ ಅರಸ್, ಷಣ್ಮುಖ, ರಮೇಶ್, ರವಿ ಮತ್ತಿತರರು ಉಪಸ್ಥಿತರಿದ್ದರು.

## ಸೌರ ಶಕ್ತಿಯನ್ನು ಜನಪ್ರಿಯಗೊಳಿಸುವಲ್ಲಿ ಬಿಡಿಸಿಸಿಐ ಬೆಂಬಲ : ಅವ್ವಾರು ಮಂಜುನಾಥ್



**ಬಳ್ಳಾರಿ:** ನೈಸರ್ಗಿಕವಾದ ಹಸಿರು ಶಕ್ತಿಯಾಗಿರುವ ಸೌರ ಶಕ್ತಿಯನ್ನು ಜನಸ್ನೇಹಿಯಾಗಿ ಜನಪ್ರಿಯಗೊಳಿಸುವಲ್ಲಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಸದಾ ಬೆಂಬಲ ನೀಡುತ್ತದೆ ಎಂದು ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್ ಅವರು ತಿಳಿಸಿದ್ದಾರೆ.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಹಾಗೂ ಟಾಟಾ ಪವರ್ ರಿನಿವಬಲ್ ಎನರ್ಜಿ ಲಿಮಿಟೆಡ್‌ನ ಜಂಟಿ ಆಶ್ರಯದಲ್ಲಿ ನಡೆದ 'ಸೌರ ಶಕ್ತಿಯ ಜಾಗೃತಿ' ಶಿಬಿರವನ್ನು ಶುಕ್ರವಾರ ಉದ್ಘಾಟಿಸಿ ಅವರು ಮಾತನಾಡಿದರು.

ನೈಸರ್ಗಿಕವಾಗಿ ಹೇರಳವಾಗಿ ಸಿಗುತ್ತಿರುವ ಸೂರ್ಯನ ಶಾಖವನ್ನು ಬಳಕೆ ಮಾಡಿಕೊಂಡು ಸೌರ ವಿದ್ಯುತ್ ಶಕ್ತಿಯನ್ನಾಗಿ ಬಳಕೆ ಮಾಡಲಾಗುತ್ತಿದೆ. ಈ ವಿದ್ಯುತ್ ಪರಿಸರ ಸ್ನೇಹಿ,

ಗ್ರಾಹಕ ಸ್ನೇಹಿ ಮತ್ತು ಶುದ್ಧ ಶಕ್ತಿಯ ಮೂಲವಾಗಿದೆ. ಈ ಶಕ್ತಿಯನ್ನು ಪ್ರತಿಯೊಬ್ಬರೂ ಸದ್ಬಳಕೆ ಮಾಡಿಕೊಳ್ಳಬೇಕು. ಈ ನಿಟ್ಟಿನಲ್ಲಿ ಟಾಟಾ ಪವರ್ ರಿನಿವಬಲ್ ಎನರ್ಜಿ ಲಿಮಿಟೆಡ್‌ನ ಗುಣಮಟ್ಟದ - ನಾವೀನ್ಯ ತಂತ್ರಜ್ಞಾನದ ಸೇವೆಯನ್ನು ನೀಡುತ್ತಿದೆ ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಕೆ.ಸಿ. ಸುರೇಶಬಾಬು ಅವರು,

ಕರ್ನಾಟಕ ಇಂಡಸ್ಟ್ರಿಯಲ್ ಅಸೋಸಿಯೇಷನ್‌ನ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷರಾದ ವಿ. ರಾಮಚಂದ್ರ, ಸ್ಪಾಂಜ್ ಅಂಡ್ ಐರನ್ ಅಸೋಸಿಯೇಷನ್‌ನ ಕಾರ್ಯದರ್ಶಿ

ಎಸ್.ಪಿ. ವೆಂಕಟೇಶ್, ಬಳ್ಳಾರಿ ಜಿಲ್ಲಾ ಕಾಟನ್ ಇಂಡಸ್ಟ್ರೀಸ್ ಅಸೋಸಿಯೇಷನ್ ವಿ.ವೆಂಕಟೇಶ, ಬಳ್ಳಾರಿ ಜಿಲ್ಲಾ ರೈಸ್ ಮಿಲ್ಲರ್ಸ್ ಅಸೋಸಿಯೇಷನ್ ಅಧ್ಯಕ್ಷರಾದ ಬಿ. ನಾಗರಾಜ್, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಹಿರಿಯ ಉಪಾಧ್ಯಕ್ಷರಾದ ಎಸ್. ದೊಡ್ಡನಗೌಡ, ಸೊಂತಗಿರಿಧರ್,

ಜಂಟಿ ಕಾರ್ಯದರ್ಶಿಗಳಾದ, ಡಾ. ಮರ್ಚೆಡ್ ಮಲ್ಲಿಕಾರ್ಜುನಗೌಡ, ಖಜಾಂಚಿಗಳಾದ ನಾಗಳ್ಳಿ ರಮೇಶ, ಕಾರ್ಯಕಾರಿ ಸಮಿತಿ ಸದಸ್ಯರಾದ ಸಿಎ ಕೆ.ರಾಜಶೇಖರ ಅವರು, ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ವಿವಿಧ ಸಂಘ/ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಹವಾಮಾನಾಧಾರಿತ ಬೆಳೆವಿಮೆ ನಿರ್ಧರಣೆ ನ್ಯೂನತೆ ಸಮರ್ಪಕಗೊಳಿಸಲು ಸೂಚನೆ

**ಶಿವಮೊಗ್ಗ :** ಕಾರ್ಯನಿರ್ವಹಿಸದಿರುವ ಮಳೆ ಮಾಪನ ಯಂತ್ರಗಳು ಹಾಗೂ ಸಕಾಲಿಕವಾಗಿ ಗಮನಹರಿಸದ ಅಧಿಕಾರಿ-ಸಿಬ್ಬಂಧಿಗಳ ನಿರ್ಲಕ್ಷ್ಯ ಮುಂತಾದ ಕಾರಣಗಳಿಂದಾಗಿ ಬೆಳೆಹಾನಿಗೊಳಗಾದ ರೈತರಿಗೆ ನಿರೀಕ್ಷಿತ ಪ್ರಮಾಣದ ವಿಮಾ ಮೊತ್ತ ಪಾವತಿಯಾಗದಿರುವುದು ಅತ್ಯಂತ ನೋವಿನ ಸಂಗತಿಯಾಗಿದ್ದು, ಅದನ್ನು ಮುಂದಿನ ಒಂದು ವಾರದೊಳಗಾಗಿ ಸಮರ್ಪಕವಾಗಿ ದಾಖಲೆಗಳನ್ನು ಸರಿಪಡಿಸಿಕೊಂಡು ಸಂತ್ರಸ್ಥ ರೈತರಿಗೆ ನ್ಯಾಯೋಚಿತವಾದ ಪರಿಹಾರ ಮೊತ್ತವನ್ನು ಪಾವತಿಸಲು ಕ್ರಮ ಕೈಗೊಳ್ಳುವಂತೆ ಸಾಂಸದ ಬಿ.ವೈ. ರಾಘವೇಂದ್ರ ಅವರು ತೋಟಗಾರಿಕೆ ಇಲಾಖೆ ಉಪನಿರ್ದೇಶಕರು ಹಾಗೂ ವಿಮಾ ಕಂಪನಿಗಳ ಮುಖ್ಯಸ್ಥರಿಗೆ ಸೂಚಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಕೃಷಿ, ತೋಟಗಾರಿಕೆ ಇಲಾಖೆ ಸೇರಿದಂತೆ ಸಂಬಂಧಿಸಿದ ಇಲಾಖೆಗಳ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳೊಂದಿಗೆ ಹವಾಮಾನಾಧಾರಿತ ಬೆಳೆವಿಮೆ ಅಸಮರ್ಪಕವಾಗಿ ವಿತರಿಸುತ್ತಿರುವ ಬಗ್ಗೆ ಸುದೀರ್ಘವಾಗಿ ಚರ್ಚಿಸಿ ಮಾಹಿತಿ ಪಡೆದರು.

ಜಿಲ್ಲೆಯಲ್ಲಿರುವ 280ಮಳೆ ಮಾಪನ ಯಂತ್ರಗಳಲ್ಲಿ ಶೇ.75ರಷ್ಟು ಯಂತ್ರಗಳು ಕಾರ್ಯನಿರ್ವಹಿಸುತ್ತಿಲ್ಲ. ಹೀಗಿರುವಾಗ ಮಳೆಮಾಪನದ ದತ್ತಾಂಶ ಸಂಗ್ರಹಿಸುವುದಾದರೂ ಹೇಗೆ? ಎಂದು ಅಧಿಕಾರಿಗಳಿಗೆ ಪ್ರಶ್ನಿಸಿದ ಅವರು, ನೆರೆಯ ಗ್ರಾಮ ಪಂಚಾಯಿತಿಗಳಲ್ಲಿ ಬಿದ್ದಿರುವ ಮಳೆಯ ಅಂದಾಜನ್ನು ಆಧರಿಸಿ, ಮಳೆಯ ಪ್ರಮಾಣವನ್ನು ನಿರ್ಧರಿಸುವುದು ಸರಿಯಾದ ಕ್ರಮವಲ್ಲ. ಒಂದೊಮ್ಮೆ ನೆರೆಯ ಗ್ರಾಮ ಪಂಚಾಯಿತಿಗಳಲ್ಲಿನ ಮಳೆ ಪ್ರಮಾಣವನ್ನು ಗುರುತಿಸುವುದಾದರೆ ರಸ್ತೆಯ ದೂರವನ್ನಾಧರಿಸಿ ಅಥವಾ ವೈಮಾನಿಕ ದೂರವನ್ನು ಅಂದಾಜಿಸಿ ಮಳೆಯ ಮಾಪನ ಕೇಂದ್ರವನ್ನು ಗುರುತಿಸಲಾಗುವುದು ಎಂಬ ಬಗ್ಗೆ ಅಧಿಕಾರಿಗಳಲ್ಲಿ ನಿಖರವಾದ ಮಾಹಿತಿ ಇಲ್ಲ. ಮಲೆನಾಡು, ಅರೆಮಲೆನಾಡು ಮತ್ತು ಬಯಲುಸೀಮೆ ಪ್ರದೇಶಗಳಲ್ಲಿ ಮಳೆ ಪ್ರಮಾಣ, ದತ್ತಾಂಶ ಸಂಗ್ರಹಣೆಯಲ್ಲಿನ ನ್ಯೂನತೆಗಳಂತಹ ಅವೈಜ್ಞಾನಿಕವಾದ ಕಾರಣಗಳಿಂದಾಗಿ ಸಂತ್ರಸ್ಥ ರೈತರಿಗೆ ಶೋಷಣೆ ಮಾಡುತ್ತಿರುವುದು ಸೂಕ್ತವಲ್ಲ ಎಂದ ಅವರು, ಸಂಬಂಧಿಸಿದ ಇಲಾಖೆಗಳ ಹಾಗೂ ವಿಮಾ ಕಂಪನಿಗಳ ಅಧಿಕಾರಿಗಳು ಕೂಡಲೇ ಗಮನಹರಿಸಿ, ಅಸಮರ್ಪಕ ವಿಮಾ ಮೊತ್ತದ ವಿತರಣೆಯನ್ನು ಸರಿಪಡಿಸಿಕೊಂಡು ವಿತರಿಸಲು ಮುಂದಾಗುವಂತೆ ಅವರು ಸೂ ಅಲ್ಲದೇ ಮಳೆಮಾಪನ ಉಸ್ತುವಾರಿಗಾಗಿ ವಿಮಾ ಕಂಪನಿಗಳವರು ಪ್ರತಿನಿಧಿಯೊಬ್ಬರನ್ನು ನಿಯೋಜಿಸುವಂತೆ ಹಾಗೂ ಈ ಹಿಂದೆ ರೈತರಿಗೆ ನೀಡಲಾಗುತ್ತಿದ್ದ ಮೊಬೈಲ್‌ಸಂದೇಶವನ್ನು ಪುನಃ ಕಳಿಸಲು ಏರ್ಪಾಡು ಮಾಡುವಂತೆ ಒತ್ತಾಯಿಸಲಾಗುವುದು ಎಂದ ಅವರು ಪ್ರಸ್ತುತ ಸಾಲಿನಲ್ಲಿ ಸರ್ಕಾರವು ರಾಜ್ಯದಲ್ಲಿ 2500ಕ್ಕೂ ಹೆಚ್ಚಿನ ಮಳೆ ಮಾಪನ ಯಂತ್ರಗಳನ್ನು ಅಗತ್ಯವಿರುವಲ್ಲಿ ಅನುಷ್ಠಾನಗೊಳಿಸಲಿದೆ ಎಂದವರು ನುಡಿದರು. ಸ'ಭ'೦ು'ು ಲ್ಲಿ ಬಿ.ವೈ.ರಾಘವೇಂದ್ರ, ಜಿಲ್ಲಾಧಿಕಾರಿ ಗುರುದತ್ತಹೆಗಡೆ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎನ್.ಹೇಮಂತ್, ಮಾಜಿ ಶಾಸಕ ಕೆ.ಬಿ.ಅಶೋಕನಾಯ್ಕ್, ಕೆ.ಎಸ್. ಗುರುಮೂರ್ತಿ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಡಾ॥ ಸಂಜಯ್‌ಎ.ಬಿ., ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಡಾ॥ ಕಿರಣ್‌ಕುಮಾರ್, ವಿಮಾ ಕಂಪನಿಯ ಮುಖ್ಯಸ್ಥ ಅಜಿತ್‌ಸೇರಿದಂತೆ ಸಂಬಂಧಿಸಿದ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಜನಸಂಪರ್ಕ ಸಭೆ: ಸ್ಥಳದಲ್ಲೇ ಪರಿಹಾರ ಕಲ್ಪಿಸುವ ಬಗ್ಗೆ ಸಚಿವರ ಭರವಸೆ

**ಚಿಕ್ಕಮಗಳೂರು:** ರಾಜ್ಯದ ಎಲ್ಲ ಜಿಲ್ಲೆಗಳ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಜನಸಂಪರ್ಕ ಸಭೆಗಳನ್ನು ನಡೆಸಿ ಪರಿಹಾರ ಕಲ್ಪಿಸುವಂತೆ ಮುಖ್ಯಮಂತ್ರಿಗಳು ನಿರ್ದೇಶನ ನೀಡಿರುವ ಹಿನ್ನೆಲೆಯಲ್ಲಿ ಪ್ರತೀ ಜಿಲ್ಲೆಯಲ್ಲಿ ಜನಸಂಪರ್ಕ ಸಭೆ ನಡೆಸಲಾಗುತ್ತಿದ್ದು, ಸ್ಥಳದಲ್ಲೇ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಲು ಕ್ರಮ ವಹಿಸಲಾಗುತ್ತಿದೆ ಎಂದು ರಾಜ್ಯ ಇಂಧನ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ವತಿಯಿಂದ ನಗರದ ಕುವೆಂಪು ಕಲಾಮಂದಿರದಲ್ಲಿ ಇಂದು ಆಯೋಜಿಸಿದ್ದ ಜನಸಂಪರ್ಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಾರ್ವಜನಿಕರು ತಮ್ಮ ಸಮಸ್ಯೆಗಳ ಪರಿಹಾರಕ್ಕೆ ರಾಜಧಾನಿಗೆ ಬರುವ ಬದಲು ಆಯಾ ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದಲ್ಲಿ ಜನರ ಸಮಸ್ಯೆಗಳನ್ನು ಆಲಿಸಿ ಸಮಸ್ಯೆಗಳ ಪರಿಹಾರಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಜಿಲ್ಲೆಯಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದ ಸಮಸ್ಯೆಗಳು ಹೆಚ್ಚಾಗಿದ್ದು, ಅವೆಲ್ಲಕ್ಕೂ ಅಧಿಕಾರಿಗಳ ಮೂಲಕ ಅಗತ್ಯ ಕ್ರಮ ಕೈಗೊಂಡು ಪರಿಹಾರ ಒದಗಿಸಲಾಗುವುದು ಎಂದರು.

ಶಾಸಕ ಹೆಚ್.ಡಿ.ತಮ್ಮಯ್ಯ ಮಾತನಾಡಿ, ತಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಜನರ ಬಳಿಗೆ ಸರ್ಕಾರವೇ ತೆರಳಿ ಜನರ ಸಮಸ್ಯೆಗಳನ್ನು ಅರಿತು ಬಗೆಹರಿಸಬೇಕು ಎಂಬ ಪರಿಕಲ್ಪನೆಯಲ್ಲಿ ಮುಖ್ಯಮಂತ್ರಿಗಳು ಹಾಗೂ ಉಪಮುಖ್ಯಮಂತ್ರಿಗಳ ನಿರ್ದೇಶನದಂತೆ ಈ ಸಭೆ ನಡೆಸಲಾಗುತ್ತಿದೆ. ನಮ್ಮ ಜಿಲ್ಲೆಯಲ್ಲಿ ಈಗಾಗಲೇ 4 ರಿಂದ 6 ಬಾರಿ ಜನಸಂಪರ್ಕ ಸಭೆಗಳನ್ನು ಯಶಸ್ವಿಯಾಗಿ ನಡೆಸಿರುವ ಕೀರ್ತಿ ನಮ್ಮ ಉಸ್ತುವಾರಿ ಸಚಿವರಿಗೆ ಸಲ್ಲುತ್ತದೆ ಎಂದರು.



ಪಂಚ ಗ್ಯಾರಂಟಿ ಯೋಜನೆಗಳನ್ನು ರಾಜ್ಯದಲ್ಲಿ ಸಮರ್ಪಕವಾಗಿ ಫಲಾನುಭವಿಗಳಿಗೆ ತಲುಪಿಸಲಾಗಿದ್ದು, ರಾಜ್ಯದಲ್ಲೇ ನಮ್ಮ ಜಿಲ್ಲೆ ಪ್ರಥಮ ಸ್ಥಾನದಲ್ಲಿದೆ. ಸುಮಾರು 2,012 ಕೋಟಿ ರೂ. ಈ ಐದು ಗ್ಯಾರಂಟಿ ಯೋಜನೆಗಳಿಗೆ ಈ ಜಿಲ್ಲೆಯಲ್ಲಿ ವಿನಿಯೋಗವಾಗುತ್ತಿದೆ ಎಂದು ಇದೇ ಸಂದರ್ಭದಲ್ಲಿ ಹೇಳಿದರು.

ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್ ಪ್ರಾಸ್ತಾವಿಕ ಮಾತನಾಡಿ, ಕಳೆದ ಎರಡೂವರೆ ವರ್ಷದಲ್ಲಿ ಜನತಾ ದರ್ಶನ ಕಾರ್ಯಕ್ರಮಗಳನ್ನು ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಜಿಲ್ಲೆಯ ಎಲ್ಲಾ ಕ್ಷೇತ್ರಗಳಲ್ಲಿ ನಡೆಸಲಾಗಿದೆ. ಅದರಲ್ಲಿ ಒಟ್ಟು ನಾವು 829 ಅರ್ಜಿಗಳನ್ನು ಸ್ವೀಕರಿಸಿದ್ದೇವೆ. ಅವುಗಳಲ್ಲಿ 496 ಅರ್ಜಿಗಳು ಕಂದಾಯ ಇಲಾಖೆಗೆ ಸಂಬಂಧಿಸಿದ್ದಾಗಿವೆ. ಆ ಪೈಕಿ ಶೇ.27 ರಷ್ಟು ಅರ್ಜಿಗಳನ್ನು ಸಕಾರಾತ್ಮಕವಾಗಿ ಇತ್ಯರ್ಥಪಡಿಸಿರುವುದಾಗಿ ತಿಳಿಸಿದರು.

ಮುಖ್ಯಮಂತ್ರಿಗಳ ಜನತಾದರ್ಶನ ಕಾರ್ಯಕ್ರಮದಲ್ಲೂ ಈ ಜಿಲ್ಲೆಯ 49 ಅರ್ಜಿಗಳು ಸ್ವೀಕೃತಿಯಾಗಿವೆ. ಉಳಿದಂತೆ ಶಾಸಕರುಗಳು ಹೋಬಳಿ ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜನತಾ ದರ್ಶನ ಮತ್ತು ಸಮ್ಮೇಳನಗಳನ್ನು ನಡೆಸಿದ್ದಾರೆ. ಅಲ್ಲದೆ, ಜಿಲ್ಲಾ ಪಂಚಾಯಿತಿಯಿಂದ ಗ್ರಾ.ಪಂ. ಮಟ್ಟದಲ್ಲಿ ಸಾರ್ವಜನಿಕ ಅಹವಾಲು ಸ್ವೀಕಾರಕ್ಕೆ ಸಂಬಂಧಿಸಿದಂತೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಕಳೆದ ಒಂದು ವರ್ಷದಲ್ಲಿ ನಮ್ಮ ಜಿಲ್ಲೆಯಲ್ಲಿ 8,92,290 ಅರ್ಜಿಗಳು ಸ್ವೀಕೃತಿಯಾಗಿವೆ. ಸುಮಾರು ಶೇ.10 ರಿಂದ 12 ರಷ್ಟು ಅರ್ಜಿಗಳನ್ನು ಇತ್ಯರ್ಥಪಡಿಸಲು ಸಾಧ್ಯವಾಗಿಲ್ಲ. ಇದಕ್ಕೆ ತಂತ್ರಾಂಶದಲ್ಲಿನ ಸಮಸ್ಯೆಗಳು ಕಾರಣವಾಗಿದೆ. ಅದನ್ನು ಸರಿಪಡಿಸಲು ಈಗ ಕ್ರಮ ಕೈಗೊಳ್ಳಲಾಗುತ್ತಿದೆ. ನಮ್ಮಲ್ಲಿ 94 ಸಾವಿರ ಪೌತಿ ಖಾತೆಗಳಿದ್ದವು. ಅವುಗಳಲ್ಲಿ ಇದುವರೆಗೆ 22 ಸಾವಿರ ಅರ್ಜಿಗಳನ್ನು ವಿಲೇವಾರಿ ಮಾಡಲಾಗುತ್ತಿದೆ. ಪ್ರಾದೇಶಿಕ ಸಾರಿಗೆ ಇಲಾಖೆ, ಸರ್ವೇ ಇಲಾಖೆಗೆ ಸಂಬಂಧಿಸಿದಂತೆ ಹಲವು ಸಮಸ್ಯೆಗಳ ಇತ್ಯರ್ಥಕ್ಕೆ ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಇದಲ್ಲದೆ ತಂತ್ರಾಂಶಗಳನ್ನು ಸದ್ಬಳಕೆ ಮಾಡಿಕೊಂಡು ಪ್ರತಿಯೊಂದು ಅರ್ಜಿಯನ್ನು ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಇವುಗಳಲ್ಲಿ ಶೇ.58 ರಷ್ಟು ಅರ್ಜಿಗಳು ಕಂದಾಯ ಇಲಾಖೆಗೆ ಸಂಬಂಧಿಸಿದ್ದಾಗಿವೆ.



ಅವುಗಳಲ್ಲಿ ಪೋಡಿ ಪ್ರಕರಣಗಳು, ದಾರಿಗೆ ಸಂಬಂಧಿಸಿದ ಅರ್ಜಿಗಳು, ಆರ್‌ಟಿಸಿ ಸರಿಪಡಿಸುವಿಕೆ ಪ್ರಕರಣಗಳು ಪ್ರಮುಖವಾದವು ಎಂದರು.

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ, ಶಾಸಕ ಜಿ.ಹೆಚ್.ಶ್ರೀನಿವಾಸ್, ಮೆಸ್ಕಾಂ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ ಸದಸ್ಯರೂ ಆದ ಹರೀಶ್ ಕುಮಾರ್, ಭದ್ರಾ ಕಾಡಾ ಅಧ್ಯಕ್ಷ ಡಾ.ಕೆ.ಪಿ.ಅಂಶುಮಂತ್, ಕ.ರಾ.ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್.ಹರೀಶ್, ಜಿ.ಪಂ. ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ, ಅಪರ ಜಿಲ್ಲಾಧಿಕಾರಿ ನಾರಾಯಣ ರಡ್ಡಿ ಕನಕರಡ್ಡಿ, ಜಿಲ್ಲಾಮಟ್ಟ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಸಭೆಯಲ್ಲಿದ್ದರು.

## ಆನ್‌ಲೈನ್ ಗೇಮ್‌ನಲ್ಲಿ 3 ಲಕ್ಷ ನಷ್ಟ; ಫೈನಾನ್ಸ್ ಕಂಪನಿಗೆ ಹಣ ಕಟ್ಟಲಾಗದೆ ಯುವಕ ಆತ್ಮಹತ್ಯೆ

**ಧಾರವಾಡ:** ಫೈನಾನ್ಸ್‌ಗೆ ಕಟ್ಟಬೇಕಿದ್ದ 3 ಲಕ್ಷಕ್ಕೂ ಹೆಚ್ಚು ಹಣವನ್ನು ಆನ್‌ಲೈನ್ ಗೇಮ್‌ಗೆ ಬಳಸಿಕೊಂಡು ನಷ್ಟ ಅನುಭವಿಸಿದ್ದ ಯುವಕ, ಬಳಿಕ ದುಡ್ಡು ವಾಪಸ್ ಕಟ್ಟಲಾಗದೇ ಆತ್ಮಹತ್ಯೆ ಮಾಡಿಕೊಂಡಿರುವುದು ಧಾರವಾಡ ತಾಲೂಕಿನ ಮಂಗಳಗಟ್ಟಿ ಗ್ರಾಮದಲ್ಲಿ ನಡೆದಿದೆ. ಬಸವರಾಜ ಸಕ್ರಪ್ಪನ್ನವರ (28) ಆತ್ಮಹತ್ಯೆ ಮಾಡಿಕೊಂಡಿರುವ ಯುವಕ.



ಈತ ಗ್ರಾಮದಲ್ಲೇ ಫೈನಾನ್ಸ್ ಹಣವನ್ನು ಕಲೆಕ್ಷನ್ ಮಾಡುವ ಕೆಲಸ ಮಾಡುತ್ತಿದ್ದ. ಆದರೆ, ಆನ್‌ಲೈನ್ ಗೇಮ್ ಚಟಕ್ಕೆ ಬಿದಿದ್ದ ಯುವಕ, ಸಂಗ್ರಹಿಸಿದ್ದ ಫೈನಾನ್ಸ್ ಹಣವನ್ನು ಗೇಮ್‌ಗೆ ಬಳಸಿಕೊಂಡಿದ್ದ.

ಇದರಿಂದ 3 ಲಕ್ಷಕ್ಕೂ ಹೆಚ್ಚು ಹಣವನ್ನು ಕಳೆದುಕೊಂಡಿದ್ದ. ಫೈನಾನ್ಸ್ ಹಣವನ್ನು ವಾಪಸ್ ಕಟ್ಟಲಾಗದೇ ಮನನೊಂದು ಮರಕ್ಕೆ ನೇಣು ಬಿಗಿದುಕೊಂಡು ಯುವಕ ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ಸದ್ಯ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಈ ಸಂಬಂಧ ಗರಗ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

## ರಸ್ತೆಯಲ್ಲಿ ಬಿದ್ದವರ ಮೇಲೆ ಟ್ರ್ಯಾಕ್ಟರ್ ಹರಿದು ಇಬ್ಬರು ಯುವಕರ ಸಾವು

**ಶಿವಮೊಗ್ಗ:** ಬೈಕ್ ಅಪಘಾತವಾಗಿ ರಸ್ತೆಯಲ್ಲಿ ಬಿದ್ದಿದ್ದ ಇಬ್ಬರು ಯುವಕರ ಮೇಲೆ ಟ್ರ್ಯಾಕ್ಟರ್ ಹರಿದು ಸಾವನ್ನಪ್ಪಿದ ಘಟನೆ ಶಿವಮೊಗ್ಗ ಜಿಲ್ಲೆಯ ಆಯನೂರು ಹಾರನಹಳ್ಳಿ ರಸ್ತೆಯಲ್ಲಿ ನಡೆದಿದೆ. ಮಲ್ಲಾಪುರ ಗ್ರಾಮದ ಆಕೀಬ್ (25) ಮತ್ತು ಚಾಂದ್ ಪೀರ್ (18) ಮೃತ ದುರ್ದೈವಿಗಳು.

ಎರಡು ಬೈಕುಗಳು ಮುಖಾಮುಖಿ ಡಿಕ್ಕಿ ಹೊಡೆದಿದ್ದರಿಂದ, ಬೈಕ್ ಚಾಲಕ ಮತ್ತು ಹಿಂಬದಿ ಸವಾರರಿಬ್ಬರೂ ರಸ್ತೆಗೆ ಬಿದ್ದಿದ್ದರು. ಇದೇ ಸಂದರ್ಭದಲ್ಲಿ ಹಿಂದೆ ಬರುತ್ತಿದ್ದ ಟ್ರ್ಯಾಕ್ಟರ್ ಕೆಳಕ್ಕೆ ಬಿದ್ದವರ ಮೇಲೆ ಹರಿದಿದೆ ಎಂದು ತಿಳಿದು ಬಂದಿದೆ. ಈ ಸಂಬಂಧ ಕುಂಸಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮದುವೆ ಮೆರವಣಿಗೆ ಮಧ್ಯೆಯೇ ಪತ್ನಿಗೆ ಒದ್ದು ಕಪಾಳಮೋಕ್ಷ ಮಾಡಿದ ಪತಿ

**ದೆಹಲಿ:** ಗಂಡ-ಹೆಂಡತಿ ಅಂದ ಮೇಲೆ ಸಣ್ಣ ಪುಟ್ಟ ಜಗಳಗಳು ಸಾಮಾನ್ಯ. ಆದರೆ ಕೆಲವೊಮ್ಮೆ ಇಂತಹ ಸಣ್ಣ ವಿಚಾರದ ಜಗಳವೇ ದೊಡ್ಡದಾಗಿ ಸಮಸ್ಯೆ ಉಂಟಾಗುತ್ತದೆ. ಅಂತಹದ್ದೇ ಘಟನೆಯೊಂದು ನಡೆದಿದ್ದು, ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಮದುವೆ ಸಮಾರಂಭದಲ್ಲಿ ಖುಷಿಯಿಂದ ನೃತ್ಯ ಮಾಡುತ್ತಿದ್ದ ಪತ್ನಿಗೆ ಪತಿಯೊಬ್ಬ ಕಪಾಳ ಮೋಕ್ಷ ಮಾಡಿದ ಅಘಾತಕಾರಿ ಘಟನೆ ಇದಾಗಿದೆ. ಮದುವೆ ಸಮಾರಂಭದಲ್ಲಿ ಅತಿಥಿಗಳ ಸಮ್ಮುಖದಲ್ಲಿ ಮಹಿಳೆಯೊಬ್ಬರು ನೃತ್ಯ ಮಾಡುತ್ತಿದ್ದರು. ಈ ಸಂದರ್ಭದಲ್ಲಿ ಆಕೆಯ ಪತಿ ಪ್ರತ್ಯಕ್ಷಗೊಂಡು ಪತ್ನಿಗೆ ಒದ್ದು ಕಪಾಳಮೋಕ್ಷ ಮಾಡಿದ್ದಾನೆ. ಸದ್ಯ ಈ ವಿಡಿಯೊ ಸೋಶಿಯಲ್ ಮೀಡಿಯಾದಲ್ಲಿ ಭಾರಿ ವೈರಲ್ ಆಗಿದ್ದು ಆತನ ವರ್ತನೆಗೆ ನೆಟ್ಟಿಗರು ಆಕ್ರೋಶ ವ್ಯಕ್ತ ಪಡಿಸಿದ್ದಾರೆ.

ಮದುವೆಯ ಸಂಭ್ರಮದ ವಾತಾವರಣದಲ್ಲಿ ಮೆರವಣಿಗೆ ನಡೆಯುತ್ತಿತ್ತು. ಇದರಲ್ಲಿ ವಧುವಿನ ಕಡೆಯ ಅತಿಥಿಗಳೊಂದಿಗೆ ಮಹಿಳೆಯೊಬ್ಬರು ಭಾರೀ ಖುಷಿಯಿಂದ ತನ್ನ ಪಾಡಿಗೆ ನೃತ್ಯ ಮಾಡುತ್ತಿದ್ದರು. ಈ ವೇಳೆ ಪತಿ ಹಲ್ಲೆ ನಡೆಸಿದ್ದಾನೆ. ವಿಡಿಯೊದಲ್ಲಿ ಆತ ತನ್ನ ಪತ್ನಿಗೆ ಹಿಗ್ಗಾಮುಗ್ಗಾ ಥಳಿಸಿದ್ದಲ್ಲದೆ ಸರಿಯಾಗಿ ಕಪಾಳ ಮೋಕ್ಷ ಮಾಡಿದ್ದಾನೆ. ಈ ದೃಶ್ಯವನ್ನು ಅಲ್ಲಿದ್ದ ವ್ಯಕ್ತಿಯೊಬ್ಬರು ತಮ್ಮ ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿಕೊಂಡಿದ್ದು, ವೈರಲ್ ಆಗಿದೆ.

ದಿಗ್ಭ್ರಮೆಗೊಂಡ ಆಕೆ ಆರಂಭದಲ್ಲಿ ತಾನು ಕೂಡ ಒದೆಯುವ ಮೂಲಕ ಪ್ರತಿರೋಧ ತೋರುತ್ತಾಳೆ. ಆದರೆ, ನಂತರ ಆತ ಆಕೆಯ ಎದೆಗೆ ಒದೆಯುತ್ತಲೇ ಇರುತ್ತಾನೆ. ವಿಚಿತ್ರವೆಂದರೆ, ಹಿನ್ನೆಲೆಯಲ್ಲಿ ಹಾಡು ಕೇಳಿಸುತ್ತಿದ್ದ ಲಯಕ್ಕೆ ಅನುಗುಣವಾಗಿ ಆತ ಹೊಡೆದಿದ್ದಾನೆ.

## ಮೆಡಿಕಲ್ ಶಾಪ್ ಮಾಲೀಕನಿಗೆ 1.15 ಕೋಟಿ ವಂಚನೆ

**ಕಲಬುರಗಿ:** ಸ್ಟಾಕ್ ಮಾರ್ಕೆಟ್‌ನಲ್ಲಿ ಹಣ ಹೂಡಿಕೆ ಮಾಡಿ ಹೆಚ್ಚಿನ ಹಣ ಗಳಿಸಬಹುದು ಎಂದು ನಂಬಿಸಿ ಮೆಡಿಕಲ್ ಶಾಪ್ ಮಾಲೀಕ ಮತ್ತು ಅವರ ಸಹೋದರನಿಗೆ 1.15 ಕೋಟಿ ರೂಪಾಯಿ ವಂಚನೆ ಮಾಡಿರುವ ಪ್ರಕರಣ ಬೆಳಕಿಗೆ ಬಂದಿದೆ.

ನಗರದ ನ್ಯೂ ರಾಘವೇಂದ್ರ ಕಾಲೋನಿಯ ಸಿದ್ಧಿ ಹನುಮಾನ ಮೆಡಿಕಲ್ ಶಾಪ್ ಮಾಲೀಕ ಅನಿಲದಾಸ ದೇಶಮುಖ ಮತ್ತು ಅವರ ಸಹೋದರ ಪ್ರಮೋದ ದೇಶಮುಖ ವಂಚನೆಗೆ ಒಳಗಾಗಿದ್ದು, ಅವರು ಈ ಸಂಬಂಧ ಸಿಇಎನ್ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

## 6 ನೇ ದಿನವೂ ಮುಂದುವರಿದ ಇಂಡಿಗೋ ಸಮಸ್ಯೆ; 650 ವಿಮಾನ ಹಾರಾಟ ರದ್ದು, ಪ್ರಯಾಣಿಕರು ಸುಸ್ತು

**ನವದೆಹಲಿ:** ಇಂಡಿಗೋ ವಿಮಾನದ ಹಾರಾಟದಲ್ಲಿ 6 ನೇ ದಿನದಲ್ಲಿಯೂ ವ್ಯತ್ಯಯ ಉಂಟಾಗಿದೆ. ಇಂಡಿಗೋ ಒಟ್ಟು 650 ವಿಮಾನಗಳನ್ನು ರದ್ದುಗೊಳಿಸಿದ್ದು, ಡಿಸೆಂಬರ್ 10 ರ ವೇಳೆಗೆ ಕಾರ್ಯಾಚರಣೆ ಸ್ಥಿರವಾಗುವ ನಿರೀಕ್ಷೆಯಿದೆ ಎಂದು ವಿಮಾನಯಾನ ಸಂಸ್ಥೆ ಹೇಳಿಕೆಯಲ್ಲಿ ತಿಳಿಸಿದೆ. ದೆಹಲಿ, ಮುಂಬೈ, ಬೆಂಗಳೂರು ಮತ್ತು ಇತರ ವಿಮಾನ ನಿಲ್ದಾಣಗಳಲ್ಲಿನ ಪ್ರಯಾಣಿಕರು ಅಡಚಣೆಗಳಿಂದ ತೊಂದರೆಗೀಡಾಗಿದ್ದಾರೆ. ಇಂಡಿಗೋ ಸಾಮಾನ್ಯವಾಗಿ ಕಾರ್ಯನಿರ್ವಹಿಸುವ ಒಟ್ಟು 2,300 ದೈನಂದಿನ ವಿಮಾನಗಳಲ್ಲಿ 1,650 ವಿಮಾನಗಳನ್ನು ನಿರ್ವಹಿಸಲಿದೆ ಎಂದು ತಿಳಿಸಿದೆ.



ಹೈದರಾಬಾದ್ ವಿಮಾನ ನಿಲ್ದಾಣದಲ್ಲಿ 115, ಮುಂಬೈ ವಿಮಾನ ನಿಲ್ದಾಣದಲ್ಲಿ 112, ದೆಹಲಿಯಲ್ಲಿ 109, ಚೆನ್ನೈನಲ್ಲಿ 38 ಮತ್ತು ಅಮೃತಸರದಲ್ಲಿ 11 ವಿಮಾನಗಳನ್ನು ರದ್ದುಗೊಳಿಸಲಾಗಿದೆ. ಮಂಗಳವಾರದಿಂದ, ಇಂಡಿಗೋ 2,000 ಕ್ಕೂ ಹೆಚ್ಚು ವಿಮಾನಗಳನ್ನು ರದ್ದುಗೊಳಿಸಿದೆ ಮತ್ತು ಇತರ ಹಲವು ವಿಮಾನಗಳನ್ನು ವಿಳಂಬಗೊಳಿಸಿದೆ, ಇದರಿಂದಾಗಿ ಪ್ರಯಾಣಿಕರು ವಿಮಾನ ನಿಲ್ದಾಣಗಳಲ್ಲಿ ಸಿಲುಕಿಕೊಂಡಿದ್ದಾರೆ. ಬಿಕ್ಕಟ್ಟನ್ನು ಮೇಲ್ವಿಚಾರಣೆ ಮಾಡಲು ಬಿಕ್ಕಟ್ಟು ನಿರ್ವಹಣಾ ಗುಂಪು ಅನ್ನು ರಚಿಸಿರುವುದಾಗಿ ಇಂಡಿಗೋ ಈ ಹಿಂದೆ ಹೇಳಿಕೆಯಲ್ಲಿ ತಿಳಿಸಿತ್ತು. ಪ್ರಯಾಣಿಕರು ಎದುರಿಸುತ್ತಿರುವ ಸವಾಲುಗಳನ್ನು ನಿಭಾಯಿಸಲು 'ಸಾಧ್ಯವಾದ ಎಲ್ಲವನ್ನೂ ಮಾಡುತ್ತಿದ್ದೇವೆ ಎಂದು ಇಂಡಿಗೋ ಹೇಳಿದೆ.

ನಾಗರಿಕ ವಾಯುಯಾನ ಮಹಾ ನಿರ್ದೇಶನಾಲಯವು (ಡಿಜಿಸಿಎ) ಕಳೆದ ವಾರ ನೂರಾರು ಇಂಡಿಗೋ ವಿಮಾನಯಾನಗಳ ರದ್ದತಿಗೆ ಕಾರಣವಾದ ಭಾರೀ ಪ್ರಮಾಣದ ಹಾರಾಟ ವ್ಯತ್ಯಯಗಳಿಗಾಗಿ ನಿಮ್ಮ ವಿರುದ್ಧ ಕ್ರಮವನ್ನು ಏಕೆ ಆರಂಭಿಸಬಾರದು ಎನ್ನುವುದರ ಕುರಿತು 24 ಗಂಟೆಗಳಲ್ಲಿ ವಿವರಣೆಯನ್ನು ಸಲ್ಲಿಸುವಂತೆ ಸೂಚಿಸಿ ಕಂಪೆನಿಯ ಸಿಇಒ ಪೀಟರ್ ಎಲ್ಬರ್ಸ್ ಅವರಿಗೆ ಶೋಕಾಸ್ ನೋಟಿಸ್ ನೀಡಿದೆ. ಸಿಇಒ ಆಗಿ ನೀವು ವಿಮಾನಯಾನ ಸಂಸ್ಥೆಯನ್ನು ಪರಿಣಾಮಕಾರಿಯಾಗಿ ನಿರ್ವಹಿಸುವುದು ನಿಮ್ಮ ಹೊಣೆಗಾರಿಕೆಯಾಗಿದೆ.

ಆದರೆ ವಿಶ್ವಾಸಾರ್ಹ ಕಾರ್ಯಾಚರಣೆಗಳನ್ನು ನಡೆಸಲು ಹಾಗೂ ಪ್ರಯಾಣಿಕರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸಕಾಲಿಕ ವ್ಯವಸ್ಥೆಗಳನ್ನು ಖಚಿತಪಡಿಸಿಕೊಳ್ಳುವ ನಿಮ್ಮ ಕರ್ತವ್ಯದಲ್ಲಿ ನೀವು ವಿಫಲಗೊಂಡಿದ್ದೀರಿ ಎಂದು ನೋಟಿಸ್‌ನಲ್ಲಿ ಹೇಳಲಾಗಿದೆ.

ಹೊಸದಾಗಿ ಅನುಮೋದಿಸಲಾದ ವಿಮಾನ ಕರ್ತವ್ಯ ಸಮಯ ಮಿತಿ (ಎಫ್‌ಡಿಟಿಎಲ್) ಮಾನದಂಡಗಳ ಅನುಷ್ಠಾನಕ್ಕೆ ಅಗತ್ಯವಾದ ಸಾಕಷ್ಟು ವ್ಯವಸ್ಥೆಗಳನ್ನು ಮಾಡುವಲ್ಲಿ ಇಂಡಿಗೋ ವಿಮಾನ ಸಂಸ್ಥೆ ವಿಫಲವಾಗಿರುವುದೇ ಬಿಕ್ಕಟ್ಟಿಗೆ ಪ್ರಮುಖ ಕಾರಣ ಎಂದು ಡಿಜಿಸಿಎ ತನ್ನ ನೋಟಿಸ್‌ನಲ್ಲಿ ತಿಳಿಸಿದೆ.

## ನ್ಯಾಯಕ್ಕಾಗಿ ಮೋದಿಗೆ ಪಾಕ್ ಮಹಿಳೆ ಮನವಿ



**ಇಸ್ಲಾಮಾಬಾದ್:** ಪಾಕಿಸ್ತಾನದಲ್ಲಿ ವಾಸಿಸುತ್ತಿರುವ ನಿಕಿತಾ ನಾಗದೇವ್ ಎಂಬ ಮಹಿಳೆ ಪ್ರಧಾನಿ ನರೇಂದ್ರ ಮೋದಿಯವರಿಂದ ನ್ಯಾಯಕ್ಕಾಗಿ ಬೇಡಿಕೊಳ್ಳುವ ವೀಡಿಯೊವನ್ನು ಬಿಡುಗಡೆ ಮಾಡಿದ್ದಾರೆ. ನಿಕಿತಾ ತಮ್ಮ ಪತಿ ವಿಕ್ರಮ್ ನಾಗದೇವ್ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿದ್ದಾರೆ. ಸರ್ಕಾರದಿಂದ ನ್ಯಾಯ ಸಿಗದಿದ್ದರೆ, ಕಾನೂನು ಮಾರ್ಗವನ್ನು ಹುಡುಕುವುದಾಗಿ ಮಹಿಳೆ ವೀಡಿಯೊವನ್ನು ಬಿಡುಗಡೆ ಮಾಡಿದ್ದಾರೆ.

ನಿಕಿತಾ ಮತ್ತು ವಿಕ್ರಮ್ ಪಾಕಿಸ್ತಾನದಲ್ಲಿ ಜನವರಿ 26, 2020 ರಂದು ಹಿಂದೂ ಪದ್ಧತಿಗಳ ಪ್ರಕಾರ ವಿವಾಹವಾಗಿದ್ದಾರೆ. ಮದುವೆಯಾದ ಒಂದು ತಿಂಗಳ ನಂತರ ತನ್ನ ಪತಿ ತನ್ನನ್ನು ಭಾರತಕ್ಕೆ ಕರೆತಂದಿದ್ದಾನೆ ಎಂದು ಮಹಿಳೆ ಹೇಳಿದ್ದಾರೆ. ನಿಕಿತಾ, "ವೀಸಾದಲ್ಲಿನ ತಾಂತ್ರಿಕ ಸಮಸ್ಯೆಯನ್ನು ಉಲ್ಲೇಖಿಸಿ, ಜುಲೈ 9, 2020 ರಂದು ಅಟ್ಟಾರಿ ಗಡಿಯಿಂದ ಕರಾಚಿಗೆ ವಾಪಸ್ ಕಳುಹಿಸಿದ್ದಾನೆ. ಅಂದಿನಿಂದ ತಮ್ಮನ್ನು ಭಾರತಕ್ಕೆ ಮರಳಿ ಕರೆತರಲು ಎಂದಿಗೂ ಪ್ರಯತ್ನಿಸಲಿಲ್ಲ. ನಾನು ಅವರನ್ನು ಭಾರತಕ್ಕೆ ಮರಳಿ ಕರೆಸುವಂತೆ ಕೇಳುತ್ತಲೇ ಇದ್ದೆ. ದಾಖಲೆಗಳನ್ನು ಸಿದ್ಧಪಡಿಸುವಲ್ಲಿ ಅವನು ನನ್ನೊಂದಿಗೆ ಸಹಕರಿಸಲಿಲ್ಲ" ಎಂದು ಪತಿಯ ವಿರುದ್ಧ ಆರೋಪ ಮಾಡಿದ್ದಾರೆ.

ಮಹಿಳೆ ತನ್ನ ಪತಿ ಎರಡನೇ ಮದುವೆಗೆ ಯೋಜನೆ ರೂಪಿಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ವಿಕ್ರಮ್ ಭಾರತಕ್ಕೆ ಬಂದು ದೆಹಲಿಯ ಯುವತಿ ಶಿವಾಂಗಿ ಜೊತೆ ನಿಶ್ಚಿತಾರ್ಥ ಮಾಡಿಕೊಂಡಿದ್ದರು. ಮಾರ್ಚ್ 2026 ರಲ್ಲಿ ವಿಕ್ರಮ್ ಮದುವೆಯಾಗಲಿದ್ದಾರೆ ಎಂದು ಆಕೆಗೆ ತಿಳಿದುಬಂದಿದೆ. ಈ ಬಗ್ಗೆ ತನ್ನ ಕುಟುಂಬ ಮತ್ತು ಅಧಿಕಾರಿಗಳಿಗೆ ತಿಳಿಸಿದ್ದೆ, ಆದರೆ ಏನೂ ಕ್ರಮ ಜರುಗಿಸಿಲ್ಲ ಎಂದು ಅವರು ಹೇಳಿದ್ದಾರೆ .ಮದುವೆಯ ನಂತರ ಪಾಕಿಸ್ತಾನದಿಂದ ತನ್ನ ಅತ್ತೆಯಂದಿರ ಮನೆಗೆ ಹಿಂದಿರುಗಿದಾಗ, ತನ್ನ ಅತ್ತೆಯಂದಿರ ನಡವಳಿಕೆ ಬದಲಾಗಿತ್ತು ಎಂದು ನಿಕಿತಾ ಹೇಳಿದ್ದಾರೆ.

ಕರಾಚಿಯಿಂದ ವೀಡಿಯೊ ಬಿಡುಗಡೆ ಮಾಡಿದ ನಿಕಿತಾ, ಇಂದು ನ್ಯಾಯ ಸಿಗದಿದ್ದರೆ, ವಿವಾಹಿತ ಮಹಿಳೆಯರು ನ್ಯಾಯದ ಮೇಲಿನ ನಂಬಿಕೆಯನ್ನು ಕಳೆದುಕೊಳ್ಳುತ್ತಾರೆ ಎಂದು ಹೇಳಿದ್ದಾರೆ. ತನ್ನಂತಹ ಅನೇಕ ಹುಡುಗಿಯರು ತಮ್ಮ ಅತ್ತೆ-ಮಾವನ ಮನೆಗಳಲ್ಲಿ ದೈಹಿಕ ಕಿರುಕುಳಕ್ಕೆ ಬಲಿಯಾಗುತ್ತಿದ್ದಾರೆ. ಈ ವೀಡಿಯೊದ ಮೂಲಕ, ನ್ಯಾಯಕ್ಕಾಗಿ ತನ್ನ ಹೋರಾಟದಲ್ಲಿ ಎಲ್ಲರೂ ತನ್ನೊಂದಿಗೆ ನಿಲ್ಲುವಂತೆ ಅವರು ವಿನಂತಿಸುತ್ತಿದ್ದಾರೆ. ತನ್ನ ಪತಿಯನ್ನು ಭಾರತದಿಂದ ಗಡೀಪಾರು ಮಾಡುವಂತೆ ಅವರು ಪ್ರಧಾನಿ ಮೋದಿಯವರನ್ನು ಒತ್ತಾಯಿಸಿದ್ದಾರೆ.

## ಶೇಖ್ ಹಸೀನಾ ಭಾರತದಲ್ಲಿರುವುದು ವೈಯಕ್ತಿಕ ನಿರ್ಧಾರ: ಎಸ್. ಜೈಶಂಕರ್

**ನವದೆಹಲಿ:** ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಭಾರತದಲ್ಲಿ ವಾಸ್ತವ್ಯ ಹೂಡಿದ್ದು, ಅವರು ಪರಿಸ್ಥಿತಿಗಳ ಪ್ರಭಾವದಿಂದ ನಮ್ಮ ದೇಶಕ್ಕೆ ಬಂದಿರಬಹುದು. ಅದು ಅವರ ವೈಯಕ್ತಿಕ ನಿರ್ಧಾರ ಎಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ಹೇಳಿದ್ದಾರೆ.



ಕಳೆದ ವರ್ಷ ಬಾಂಗ್ಲಾದೇಶದಲ್ಲಿ ನಡೆದ ವಿದ್ಯಾರ್ಥಿ ನೇತೃತ್ವದ ಪ್ರತಿಭಟನೆಯು ಹಿಂಸಾಚಾರಕ್ಕೆ ತಿರುಗಿದ ನಂತರ ನೂರಾರು ಮಂದಿ ಪ್ರಾಣ ಕಳೆದುಕೊಂಡು, ಸಾವಿರಾರು ಮಂದಿ ಗಾಯಗೊಂಡರು. ಪ್ರತಿಭಟನೆ ವಿರುದ್ಧ ಹಸೀನಾ ನೇತೃತ್ವದ ಸರ್ಕಾರ ಉಗ್ರವಾಗಿ ದಮನ ಕೈಗೊಂಡಿತು ಎಂದು ಆರೋಪಿಸಲಾಗಿದೆ.

ಈ ಸಂಬಂಧ ಅವರಿಗೆ ಢಾಕಾದ ವಿಶೇಷ ಕೋರ್ಟ್ ಮರಣದಂಡನೆ ಶಿಕ್ಷೆ ವಿಧಿಸಿತು. ಅವರು ಕಳೆದ ವರ್ಷವೇ ಭಾರತಕ್ಕೆ ಪಲಾಯನ ಮಾಡಿದ್ದರು.

ಶೇಖ್ ಹಸೀನಾ ಹಸ್ತಾಂತರಕ್ಕೆ ಬಾಂಗ್ಲಾದ ಮನವಿಯನ್ನು ನಿರಾಕರಿಸಲು ಭಾರತಕ್ಕೆ ಇದೆಯೇ ಅವಕಾಶ? ಬಾಂಗ್ಲಾ ಮಾಜಿ ಪ್ರಧಾನಿ ಹಸೀನಾ ಬಯಸುವಷ್ಟು ಕಾಲ ಭಾರತದಲ್ಲಿ ಉಳಿಯಬಹುದೇ ಎಂಬ ಪ್ರಶ್ನೆಗೆ, ಅದು ಒಂದು ವಿಭಿನ್ನ ವಿಚಾರ, ಅಲ್ಲವೇ? ಅವರು ಕೆಲವು ನಿರ್ದಿಷ್ಟ ಪರಿಸ್ಥಿತಿಗಳಲ್ಲಿ ಇಲ್ಲಿಗೆ ಬಂದಿದ್ದಾರೆ. ಆ ಪರಿಸ್ಥಿತಿಯು ಅವರ ಮೇಲೆ ಸ್ಪಷ್ಟವಾಗಿ ಪರಿಣಾಮ ಬೀರುತ್ತದೆ ಎಂದು ನಾನು ಭಾವಿಸುತ್ತೇನೆ. ಆದರೆ ಅದು ಕೂಡ ಅವರು (ಶೇಖ್ ಹಸೀನಾ) ತಮ್ಮ ಮನಸ್ಸನ್ನು ನಿರ್ಧರಿಸಬೇಕಾದ ವಿಷಯ ಎಂದು ಹೇಳಿದರು.

ಭಾರತ-ಬಾಂಗ್ಲಾದೇಶ ಸಂಬಂಧ ನವದೆಹಲಿ ಮತ್ತು ಢಾಕಾ ನಡುವಿನ ಸಂಬಂಧದ ಬಗ್ಗೆ ಮಾತನಾಡಿದ ಜೈಶಂಕರ್, ನೆರೆಯ ದೇಶದಲ್ಲಿ ವಿಶ್ವಾಸಾರ್ಹ ಪ್ರಜಾಪ್ರಭುತ್ವ ಪ್ರಕ್ರಿಯೆಯ ಅಗತ್ಯದ ಬಗ್ಗೆ ಭಾರತದ ನಿಲುವನ್ನು ಒತ್ತಿ ಹೇಳಿದರು.

ಬಾಂಗ್ಲಾದೇಶದ ಹಿಂದಿನ ರಾಜಕೀಯ ಸಮಸ್ಯೆಗಳನ್ನು ಉಲ್ಲೇಖಿಸಿದ ಜೈಶಂಕರ್, ಬಾಂಗ್ಲಾದೇಶದ ಜನರು, ವಿಶೇಷವಾಗಿ ಈಗ ಅಧಿಕಾರದಲ್ಲಿರುವವರು, ಈ ಹಿಂದೆ ಚುನಾವಣೆಗಳನ್ನು ಹೇಗೆ ನಡೆಸಲಾಗುತ್ತಿತ್ತು ಎಂಬುದರ ಬಗ್ಗೆ ಸಮಸ್ಯೆಯನ್ನು ಹೊಂದಿದ್ದರು ಎಂದು ನಾವು ಕೇಳಿದ್ದೇವೆ. ಹಾಗಾದರೆ, ಸಮಸ್ಯೆ ಚುನಾವಣೆಯದ್ದೇ ಆಗಿದ್ದರೆ, ಮೊದಲ ಕೆಲಸ ನ್ಯಾಯಸಮ್ಮತವಾದ ಚುನಾವಣೆ ನಡೆಸುವುದಾಗಿರುತ್ತದೆ ಎಂದು ಹೇಳಿದರು. ದ್ವಿಪಕ್ಷೀಯ ಸಂಬಂಧಗಳ ಭವಿಷ್ಯದ ಬಗ್ಗೆ ಜೈಶಂಕರ್ ಆಶಾವಾದ ವ್ಯಕ್ತಪಡಿಸಿದರು. ಭಾರತವು ತನ್ನ ನೆರೆಯ ರಾಷ್ಟ್ರಕ್ಕೆ ಹೊಂದಿರುವ ಪ್ರಜಾಸತ್ತಾತ್ಮಕ ಆದ್ಯತೆಯನ್ನು ಒತ್ತಿ ಹೇಳಿದರು. ನಾವು ಬಾಂಗ್ಲಾದೇಶಕ್ಕೆ ಶುಭ ಹಾರೈಸುತ್ತೇವೆ.

ಪ್ರಜಾಪ್ರಭುತ್ವ ರಾಷ್ಟ್ರವಾಗಿ, ಯಾವುದೇ ಪ್ರಜಾಸತ್ತಾತ್ಮಕ ದೇಶವು ಪ್ರಜಾಸತ್ತಾತ್ಮಕ ಪ್ರಕ್ರಿಯೆಯ ಮೂಲಕ ಜನರ ಇಚ್ಛೆಯನ್ನು ಖಚಿತಪಡಿಸಿಕೊಳ್ಳುವುದನ್ನು ನೋಡಲು ಬಯಸುತ್ತದೆ ಎಂದು ನಾವು ಭಾವಿಸುತ್ತೇವೆ ಎಂದು ಹೇಳಿದರು.

## ಷೇರು ಮಾರುಕಟ್ಟೆ ಸ್ಪೇಸ್ ಎಕ್ಸ್ ಪ್ರವೇಶಿಸಲು ತಯಾರಿ

**ವಾಷಿಂಗ್ಟನ್:** ವಿಶ್ವದ ಅತ್ಯಂತ ಮೌಲ್ಯಯುತ ಖಾಸಗಿ ಕಂಪನಿಗಳಲ್ಲಿ ಒಂದಾದ ನಂತರ, ಎಲೋನ್ ಮಸ್ಕ್ ಅವರ ಬಾಹ್ಯಾಕಾಶ ತಂತ್ರಜ್ಞಾನ ಕಂಪನಿ ಸ್ಪೇಸ್ ಎಕ್ಸ್ ಈಗ ಷೇರು ಮಾರುಕಟ್ಟೆಯನ್ನು ಪ್ರವೇಶಿಸಲು ತಯಾರಿ ನಡೆಸುತ್ತಿದೆ. ಮಾರುಕಟ್ಟೆ ಮೂಲಗಳ ಪ್ರಕಾರ, ಸ್ಪೇಸ್‌ಎಕ್ಸ್‌ನ ಆರಂಭಿಕ ಸಾರ್ವಜನಿಕ ಕೊಡುಗೆ (ಐಪಿಒ) 2026 ರ ಅಂತ್ಯದ ವೇಳೆಗೆ ಸಂಭವಿಸಬಹುದು. ಅದಕ್ಕೂ ಮೊದಲು, ಕಂಪನಿಯು ತನ್ನ ಆಂತರಿಕ ಷೇರುಗಳನ್ನು ಮಾರಾಟ ಮಾಡುವ ಮೂಲಕ ತನ್ನ ಮೌಲ್ಯಮಾಪನವನ್ನು ಮತ್ತಷ್ಟು ಹೆಚ್ಚಿಸುವ ಯೋಜನೆಯಲ್ಲಿ ಕೆಲಸ ಮಾಡುತ್ತಿದೆ.



ವರದಿಗಳ ಪ್ರಕಾರ, ಸ್ಪೇಸ್‌ಎಕ್ಸ್ ಅಸ್ತಿತ್ವದಲ್ಲಿರುವ ಹೂಡಿಕೆದಾರರು ಮತ್ತು ಉದ್ಯೋಗಿಗಳಿಗೆ ಆಂತರಿಕ ಷೇರು ಮಾರಾಟದ ಮೂಲಕ ತಮ್ಮ ಪಾಲನ್ನು ಮಾರಾಟ ಮಾಡಲು ಅವಕಾಶ ನೀಡುತ್ತದೆ. ಈ ಕ್ರಮವು ಕಂಪನಿಯ ಮೌಲ್ಯಮಾಪನವನ್ನು $500 ಬಿಲಿಯನ್‌ನಿಂದ $750 ರಿಂದ $800 ಬಿಲಿಯನ್‌ಗೆ ಹೆಚ್ಚಿಸಬಹುದು. ಇದು ಸಂಭವಿಸಿದಲ್ಲಿ, ಸ್ಪೇಸ್‌ಎಕ್ಸ್ ವಿಶ್ವದ ಅತ್ಯಂತ ಮೌಲ್ಯಯುತ ಖಾಸಗಿ ಕಂಪನಿಯಾಗಬಹುದು.

ಆಂತರಿಕ ಷೇರು ಮಾರಾಟವು ಮೌಲ್ಯಮಾಪನಗಳನ್ನು ಹೆಚ್ಚಿಸುತ್ತದೆ.

ಬ್ಲೂಮ್‌ಬರ್ಗ್ ವರದಿಯ ಪ್ರಕಾರ, ಸ್ಪೇಸ್‌ಎಕ್ಸ್ ತನ್ನ ಕೆಲವು ಷೇರುದಾರರಿಗೆ ಖಾಸಗಿಯಾಗಿ ಷೇರುಗಳನ್ನು ಮಾರಾಟ ಮಾಡುವ ಅವಕಾಶವನ್ನು ನೀಡುವ ಬಗ್ಗೆ ಪರಿಗಣಿಸುತ್ತಿದೆ. ಟೆಂಡರ್ ಆಫರ್ ಎಂದು ಕರೆಯಲ್ಪಡುವ ಈ ಪ್ರಕ್ರಿಯೆಯು ಕಂಪನಿಯು ಸಾರ್ವಜನಿಕರೊಂದಿಗೆ ನೇರವಾಗಿ ವ್ಯವಹರಿಸುವ ಬದಲು ಸೀಮಿತ ಸಂಖ್ಯೆಯ ಹೂಡಿಕೆದಾರರೊಂದಿಗೆ ವ್ಯವಹರಿಸುವುದನ್ನು ಒಳಗೊಂಡಿರುತ್ತದೆ. ಸಂಭಾವ್ಯ ಷೇರು ಬೆಲೆ ಪ್ರತಿ ಷೇರಿಗೆ $400 ಮೀರಬಹುದು ಎಂದು ಮೂಲಗಳು ಹೇಳುತ್ತವೆ.

ಈ ಬೆಲೆಯನ್ನು ಅಂತಿಮಗೊಳಿಸಿದರೆ, ಕಂಪನಿಯ ಒಟ್ಟು ಮೌಲ್ಯಮಾಪನವು $750 ರಿಂದ $800 ಬಿಲಿಯನ್ ವರೆಗೆ ತಲುಪಬಹುದು. ಈ ಅಂಕಿ ಅಂಶವು ಜುಲೈ 2024 ರಲ್ಲಿ ಸ್ಪೇಸ್‌ಎಕ್ಸ್ ಪ್ರತಿ ಷೇರಿಗೆ $212 ರಂತೆ ಸುಮಾರು $400 ಬಿಲಿಯನ್ ಮೌಲ್ಯಮಾಪನವನ್ನು ಸಾಧಿಸಿದಾಗ ಹಿಂದಿನ ನಿಧಿಯ ಸುತ್ತಿಗಿಂತ ಸುಮಾರು ಎರಡು ಪಟ್ಟು ಹೆಚ್ಚಾಗಿದೆ.

ವರದಿಯ ಪ್ರಕಾರ, ಸ್ಪೇಸ್‌ಎಕ್ಸ್‌ನ ನಿರ್ದೇಶಕರ ಮಂಡಳಿಯು ಟೆಕ್ಸಾಸ್‌ನಲ್ಲಿರುವ ಅದರ ಸ್ಟಾರ್‌ಬೇಸ್ ಕೇಂದ್ರದಲ್ಲಿ ಆಂತರಿಕ ಷೇರು ಮಾರಾಟ ಮತ್ತು ಭವಿಷ್ಯದ ಬಂಡವಾಳ ಸಂಗ್ರಹಣೆ ತಂತ್ರಗಳನ್ನು ಚರ್ಚಿಸಲು ಪ್ರಮುಖ ಸಭೆಯನ್ನು ನಡೆಸಿತು. ಆದಾಗ್ಯೂ, ಕಂಪನಿಯು ಇನ್ನೂ ಐಪಿಒ ಅಥವಾ ಷೇರು ಮಾರಾಟದ ಕುರಿತು ಯಾವುದೇ ಅಧಿಕೃತ ಘೋಷಣೆಗಳನ್ನು ಮಾಡಿಲ್ಲ. ತಜ್ಞರು ಸ್ಪೇಸ್‌ಎಕ್ಸ್ ಸಾರ್ವಜನಿಕ ಮಾರುಕಟ್ಟೆಯನ್ನು ಹಂತ ಹಂತವಾಗಿ ಪ್ರವೇಶಿಸುವ ಮೊದಲು ತನ್ನ ಮೌಲ್ಯಮಾಪನವನ್ನು ಗರಿಷ್ಠಗೊಳಿಸಲು ನೋಡುತ್ತಿದೆ ಎಂದು ನಂಬುತ್ತಾರೆ, ಇದು ಐಪಿಒ ಮೇಲೆ ಗಮನಾರ್ಹ ಲಾಭವನ್ನು ಗಳಿಸಲು ಅನುವು ಮಾಡಿಕೊಡುತ್ತದೆ.

## ಮಸೀದಿ ಶಿಲಾನ್ಯಾಸಕ್ಕೆ ರಾಜಕೀಯ ಹತಾಶೆ ಕಾರಣ ಶತ್ರುಘ್ನ ಸಿನ್ಹಾ

**ಅಸನ್ಸೋಲ್:** ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಗೆ ಮುನ್ನ ಮುರ್ಷಿದಾಬಾದ್ ಜಿಲ್ಲೆಯಲ್ಲಿ ಅಯೋಧ್ಯೆಯ ಬಾಬರಿ ಮಸೀದಿ ಮಾದರಿಯಲ್ಲಿ ಮಸೀದಿ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿರುವುದು ರಾಜಕೀಯ ಹತಾಶೆಯ ವಾಸನೆಯನ್ನು ತೋರಿಸುತ್ತದೆ ಎಂದು ತೃಣಮೂಲ ಕಾಂಗ್ರೆಸ್ ಸಂಸದ ಶತ್ರುಘ್ನ ಸಿನ್ಹಾ ಹೇಳಿದ್ದಾರೆ.



ಡಿಸೆಂಬರ್ 6 ಅನ್ನು "ಸದ್ಭಾವನಾ ದಿವಸ್ ಎಂದು ಆಚರಿಸಲಾಗುತ್ತದೆ ಮತ್ತು ಈ ದಿನದಂದು ನಿಜವಾದ ಸದ್ಭಾವನೆ ಮತ್ತು ಉತ್ತಮ ವಾತಾವರಣ ಇರಬೇಕು ಎಂದು ಸಿನ್ಹಾ ಹೇಳಿದ್ದಾರೆ .ತಮ್ಮ ಕ್ಷೇತ್ರವಾದ ಅಸನ್ಸೋಲ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿನ್ಹಾ, ಬಂಗಾಳದಲ್ಲಿ ಈ ದಿನದಂದು ಅಯೋಧ್ಯೆಯಲ್ಲಿ ಬಾಬರಿ ಮಸೀದಿಯ ಮಾದರಿಯಲ್ಲಿ ಮಸೀದಿಗೆ ಅಡಿಪಾಯ ಹಾಕುವುದು ಮತ್ತು ಅಮಾನತುಗೊಂಡ ತೃಣಮೂಲ ಶಾಸಕ ಹುಮಾಯೂನ್ ಕಬೀರ್ ಜನರನ್ನು ಒಟ್ಟುಗೂಡಿಸುವುದು ರಾಜಕೀಯ ಹತಾಶೆಯ ಪರಿಣಾಮವಾಗಿದೆ ಎಂದು ಹೇಳಿದ್ದಾರೆ.

ಇದು ಕೆಲವು ಜನರ ರಾಜಕೀಯ ತಂತ್ರ ಅಥವಾ ರಾಜಕೀಯ ಹತಾಶೆ ಎಂದು ನಾನು ಭಾವಿಸುತ್ತೇನೆ ಮತ್ತು ನಿರ್ದಿಷ್ಟ ರಾಜಕೀಯ ಪಕ್ಷದ ಬೆಂಬಲವಿಲ್ಲದೆ

## ಮಾವೋವಾದಿಗಳ ಹಿಂಸಾಚಾರಕ್ಕೆ ನಲುಗಿದ ಗ್ರಾಮದಲ್ಲಿ ಬದಲಾವಣೆಯ ಗಾಳಿ; ಮೊದಲ ಬಾರಿಗೆ ಮೊಬೈಲ್ ನೆಟ್‌ವರ್ಕ್ ಸಂಪರ್ಕ

**ರಾಯ್‌ಪುರ:** ಒಂದು ಕಾಲದಲ್ಲಿ ಮಾವೋವಾದಿಗಳ ಹಿಂಸಾಚಾರದಿಂದ ನಲುಗಿ ಹೋಗಿ ಭಯ ಮತ್ತು ಪ್ರತ್ಯೇಕತೆಯಿಂದ ಕೂಡಿದ್ದ ಛತ್ತೀಸ್‌ಗಢದ ಬಸ್ತಾರ್ ಪ್ರದೇಶದಲ್ಲಿ, ಈಗ ಬದಲಾವಣೆ ಕಂಡುಬರುತ್ತಿದೆ. ಬಿಜಾಪುರ ಜಿಲ್ಲೆಯ ಕೊಂಡಪಲ್ಲಿ ಗ್ರಾಮಕ್ಕೆ ಮೊದಲ ಬಾರಿಗೆ ಮೊಬೈಲ್ ನೆಟ್‌ವರ್ಕ್ ಸಂಪರ್ಕ ದೊರೆತಿದ್ದು, ಹೊಸ ಕ್ರಾಂತಿ ಮೂಡಿದೆ. ಮಾತ್ರವಲ್ಲ ಈ ಪ್ರದೇಶದಲ್ಲಿ ಮಾವೋವಾದ ಅವನತಿಯತ್ತ ಸಾಗುತ್ತಿರುವುದು ಕೂಡ ಸ್ಥಳೀಯರಿಗೆ ಹೊಸ ಭರವಸೆ ತಂದಿದೆ.

ಗ್ರಾಮಸ್ಥರ ಮೊಬೈಲ್ ಫೋನ್‌ಗಳಲ್ಲಿ ಸಿಗ್ನಲ್ ಬಾರ್‌ಗಳು ಕಾಣಿಸಿಕೊಂಡ ತಕ್ಷಣ, ಆದಿವಾಸಿ ಕುಟುಂಬಗಳು ಸಂತಸ ವ್ಯಕ್ತಪಡಿಸಿದವು. ಸಾಂಪ್ರದಾಯಿಕ ಢೋಲ್ ಮತ್ತು ಮಂದರ್ ಡ್ರಮ್‌ಗಳನ್ನು ಬಾರಿಸುವ ಮೂಲಕ ಗ್ರಾಮಸ್ಥರು ಹೊಸ ತಂತ್ರಜ್ಞಾನವನ್ನು ಸ್ವಾಗತಿಸಿದರು. ವೃದ್ಧ ಗ್ರಾಮಸ್ಥರು ಭಕ್ತಿಯಿಂದ ಟವರ್ ಸ್ಪರ್ಶಿಸಿದರು. ಮಹಿಳೆಯರು ದೀಪಗಳನ್ನು ಬೆಳಗಿಸಿ ಪ್ರಾರ್ಥನೆ ಸಲ್ಲಿಸಿದರು. ಈ ದೃಶ್ಯವು ಸಮುದಾಯವು ದಶಕಗಳ ಕಾಲ ಕಾಯುತ್ತಿದ್ದ ಪರಿವರ್ತನೆಯ ಸಂಕೇತವಾಗಿತ್ತು.



ಆದಿವಾಸಿ ಬುಡಕಟ್ಟು ಮಂದಿ ತಮ್ಮ ಅಸ್ಮಿತೆಗಾಗಿ ಬಿರ್ಸಾ ಮುಂಡಾರಂತೆ ಹೋರಾಡಬೇಕಿದೆ: ಶಾಸಕ ಎಸ್.ಎನ್.ಸುಬ್ಬಾರೆಡ್ಡಿ

ತೆಲಂಗಾಣ-ಛತ್ತೀಸ್‌ಗಢ ಗಡಿಯಲ್ಲಿರುವ ಅರಣ್ಯ ಪ್ರದೇಶದ ಆಳದಲ್ಲಿರುವ ಕೊಂಡಪಲ್ಲಿ, ರಸ್ತೆಗಳು, ವಿದ್ಯುತ್ ಮತ್ತು ಕುಡಿಯುವ ನೀರಿನಂತಹ ಮೂಲಭೂತ ಸೌಲಭ್ಯಗಳಿಂದ ಬಹಳ ಹಿಂದಿನಿಂದಲೂ ವಂಚಿತವಾಗಿದೆ. ಹೀಗಾಗಿ ಮೊಬೈಲ್ ಟವರ್ ಸ್ಥಾಪನೆಯು ಕೇವಲ ಮೂಲ ಸೌಕರ್ಯ ಸಂಪರ್ಕ ಮಾತ್ರವಲ್ಲ ಹಳ್ಳಿಯನ್ನು ಹೊರಗಿನ ಪ್ರಪಂಚದೊಂದಿಗೆ ಸಂಪರ್ಕಿಸುತ್ತದೆ.

ಹಲವು ವರ್ಷಗಳಿಂದ ಕೊಂಡಪಲ್ಲಿಯು ಸಂವಹನ, ಸಾರಿಗೆ ಮತ್ತು ಸಾರ್ವಜನಿಕ ಸೇವೆಗಳನ್ನು ಪಡೆಯುವಲ್ಲಿ ಸವಾಲುಗಳನ್ನು ಎದುರಿಸಿತು. ಕಷ್ಟದ ಭೂಪ್ರದೇಶ ಮತ್ತು ಮಾವೋವಾದಿಗಳ ಅಡಚಣೆಯಿಂದಾಗಿ ಆಡಳಿತ ತಂಡಗಳು ಈ ಪ್ರದೇಶವನ್ನು ತಲುಪಲು ಹೆಣಗಾಡಿದವು. ಆದರೆ ನಿರಂತರ ಭದ್ರತಾ ಕಾರ್ಯಾಚರಣೆಗಳು, ಸುಧಾರಿತ ಆಡಳಿತಾತ್ಮಕ ಸಂಪರ್ಕ ಮತ್ತು ಕೇಂದ್ರೀಕೃತ ಸರ್ಕಾರಿ ಮಧ್ಯಸ್ಥಿಕೆಗಳೊಂದಿಗೆ, ಈ ಪ್ರದೇಶವು ಅಭಿವೃದ್ಧಿಯತ್ತ ವೇಗವಾಗಿ ಸಾಗುತ್ತಿದೆ. ಗ್ರಾಮಸ್ಥರಿಗೆ, ಮೊಬೈಲ್ ಸಂಪರ್ಕವು ಕೇವಲ ಅನುಕೂಲಕ್ಕಾಗಿ ಮಾತ್ರವಲ್ಲ, ಹೊಸ ಜೀವನದ ಆರಂಭವನ್ನು ಸೂಚಿಸುತ್ತದೆ.

ಮುಖ್ಯಮಂತ್ರಿ ವಿಷ್ಣು ದೇವ್ ಸಾಯಿ ಅವರ ನೇತೃತ್ವದಲ್ಲಿ ಜಾರಿಗೆ ತರಲಾದ ನಿಯದ್ ನೆಲ್ಲಾ ನಾರ್ ಉಪಕ್ರಮವು ಈ ಬದಲಾವಣೆಯನ್ನು ತರುವಲ್ಲಿ ನಿರ್ಣಾಯಕ ಪಾತ್ರ ವಹಿಸಿದೆ. ಈ ಯೋಜನೆಯಡಿ, ಹೊಸದಾಗಿ ಸ್ಥಾಪಿಸಲಾದ 69 ಭದ್ರತಾ ಮತ್ತು ಆಡಳಿತ ಶಿಬಿರಗಳ ಸುತ್ತಲಿನ 403 ಹಳ್ಳಿಗಳಿಗೆ ಸೇವೆಗಳನ್ನು ತಲುಪಿಸಲಾಗುತ್ತಿದೆ. ಒಂಭತ್ತು ಇಲಾಖೆಗಳು ಸಮುದಾಯ ಸೇವೆಗಳನ್ನು ಒದಗಿಸುತ್ತಿದ್ದರೆ, 11 ಇಲಾಖೆಗಳು ವೈಯಕ್ತಿಕ ಪ್ರಯೋಜನ ಯೋಜನೆಗಳನ್ನು ನೇರವಾಗಿ ಕುಟುಂಬಗಳಿಗೆ ವಿಸ್ತರಿಸುತ್ತಿವೆ. ಬ್ಯಾಂಕಿಂಗ್, ಶಿಕ್ಷಣ, ಆರೋಗ್ಯ ರಕ್ಷಣೆ, ಪಡಿತರ ವಿತರಣೆ, ಸಂವಹನ ಮತ್ತು ಕುಡಿಯುವ ನೀರಿನಂತಹ ಪ್ರಮುಖ ಸೌಲಭ್ಯಗಳು ಈಗ ಹೆಚ್ಚಿನ ದಕ್ಷತೆಯೊಂದಿಗೆ ದೂರದ ಪ್ರದೇಶಗಳನ್ನು ತಲುಪುತ್ತಿವೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankri Temple Arch, Main Road, Davanagere, Karnataka-577004. Editor: **MALLIKARJUNAPPA H.G.**